ಸಂಪುಟ: 13 Volume | ಸಂಚಿಕೆ: 276 Issue | ಪುಟಗಳು 08 Pages | ಶನಿವಾರ 20 ಡಿಸೆಂಬರ್ 2025 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಮಾನವನೆದೆಯಲಿಆರದೆಉರಿಯಲಿ ದೇವರು ಹಚ್ಚಿದ ದೀಪ, ರೇಗುವ ದನಿಗೂ ರಾಗವು ಒಲಿಯಲಿ ಮೂಡಲ ಮಧುರಾಲಾಪ.

–ಲಕ್ಷ್ಮೀನಾರಾಯಣ ಭಟ್

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ವಿಶೇಷ ಚೇತನ ಮಕ್ಕಳಿಗೆ ವೈದ್ಯಕೀಯ ಶಿಬಿರ 6

ಡಾ.ಲಲಿತಾ ಹೊಸಪ್ಯಾಟಿ ಅವರಿಗೆ ಸತ್ಕಾರ 7

ಬಾರ್ ಓಪನ್ ಮಾಡದಂತೆ ಪ್ರತಿಭಟನೆ 8

## ಭೈರತಿಗೆ ಸಿಗದ ಜಾಮೀನು

**ಬೆಂಗಳೂರು:** ರೌಡಿ ಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ನಾಯಕ ಹಾಗೂ ಶಾಸಕ ಭೈರತಿ ಬಸವರಾಜು ಅವರಿಗೆ ಕರ್ನಾಟಕ ಹೈಕೋರ್ಟ್‌ನಲ್ಲಿ ಹಿನ್ನಡೆಯಾಗಿದೆ.



ಒಂದು ಕಡೆ ಕಠಿಣ ಕಾಯ್ದೆಯಿಂದ ಮುಕ್ತಿ ಸಿಕ್ಕರೂ, ಮತ್ತೊಂದೆಡೆ ನಿರೀಕ್ಷಣಾ ಜಾಮೀನು ಸಿಗದೆ ಬಂಧನದ ತೂಗುಗತ್ತಿ ಅವರ ತಲ ಮೇಲೆ ಮುಂದುವರಿದಿದೆ. ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ ತಮ್ಮನ್ನು ಬಂಧಿಸುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿ ಭೈರತಿ ಬಸವರಾಜು ಅವರು ಸಲ್ಲಿಸಿದ್ದ ಮಧ್ಯಂತರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಹೈಕೋರ್ಟ್ ಏಕಸದಸ್ಯ ಪೀಠ ವಜಾಗೊಳಿಸಿದೆ.

## ಮಕ್ಕಳಿಗೆ ಕಲಿಕಾ ಹಬ್ಬ ಸಹಕಾರಿ

**ವಿಜಯಪುರ:** ಚಟುವಟಿಕೆಗಳ ಮೂಲಕ ಸಂತಸದಾಯಕವಾಗಿ ಮಕ್ಕಳು ಕಲಿಯಲು ಕಲಿಕಾ ಹಬ್ಬ ಸಹಕಾರಿಯಾಗಿದೆ ಎಂದು ಸಮೂಹ ಸಂಪನ್ಮೂಲ ವ್ಯಕ್ತಿ ಕೆ.ಎಂ. ಗಳತಗಿ ಹೇಳಿದರು. ತಿಕೋಟಾ ತಾಲ್ಲೂಕಿನ ಕಳ್ಳಕವಟಗಿ ಗ್ರಾಮದ ವಾಲಿಕಾರ ವಸ್ತಿಯ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಗ್ರಾಮೀಣವಲಯ, ಸಮೂಹ ಸಂಪನ್ಮೂಲ ಕೇಂದ್ರ ವತಿಯಿಂದ ನಡೆದ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದ್ದಾರೆ.

## ಅನಿರ್ದಿಷ್ಟಾವಧಿಗೆಕಲಾಪಮುಂದೂಡಿಕೆ

**ನವದೆಹಲಿ:** ಸಂಸತ್ತು ಚಳಿಗಾಲದ ಅಧಿವೇಶನದ ಕೊನೆಯ ದಿನವಾದ ಶುಕ್ರವಾರ ಕಲಾಪ ಆರಂಭವಾದ ಸ್ವಲ್ಪ ಸಮಯದಲ್ಲೇ ಲೋಕಸಭೆಯ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ.



ಇಂದು ಲೋಕಸಭೆ ಕಲಾಪ ಆರಂಭವಾದ ಸ್ವಲ್ಪ ಸಮಯದ ನಂತರ ಸ್ಪೀಕರ್ ಓಂ ಬಿರ್ಲಾ ಅವರು ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿದರು. ಈ ಅಧಿವೇಶನದಲ್ಲಿ ಸದನವು ಶೇಕಡಾ 111 ರಷ್ಟು ಫಲಪ್ರದವಾಗಿತ್ತು ಎಂದು ಓಂ ಬಿರ್ಲಾ ತಿಳಿಸಿದ್ದಾರೆ.

## ಭೀಕರ ರಸ್ತೆ ಅಪಘಾತ 3 ಸಾವು

**ಕೊಪ್ಪಳ:** ಕೊಪ್ಪಳ– ಗಂಗಾವತಿ ಹೆದ್ದಾರಿಯ ಇಂದರಗಿ ಗ್ರಾಮದ ಬಳಿ ಮಹಿಂದ್ರಾ ಬುಲೆರೋ ಮತ್ತು ದ್ವಿಚಕ್ರ ವಾಹನ ಮುಖಾಮುಖಿ ಡಿಕ್ಕಿಯಾದ ಪರಿಣಾಮ ಬೈಕ್ ನಲ್ಲಿದ್ದ ಮೂವರು ಯುವಕರು ಸ್ಥಳದಲ್ಲೆ ಸಾವಿಗೀಡಾದ ಭೀಕರ ದುರಂತ ಸಂಭವಿಸಿದೆ. ಮೃತರನ್ನು ಗಂಗಾವತಿ ತಾಲೂಕಿನ ಶ್ರೀ ರಾಮನಗರದ (ದೇಸಾಯಿಕ್ಯಾಂಪ) ಆಶಿಫ್ (18) ಕೊಪ್ಪಳ ತಾಲೂಕಿನ ಹೊಸಹಳ್ಳಿಯ ವಾಜಿದ್ (17) ಮತ್ತು ರಾಜಾಹುಸೇನ್ (18) ಮೃತ ದುರ್ದೈವಿಗಳು ಎಂದು ಗುರುತಿಸಲಾಗಿದೆ. ದ್ವಿಚಕ್ರ ವಾಹನದ ಮೂಲಕ ಶ್ರೀರಾಮನಗರದಿಂದ ಹೊಸಹಳ್ಳಿ ಗ್ರಾಮಕ್ಕೆ ತೆರಳುತ್ತಿದ್ದ ವೇಳೆಯಲ್ಲಿ ಈ ದುರ್ಘಟನೆ ಸಂಭವಿಸಿದೆ, ಮುನಿರಾಬಾದ ಠಾಣೆಯ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ನಿಶಾನ್ ಆಫ್ ಇಥಿಯೋಪಿಯಾ

**ದಿಲ್ಲಿ:** ಮೂರು ರಾಷ್ಟ್ರಗಳ ಪ್ರವಾಸದ ಭಾಗವಾಗಿ, ಪ್ರಧಾನಿ ನರೇಂದ್ರಮೋದಿ, ಇಥಿಯೋಪಿಯಾ ದೇಶಕ್ಕೆ ಪ್ರಯಾಣಿಸಿದ್ದರು. ಅಲ್ಲಿ ಅವರನ್ನು ಉಡುಪಿ ಜಿಲ್ಲೆಯ ವಿಶಾಲ್ ಸುಂದರ ಪೂಜಾರಿ ಸ್ವಾಗತಿಸಿದ್ದಾರೆ. ವಿಶಾಲ್ ಅವರು, ಜಿಲ್ಲೆಯ ಕಾರ್ಕಳ ತಾಲೂಕು ನಿಟ್ಟೆ ಸಿರಿ ಮೈಲಾಜೆ ಮಹಾಬಲ ಸುವರ್ಣ ಅವರ ಅಳಿಯರಾಗಿದ್ದಾರೆ.



ಧಾನಿ ಮೋದಿಗೆ, ಇಥಿಯೋಪಿಯಾದಅತ್ಯುನ್ನತ ನಾಗರಿಕ ಗೌರವ 'ದಿ ಗ್ರೇಟ್ ಆನರ್ ನಿಶಾನ್ ಆಫ್ ಇಥಿಯೋಪಿಯಾ' ಪ್ರಶಸ್ತಿಯನ್ನು, ಅಲ್ಲಿನ ಪ್ರಧಾನಿ ಅಬಿ ಅಹ್ಮದ್ ಆಲಿ ಪ್ರಧಾನಮಾಡಿದ್ದರು. ದೂರದೃಷ್ಟಿಯ ನಾಯಕತ್ವಕ್ಕಾಗಿ ಮೋದಿಯವರಿಗೆ ಈ ಪ್ರಶಸ್ತಿಯನ್ನು ನೀಡಲಾಗಿದೆ ಎಂದು ಪ್ರಧಾನಿ ಅಹ್ಮದ್ ಆಲಿ ತಿಳಿಸಿದ್ದಾರೆ.

ಡಿಸೆಂಬರ್ ಹದಿನಾರರಂದು ಪ್ರಧಾನಿ ಇಥಿಯೋಪಿಯಾಗೆ ಆಗಮಿಸಿದ್ದರು. ಅಲ್ಲಿನ ಪ್ರತಿಷ್ಠಿತ ಶೆರಿಟಾನ್ ಆದ್ದಿಸ್ ಎನ್ನುವ ಹೋಟೆಲಿಗೆ ಪ್ರಧಾನಿ ಆಗಮಿಸಿದಾಗ, ಹಣಕಾಸು ವಿಭಾಗದನಿರ್ದೇಶಕರಾಗಿರುವ ವಿಶಾಲ್ ಪೂಜಾರಿ, ಪ್ರಧಾನಿ ಅವರನ್ನು ಆದರದಿಂದ ಬರಮಾಡಿಕೊಂಡಿದ್ದಾರೆ.

## ಹೆಸರು ಬದಲು, ಕೆಂಡಾಮಂಡಲ

**ಹೊಸದಿಲ್ಲಿ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು, ರೋಜ್‌ಗಾರ್ ಮತ್ತುಅಜೀವಿಕಾ ಮಿಷನ್ ಆಗಿ ವಿಕ್ಷಿತ್ ಭಾರತ್ ಗ್ಯಾರಂಟಿ ಎಂದು ಮರುನಾಮಕರಣ ಮಾಡುವ ಕೇಂದ್ರ ಸರ್ಕಾರದ ನಿರ್ಧಾರದ ವಿರುದ್ಧ, ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಕೆಂಡಾಮಂಡಲರಾಗಿದ್ದಾರೆ.



ರಾಜ್ಯಸಭೆಯಲ್ಲಿಮಾತನಾಡಿದಮಲ್ಲಿಕಾರ್ಜುನಖರ್ಗೆ, ಒಉಓಖಇಉಂ ಯೋಜನೆಯ ಮರುನಾಮಕರಣ ನಿರ್ಧಾರದ ಹಿಂದೆ ಪಿತೂರಿ ಅಡಗಿದೆ ಎಂದು ಗಂಭೀರ ಆರೋಪ ಮಾಡಿ, ಕೇಂದ್ರದ ವಿರುದ್ಧ ರಾಷ್ಟ್ರವ್ಯಾಪಿ ಪ್ರತಿಭಟನೆಯ ಎಚ್ಚರಿಕೆ ನೀಡಿದ್ದಾರೆ. MGNREGA ಯೋಜನೆಯಿಂದಮಹಾತ್ಮಗಾಂಧಿಹೆಸರುಕೈಬಿಟ್ಟಿರುವುದರ ಹಿಂದೆ ಷಡ್ಯಂತ್ರವಿದೆ. ಗಾಂಧಿ ಅವರ ಹೆಸರನ್ನು ಅಳಿಸುವ ಪಿತೂರಿ ಎಂದಿಗೂ ಸಫಲವಾಗುವುದಿಲ್ಲ. ಅಲ್ಲದೇ ಬಡವರ ಹಕ್ಕನ್ನು ಕಸಿದುಕೊಳ್ಳುವ ಕೇಂದ್ರ ಸರ್ಕಾರದ ನಿರ್ಧಾರದ ವಿರುದ್ಧ ಕಾಂಗ್ರೆಸ್ ದೇಶಾದ್ಯಂತ ಚಳುವಳಿ ಆರಂಭಿಸಲಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಗುಡುಗಿದ್ದಾರೆ.

# ನಾನೇ ಸಿಎಂ ತಾಳ ಹೈ ಮೇಳ

### ವರಿಷ್ಠರು ನನ್ನ ಪರ: ಮುಖ್ಯಮಂತ್ರಿ | ಹೈಕಮಾಂಡ್ ಮೌನ | ಡಿಸಿಎಂ ಟೆಂಪಲ್ ರನ್

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ

ಸಿಎಂ ಸಿದ್ದರಾಮಯ್ಯ ಅವರು ಪದೇ ಪದೆ ನಾನೇ ಸಿಎಂ ಆಗಿ ಮುಂದುವರಿಯುತ್ತೇನೆ ಎಂದು ಪುನರುಚ್ಚರಿಸುತ್ತಿದ್ದಾರೆ. ಸದನದಲ್ಲಿ ಇದೀಗ ಎರಡನೇ ಬಾರಿಯೂ ಸಿಎಂ ವಿಚಾರವಾಗಿ ತಮ್ಮ ನಿಲುವನ್ನು ಖಚಿತ ಪಡಿಸಿದ್ದಾರೆ. ಇದು ಪ್ರತಿಕ್ಷಗಳಿಗೆ ಉತ್ತರ ಕೊಡುವ ನೆಪದಲ್ಲಿ ಸಿದ್ದರಾಮಯ್ಯ ಅವರು ಡಿಕೆ ಶಿವಕುಮಾರ್ ಬಣಕ್ಕೆ ಸ್ಪಷ್ಟ ಸಂದೇಶ ರವಾನೆ ಮಾಡುತ್ತಿದ್ದಾರೆಯೇ ಎಂಬ ಪ್ರಶ್ನೆ ಇದೀಗ ಚರ್ಚೆಗೆ ಗ್ರಾಸವೊದಗಿಸಿದೆ.

**ಪ್ರತಿ ಪಕ್ಷಗಳ ಕಿಡಿನುಡಿ:** ಸದನದಲ್ಲಿ ಪದೇ ಪದೆ ನಾಯಕತ್ವ ಬದಲಾವಣೆ ವಿಚಾರವನ್ನು ಬಿಜೆಪಿ ನಾಯಕರು ಕೆಣಕುತ್ತಿದ್ದರು. ಐದು ವರ್ಷ ನಾನೇ ಸಿಎಂ ಎಂದು ಸ್ಪಷ್ಟವಾಗಿ ಹೇಳಿ ಎಂದು ಕಾಲೆಳೆಯುತ್ತಿದ್ದರು. ಎರಡು ಬಾರಿಯೂ ಸಿದ್ದರಾಮಯ್ಯ ವಿಪಕ್ಷಗಳ ಕೆಣಕುವ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ನೀಡಿ ನಾನೇ ಸಿಎಂ ಎಂದು ಘಂಟಾಘೋಷವಾಗಿ ಸಾರುತ್ತಿದ್ದಾರೆ.

**ತಮ್ಮ ನಿಲುವು ಖಚಿತ:** ವಿಪಕ್ಷಗಳ ಪ್ರಶ್ನೆಗಳ ಸಂದರ್ಭವನ್ನು ಸೂಕ್ತ ರೀತಿಯಲ್ಲಿ ಬಳಸುತ್ತಿರುವ ಸಿದ್ದರಾಮಯ್ಯ ಎರಡು ಸಲ ಸಿಎಂ ಸ್ಥಾನದ ವಿಚಾರ, ತಮ್ಮ ನಿಲುವು ಏನು ಎಂಬುವುದನ್ನು ತಿಳಿಸಿದ್ದಾರೆ. ಅಧಿವೇಶನದ ಕೊನೆಯ ದಿನವೂ ಸಿದ್ದರಾಮಯ್ಯ ಅದೇ ಮಾತನ್ನು ಪುನರುಚ್ಚರಿಸಿದ್ದಾರೆ. ಹೈಕಮಾಂಡ್ ನನ್ನ ಪರವಾಗಿ ಇದೆ ಎಂದು ಸ್ಪಷ್ಟಪಡಿಸಿದ್ದಾರೆ.



### ಡಿಕೆಶಿ ಕ್ಯಾಂಪ್ ಕೂಲ್‌ಕೂಲ್..!

ಇತ್ತ ಸಿದ್ದರಾಮಯ್ಯ ಅವರು ಸಿಎಂ ನಾನೇ ಎಂದು ಗುಡುಗುತ್ತಿದ್ದರೆ ಅತ್ತ ಡಿಕೆ ಶಿವಕುಮಾರ್ ಬಣ ಮಾತ್ರ ಕೂಲಾಗಿದೆ. ಪ್ರತಿಪಕ್ಷಗಳು ಈ ಬಗ್ಗೆ ಬಿಡುವ ಮಾತಿನ ಬಣಗಳಿಗೆ ಉತ್ತರ ಕೊಡದೆ ಡಿಕೆಶಿ ಬಣ ಮೌನಕ್ಕೆ ಶರಣಾಗಿದೆ. ಸದನದ ಹೊರಗಡೆ ಡಿಕೆಶಿ ಬಣದ ಇಕ್ಬಾಲ್ ಹುಸೇನ್ ಸೇರಿ ಒಂದಿಬ್ಬರು ಶಾಸಕರು, ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದರು.

### ಆಸೂಚನೆನನಗೆಗೊತ್ತಿಲ್ಲ

ಸಿಎಂ ಸದನದಲ್ಲಿ ಮುಂದಿನ ದಿನಗಳಲ್ಲೂ ನಾನೇ ಸಿಎಂ ಎಂದು ಹೇಳಿಕೆ ನೀಡಿರುವ ವಿಚಾರವಾಗಿ ಯತಿಂದ್ರ ಸಿದ್ದರಾಮಯ್ಯ ಮಾತನಾಡಿ, ಸಿಎಂ ಅವರಿಗೆ ಹೈಕಮಾಂಡ್ ಏನು ಸೂಚನೆ ಕೊಟ್ಟಿದ್ದಾರೆ ಗೊತ್ತಿಲ್ಲ. ಅದನ್ನು ನೀವು ಸಿಎಂ ಅವರನ್ನೇ ಕೇಳಬೇಕು. ಹೈಕಮಾಂಡ್ ಸೂಚನೆ ಪಾಲಿಸೋದಾಗಿ ಸಿಎಂ, ಡಿಸಿಎಂ ಹೇಳಿದ್ದಾರೆ ಎಂದಿದ್ದಾರೆ.

### ಪರಮೇಶ್ವರ್ ಸಿಎಂ ಆಗಲಿ

ಗೃಹಸಚಿವಡಾ.ಜಿ.ಪರಮೇಶ್ವರ್ ಅವರನ್ನು ಈ ರಾಜ್ಯದ ಮುಖ್ಯಮಂತ್ರಿಗಳಾಗಿ ನೇಮಕ ಮಾಡುವಂತೆ ಕಾಂಗ್ರೆಸ್ ಹೈ ಕಮಾಂಡ್‌ಗೆ ತುಮಕೂರು ಜಿಲ್ಲೆಯ ವಿವಿಧ ಮಠಾಧೀಶರು ಒತ್ತಾಯಿಸಿರುವುದು ಹೊಸ ಬೆಳವಣಿಗೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿವಿಧ ಮಠಾಧಿಪತಿಗಳು, ಪರಮೇಶ್ವರ್ ಅವರು ಎಂಟು ವರ್ಷಗಳ ಕಾಲ ಕೆಪಿಸಿಸಿ ಅಧ್ಯಕ್ಷರಾಗಿದ್ದಾರೆ.

### ಸ್ಪರ್ಧೆಗೆಬಿದ್ದಡಿನ್ನರ್‌ಪಾರ್ಟಿ

ಇತ್ತ ಸಿಎಂ ಬಣ ಔತಣ ಕೂಟಕ್ಕೆ ಪ್ರತಿಯಾಗಿ ಬೆಳಗಾವಿಯ ಹೊರವಲಯದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಡಿನ್ನರ್ ಪಾರ್ಟಿ ಏರ್ಪಡಿದ್ದರು. 30ಕ್ಕೂ ಹೆಚ್ಚು ಶಾಸಕರು ಭಾಗಿಯಾಗಿದ್ದರು. ವಿಶೇಷವೆಂದರೆ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ನಡೆಯುತ್ತಿರುವುದರಿಂದ ಶಾಸಕರಿಗೆ ಭೋಜನಕೂಟವನ್ನು ನಡೆಸಲಾಗಿದೆ ಎನ್ನಲಾಗುತ್ತಿದೆ.

### ತ್ಯಾಗ ಮಾಡೋದು ಬೇಡ?

ಸಚಿವ ಸತೀಶ್ ಜಾರಕಿಹೊಳಿಯವರು ಆಯೋಜಿಸಿದ್ದ ಔತಣಕೂಡಲ್ಲಿ ಸಿಎಂ ಸಿದ್ದರಾಮಯ್ಯ ಅವರು ಭಾಗಿಯಾಗಿರುವುದು ಕುತೂಹಲ ಹೆಚ್ಚಿಸಿದೆ. ಸಚಿವರಾದ ಪರಮೇಶ್ವರ್, ಮಹಾದೇವಪ್ಪ, ಜಮೀರ್ ಅಹ್ಮದ್, ಎಂಸಿ ಸುಧಾಕರ್, ಶಾಸಕ ಎಎಸ್ ಪೊನ್ನಣ್ಣ ಹಾಜರಿದ್ದು, ಸಿಎಂ ಪಟ್ಟ ತ್ಯಾಗಮಾಡಬಾರದು ಎಂದು ವಿನಂತಿಸಿರುವುದಾಗಿ ತಿಳಿದು ಬಂದಿದೆ.

## ತಾಂತ್ರಿಕದೋಷ, ತುರ್ತು ಭೂಸ್ಪರ್ಶ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಶುಕ್ರವಾರ ಮಧ್ಯಾಹ್ನ ಬೆಳಗಾವಿಯಿಂದ ಬೆಂಗಳೂರಿಗೆ ಬರುತ್ತಿರುವಾಗ ಇಂಧನ ಸಚಿವ ಕೆಜೆ ಜಾರ್ಜ್ ಇದ್ದ ಹೆಲಿಕ್ಯಾಪ್ಟರ್ ತಾಂತ್ರಿಕ ದೋಷದಿಂದ ತುರ್ತು ಭೂಸ್ಪರ್ಶ ಮಾಡಿದೆ.



ಬೆಂಗಳೂರಿಗೆ ಬರುವಾಗ ಪೈಲೆಟ್ ಹೆಲಿಕ್ಯಾಪ್ಟರ್ ನಲ್ಲಿ ದೋಷ ಕಂಡು ಅದನ್ನು ಚಿಕ್ಕಮಂಗಳೂರಿನ ಬಳಿ ತುರ್ತು ಭೂಸ್ಪರ್ಶ ಮಾಡಿದ್ದಾರೆ. ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ ಮತ್ತು ಸಚಿವರು ಸುರಕ್ಷಿತರಾಗಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಸಿಂಗಲ್ ಇಂಜಿನ್ ಹೆಲಿಕ್ಯಾಪ್ಟರ್ ಬೆಂಗಳೂರು ಜೊತೆ ಬರುವಾಗ ಬಲವಾದ ಗಾಳಿ ಮತ್ತು ಪ್ರತಿ–ಕೂಲ ಹವಾಮಾನದಿಂದ ಮುಂದೆ ಸಾಗದೆ ಹತ್ತಿರದ ಪ್ರದೇಶದಲ್ಲಿ ಚಿಕ್ಕಮಂಗಳೂರು ಬಳಿಯ ಖಾಲಿ ಜಮೀನಲ್ಲಿ ಸುರಕ್ಷಿತವಾಗಿ ಇಳಿಸಿದ್ದಾರೆ.

## ಸರ್ಕಾರದಿಂದ ರಾಜ್ಯ ಖಜಾನೆ ಲೂಟಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಹೈಕಮಾಂಡ್ ತೃಪ್ತಿಪಡಿಸಲು ಕಾಂಗ್ರೆಸ್ ಸರ್ಕಾರ ರಾಜ್ಯದ ಖಜಾನೆಯನ್ನು ಲೂಟಿ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಗುರುವಾರ ಆರೋಪಿಸಿದ್ದಾರೆ.



ಬೆಳಗಾವಿಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿ, ಹೈಕಮಾಂಡ್ ತೃಪ್ತಿಪಡಿಸಲು ರಾಜ್ಯ ಸರ್ಕಾರ ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿದೆ. ರಾಜ್ಯವು ಕಾಂಗ್ರೆಸ್ ಹೈಕಮಾಂಡ್‌ಗೆ ಎಟಿಎಂ ಆಗಿ ಮಾರ್ಪಟ್ಟಿದೆ, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ಹಣವನ್ನು ಕಳುಹಿಸಲಾಗಿದೆ ಎಂದು ಟೀಕಿಸಿದ್ದಾರೆ. ಹೈಕಮಾಂಡ್ ತೃಪ್ತಿ ಪಡಿಸಲು ಗುತ್ತಿಗೆದಾರರ ಬಳಿ ಕಮಿಷನ್ ಪಡೆಯುವಂತಾಗಿದೆ. ಗುತ್ತಿಗೆದಾರರ ಸಂಘ ಕೂಡ ಈ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಪತ್ರ ಬರೆದಿದ್ದಾರೆ. ಭ್ರಷ್ಟಾಚಾರ ಬಿಟ್ಟರೆ ರಾಜ್ಯದಲ್ಲಿ ಏನೂ ಅಭಿವೃದ್ಧಿ ಆಗ್ತಿಲ್ಲ ಎಂದು ಕಿಡಿಕಾರಿದ್ದಾರೆ.

## ಮಕ್ಕಳಿಗೆ ಅಧಿವೇಶನ ಭಾಗ್ಯ



• ಮಲ್ಲಮ್ಮ ನುಡಿ ವಾರ್ತೆ ಕೂಡ್ಲಿಗಿ

ಭಾರತ ಸಂವಿಧಾನವು ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿ ನೀಡಿದೆ, ಇಂತಹ ಶಿಕ್ಷಣವನ್ನು ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ದೇವಾಲಯ ನೋಡುವ ಸೌಭಾಗ್ಯವನ್ನು ದೊರಕಿಸಲಾಗಿದೆ. ಕಾರಣ ಇಂದಿನ ಮಕ್ಕಳೇ ನಾಳೆಯ ಪ್ರಜೆಗಳು, ಪ್ರಜೆಗಳೇ ಪ್ರಜಾಪ್ರಭುತ್ವದ ಅಡಿಗಲ್ಲು ಎನ್ನುತ್ತಾರೆ ಶಾಸಕ ಡಾ. ಎನ್ ಟಿ ಶ್ರೀನಿವಾಸ್. ಬೆಳಗಾವಿ

ಸುವರ್ಣ ವಿಧಾನಸೌಧದಲ್ಲಿ, ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಭಾಗವಹಿಸಿದ್ದ ಸಂದರ್ಭದಲ್ಲಿ ಅವರು ಪತ್ರಿಕೆ ಜೊತೆ ಮಾತನಾಡಿದ್ದಾರೆ.

ಕೂಡ್ಲಿಗಿ ತಾಲೂಕಿನ ಹಾರಕಬಾವಿ ಗ್ರಾಮದ, ಶ್ರೀ ಚೌಡೇಶ್ವರಿ ಪ್ರೌಢಶಾಲೆ ಹಾರಕಬಾವಿ ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿ ವರ್ಗದವರಿಗೆ, ಬೆಳಗಾವಿಯ ಚಳಿಗಾಲದ ಅಧಿವೇಶನವನ್ನು ವೀಕ್ಷಿಸಲು, ತಾವು ಅವಕಾಶ ಒದಗಿಸಿಕೊಟ್ಟಿರುವುದರ ಬಗ್ಗೆ ಸಂತಸ ಹಂಚಿಕೊಂಡಿದ್ದಾರೆ.

ವಿಶೇಷ ಏನೆಂದರೆ, ಕ್ಷೇತ್ರದಿಂದ ಅಧಿವೇಶನ ವೀಕ್ಷಿಸುವ ಸಲುವಾಗಿ ಆಗಮಿಸುವ ವಿದ್ಯಾರ್ಥಿಗಳ ಎಲ್ಲಾ ವೆಚ್ಚವನ್ನು, ಶಾಸಕರು ತಮ್ಮ ಸ್ವಂತ ಖರ್ಚಿನಲ್ಲಿ ವಿದ್ಯಾರ್ಥಿಗಳಿಗೆ ಸದನದ ಕಲಾಪ ವೀಕ್ಷಿಸುವ 'ಸೌಭಾಗ್ಯ' ಒದಗಿಸಿದ್ದಾರೆ.

## ಲೋಹಿಯ ಪ್ರಶಸ್ತಿ ಪ್ರದಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಿಸ್ವಾರ್ಥಸೇವಾಮನೋಭಾವನೆಯಿಂದ ಕೆಲಸ ಮಾಡುವವರ ಸಂಖ್ಯೆ ವಿರಳವಾಗಿದೆ. ಅಂಥವರನಡುವೆ ಶಿವಾನಂದತಗಡೂರು ಅವರು ವಿಭಿನ್ನವಾಗಿಗಮನಸೆಳೆಯುವ ಕೆಲಸ ಮಾಡುತ್ತಿರುವುದು ಅಭಿನಂದನೀಯ ಎಂದು ಗಣ್ಯರು ಶ್ಲಾಘಿಸಿದರು. ರೈತ ಕುಟುಂಬದಿಂದಬಂದತಗಡೂರು ಅವರು ರೈತ ಮತ್ತು ಜನಪರ ಚಳವಳಿಯಲ್ಲಿಗುರುತಿಸಿಕೊಳ್ಳುತ್ತಲೇ ಪತ್ರಕರ್ತರಾಗಿರೂಪುಗೊಂಡಿದ್ದು, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಚುಕ್ಕಾಣಿ ಹಿಡಿದು, ಆ ಮೂಲಕ ಪತ್ರಕರ್ತರ ಸಮುದಾಯಕ್ಕೆ ನೀಡುತ್ತಿರುವ ಸೇವೆ ಅನನ್ಯವಾದದ್ದು ಎಂದು ಸಮಾರಂಭದಲ್ಲಿ ಸ್ಮರಿಸಿ ಅಭಿನಂದಿಸಲಾಯಿತು.



## ನೇಗಿಲ ಯೋಗಿಯ ಮಣ್ಣಿನ ಹಬ್ಬ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬೀದರ್ ಜಿಲ್ಲಾದ್ಯಂತ ಎಳ್ಳ ಅಮವಾಸೆ ಅಂದ್ರೆ ರೈತನಿಗೆ ಕೇವಲ ಒಂದು ಹಬ್ಬ ಅಲ್ಲ. ಅದು ಮಣ್ಣಿನ ಜೊತೆಗಿನ ಆಳವಾದ ನಂಟು, ದೇವರ ಮೇಲೆ ಇರುವ ಅಚಲ ನಂಬಿಕೆ, ಈ ದಿನ ಬಂದರೆ ಹಳ್ಳಿಗಳಲ್ಲಿ ಬೇರೆ ಬೇರೆ ರಂಗು, ಬೇರೆದೇ ಚೈತನ್ಯ ಕಾಣಸಿಗುತ್ತದೆ. ಬೆಳಗ್ಗೆಯೇ ರೈತನ ಮನೆಯ ಮುಂದೆ ಬಂಡಿ ಸಿದ್ಧವಾಗಿರುತ್ತದೆ. ಬಜ್ಜಿ, ರೊಟ್ಟಿ, ಅಂಬಲಿ, ಚಟ್ನಿ, ತರಕಾರಿ ಸೇರಿದಂತೆ ಮನೆಯಲ್ಲೇ ತಯಾರಿಸಿದ ಆಹಾರ ಪದಾರ್ಥಗಳನ್ನು ಬುತ್ತಿ ಕಟ್ಟಿ, ಮನೆಯ ಎಲ್ಲ ಜನ ಮಕ್ಕಳಿಂದ ಹಿಡಿದು ಅಜ್ಜ ಅಜ್ಜಿ ತನಕ ಒಟ್ಟಿಗೆ ಬಂಡಿಗೆ ಏರಿ ತಮ್ಮ ತಮ್ಮ ಹೊಲಗಳ ಕಡೆ ಹೊರಡುತ್ತಾರೆ. ಹೊಲ ತಲುಪಿದ ನಂತರ ಮೊದಲಿಗೆ ರೈತ ಆರಾಧ್ಯ ದೇವರಿಗೆ ಹಾಗೂ ಭೂಮಿ ತಾಯಿಗೆ ಭಕ್ತಿಯಿಂದ ಪೂಜೆ ಸಲ್ಲಿಸುತ್ತಾರೆ. ಹೊಲದಲ್ಲೇ ಬೆಳೆದ ದೇಶಿ ಕಳಿಕೆಯಿಂದ ಸಣ್ಣ ಗುಡಿಸಲು ಮಾಡಿ, ಅದರಲ್ಲಿ ದೇವರನ್ನು ಕೂಡಿಸಿ ಪೂಜೆ ಮಾಡಲಾಗುತ್ತದೆ. ಬಳಿಕ ರೈತನು ಆ ಗುಡಿಸಲಿನ ಸುತ್ತ ಇಬ್ಬರು ಜನ ಐದು ಸುತ್ತು ಹಾಕುತ್ತಾ ಒಲ್ಗೆ ಒಲ್ಗೆ ಚಲ್ಲಮ ಪೋಲ್ಗೆ? ಎಂದು ಜೋರಾಗಿ ಕೂಗುತ್ತಾನೆ. ನಾಡಿನ ಜನತೆಗೆ ಸುಖ ಶಾಂತಿ, ಒಳ್ಳೆಯ ಮಳೆ, ಸಮೃದ್ಧ ಬೆಳೆಗಾಗಿ ದೇವರ ಬಳಿ ಸಲ್ಲಿಸುವ ಹೃದಯದ ಪ್ರಾರ್ಥನೆಯಾಗಿದೆ.




### ಈ ಹಬ್ಬದ ವೈಶಿಷ್ಟ್ಯ..?

ಮಕ್ಕಳು, ಮಹಿಳೆಯರು ಮರಕ್ಕೆ ಹಾಕಿದ ಜೂಕಾಲಿಯಲ್ಲಿ ತೂಗುತ್ತಾ ಖುಷಿಪಡುತ್ತಾರೆ. ಎಲ್ಲರೂ ತಮ್ಮ ಹೊಲದಲ್ಲಿ ಬೆಳೆದ ವಟಾಣಿ, ಬಟಾಣಿ, ಬಾರೆಕಾಯಿ ತಿಂದು, ಹಸಿರು ಹೊಲಗಳೆಲ್ಲ ಸುತ್ತಾಡುತ್ತಾ ಕಣ್ಣತುಂಬಾ ಪ್ರಕೃತಿಯ ಸೊಬಗನ್ನು ತುಂಬಿಸಿಕೊಳ್ಳುತ್ತಾರೆ. ಎಲ್ಲರೂ ಒಂದೇ ಮನಸ್ಸಿನಿಂದ ಊಟದ ಜೊತೆಗೆ ಅಂಬಲಿಯೊಂದಿಗೆ ಊಟ ಮಾಡುವುದೇ ಎಳ್ಳಮವಾಸೆಯ ನಿಜವಾದ ಸೌಂದರ್ಯ ಎನ್ನುತ್ತಾರೆ ಚಂದ್ರಕಾಂತಹಳ್ಳಿಖೇಡಕರ್.

**ರಾಜ್ಯದಲ್ಲಿ ಅಧಿಕಾರ ಕಿತ್ತಾಟ ಮುಂದುವರಿದಿದೆ. ಆದರೆ ಜನರ ನೋವು, ಸಂಕಷ್ಟ ಕೇಳೋರಿಲ್ಲ: ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ**



ಆಣದೂರು ಗ್ರಾಮದ ಹೊಲದಲ್ಲಿ ತಿಪ್ಪಾರೆಡ್ಡಿ ಪರಿವಾರ ರೈತ ಬಾಂಧವರಿಗೆ ಎಳ್ಳು ಅಮಾವಾಸ್ಯೆ ಈ ಪವಿತ್ರ ದಿನದಂದು ಎತ್ತು ಭಂಡಿಯಲ್ಲಿ ಕುಟುಂಬ ಸಮೇತ ಹೊಲಕ್ಕೆ ತೆರಳಿ ಪೂಜೆಸಲ್ಲಿಸಿ ಎಲ್ಲರೊಂದಿಗೆ ಭಜ್ಜಿ ರೊಟ್ಟಿ ಸವಿಯಲಾಯಿತು. ಈ ರೀತಿ ನಾವು ಪ್ರತಿವರ್ಷದಂತೆ ಹೊಲದಲ್ಲಿ ಎಲ್ಲರೂ ಒಟ್ಟಾಗಿ ಒಂದಾಗಿ ಕೂತು ಊಟ ಸೇವಿಸುವುದು ಪದ್ಧತಿ ಇದಕ್ಕೆ ವಸುದೈವ ಕುಟುಂಬ ಬಂದಿದೆ ನಿಮ್ಮ ಸಂತೋಷ್ ರೆಡ್ಡಿ ಜಿಲ್ಲಾಧ್ಯಕ್ಷರು ಬಿಜೆಪಿ ಯುವ ಮೋರ್ಚಾ ಜೈಪಾಲ್ ರೆಡ್ಡಿ ಸುಧಾಕರ್ ರೆಡ್ಡಿ ಸತೀಶ್ ರೆಡ್ಡಿ ರಾಜ್ ರೆಡ್ಡಿ ಭೋಜ್ ರಡ್ಡಿ ಕುಟುಂಬದ ಸದಸ್ಯರು ಉಪಸ್ಥಿತಿ ಇದ್ದರು,

# ಭಜ್ಜಿ ರೊಟ್ಟಿ ಸವಿದ ಶಿವಾಚಾರ್ಯರು



**ರೈತರು ಭೂಮಿತಾಯಿಗೆ ಕೃತಜ್ಞ ಸಲ್ಲಿಸುವ ದಿನವೆ ಎಳ್ಳ ಅಮಾವಾಸ್ಯೆ ಹಬ್ಬ ವಾಗಿದೆ. ಒಂದು ದಿನ ನಾವು ಎಲ್ಲರೂ ಹೊಲದಲ್ಲಿ ವಾಸ್ತವ್ಯ ಮಾಡಿ ಅನ್ನ ನೀಡುವ ಭೂಮಿಯಿ ಮತ್ತು ರೈತ ಬಾಳನ್ನು ಬಂಗಾರವಾಗಲಿ ಎಂದು ಲಕ್ಷ್ಮಿದೇವಿಗೆ ಪೂಜೆ ಮಾಡುವರು.**

**ಡಾ. ಶಭುಲಿಂಗ ಶಿವಾಚಾರ್ಯರು.**

ಪೀಠಾಧಿಪತಿಗಳು ಹೌವಗಿಸ್ವಾಮಿ ಮಠ ಡೋಣಗಾಂವ.///

**ಮಲ್ಲಮ್ಮ ನುಡಿ ವಾರ್ತೆ**

**ಕಮಲನಗರ:** ತಾಲೂಕಿನ ಡೋಣಗಾಂವ(ಎಂ)ಗ್ರಾಮದಲ್ಲಿ ಹೌವಗಿ ಸ್ವಾಮಿ ಮಠದ ಹೊಲದಲ್ಲಿ ಡಾ. ಶಭುಲಿಂಗ ಶ್ರೀಗಳು ಲಕ್ಷ್ಮಿ ಪೂಜೆ ಮಾಡಿ ವಲ್ಲಾಗ್ಯ ವಲ್ಲಾಗ್ ಚಲೋನ್ ಪಲ್ಲಗ್ಯ ಅನ್ನುವ ಮೂಲಕ ಸರಾಗ ಚಲ್ಲಿದರು.ನಂತರ ಎಳ್ಳ ಅಮಾವಾಸ್ಯೆ ಹಬ್ಬದ ವಿಶೇಷ ಪ್ರಸಾದ ಸೇವಿಷಿದರು, ಜಿಲ್ಲೆಯ ಪ್ರಮುಖ ಸ್ವಾಮೀಜಿಯಾರು ಒಗ್ಗೂಡಿ ಪ್ರಸಾದ ಸೇವೆ ಮಾಡಿದು ವಿಶೇಷವಾಗಿತು.ಈ ಸಂಧರ್ಭದಲ್ಲಿ ಹಣೆಗಾಂವ ಶ್ರೀಗಳು, ಶಿವಣಿ ಶ್ರೀಗಳು, ಸಾಯಗಂವ ಶ್ರೀ ಗಳು, ಕೌಲಾಸ ಶ್ರೀಗಳು ದೇವನಿ ಶ್ರೀಗಳು ಉಮಾಕಾಂತ ದೇಶಿಕರು,ಮುಖೇಡ್ ಶ್ರೀ ಗಳು ಉಪಸ್ಥಿತರಿದ್ದರು.

# ಸಂಭ್ರಮದಿಂದ ಜರುಗಿದ ಎಳ್ಳ ಅಮಾವಾಸ್ಯೆ



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ :**

ತಾಲೂಕಿನ ಸಿದ್ದೇಶ್ವರ ಗ್ರಾಮದ ಪರಮೇಶ್ವರ ಗೌರ್ ಅವರ ಜಮೀನಿನಲ್ಲಿ ರೈತರ ಹಬ್ಬ ಎಳ್ಳು ಅಮಾವಾಸ್ಯೆ ಹಬ್ಬವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಮುಖಂಡರಾದ ರೇವಣಸಿದ್ದ ಜಾಡರ್ ಮಾತನಾಡಿ ರೈತರ ಹಬ್ಬ ಎಳ್ಳು ಅಮಾವಾಸ್ಯೆ ಯಾಗಿದ್ದು ಈದಿನ ರೈತರು ಅನ್ನಕೊಡೂವ ಭೂತಾಯಿಗೆ ಗೌರವ ಸಲ್ಲಿಸುವುದನ್ನು ಕಾಣುತ್ತೇವೆ . ಈ ವರ್ಷ ಅತಿವೃಷ್ಟಿ ಇಂದ ಮುಂಗಾರು ಬೆಳೆ ಸಂಪೂರ್ಣ ಹಾನಿಗೊಳಗಾಗಿತ್ತು, ಇದೀಗ ಹಿಂಗಾರು ಬೆಳೆ ಉತ್ತಮ ಇಳುವರಿ ನಿರೀಕ್ಷೆ ಇದ್ದು ರೈತರು ಸಂತೋಷದಿಂದ ಬೆಳೆಗಳಲ್ಲಿ ಚರಗ ಚೆಲ್ಲತ್ತಾ , ಭಜಿ ,ಸಜ್ಜಿ ಜೊಳದ ರೊಟ್ಟಿ, ಅಮ್ಲಿ, ಜೊಳದ ಅನ್ನ ಮಾಡಿ ಭೂತಾಯಿಗೆ ನೈವಿದ್ಯ ಅರ್ಪಿಸಿ ಎಲ್ಲರೂ ಒಟ್ಟಿಗೆ ಕುಳಿತು ಊಟ ಮಾಡುವ ಕ್ಷಣ ಅತ್ಯಂತ ಸಂತೋಷದಾಯಕವಾದದ್ದು ಎಂದು ನುಡಿದರು. ಈ ಸಂದರ್ಭದಲ್ಲಿ ಪರಮೇಶ್ವರ್ ಗೌರ್ , ರಘುನಾಥ ಕೊಟೆ, ಆದರ್ಶ ಮೆಕ್ರೆ, ಬಕ್ಕಪ್ರಭು, ಸುದೀಪ , ಅನ್ನಪೂರ್ಣ ,ಐಶ್ವರ್ಯ, ಭವಾನಿ, ಸಾರಿಕಾ ಇದ್ದರು

# ರಾಜ್ಯ ಹೆದ್ದಾರಿ ರಸ್ತೆ ಮೇಲೆ ಕಸ ವಿಲೇವಾರಿ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ಯಾಕೆ

**ವರದಿ ವೀರೇಶ್ ಹೊಸಳ್ಳಿ**



**ಮಲ್ಲಮ್ಮ ನುಡಿ ವಾರ್ತೆ,ಸಿಂಧನೂರು.** ಕಸ ವಿಲೇವಾರಿ ಘಟಕಕ್ಕೆ ಸ್ಥಾಪನೆಗೆ ಸರ್ಕಾರಗಳು ಸ್ಪೆಷಲ್ ಗ್ರಾನ್ಯೆಂಟ್ ಮೂಲಕ ವರ್ಷಕ್ಕೆ ಸಾವಿರಾರು ಕೋಟಿ ರೂಪಾಯಿ ವೆಚ್ಚ ಮಾಡುತ್ತಾ ಬರುತ್ತದೆ.ಆದರೆ ಇಲ್ಲಿಯವರೆಗೂ ಕಸ ವಿಲೇವಾರಿ ಘಟಕ ಸರಿಯಾದ ಕಾರ್ಯ ನಿರ್ವಹಿಸುತ್ತಿಲ್ಲ. ಎಂದರೆ ಇದಕ್ಕೆ ಮೂಲ ಕಾರಣ ನಗರ ಸಭೆ ಮತ್ತು ಗ್ರಾಮ ಪಂಚಾಯಿತಿ ಪಿಡಿಒ ಹಾಗೂ ವಿಲೇವಾರಿ ವಾಹನಗಳು ಸಾಗಾಟ ಮಾಡುತ್ತಿರುವ ಸಿಬ್ಬಂದಿ ಗಳು ನಿರ್ಲಕ್ಷ್ಯ ಧೋರಣೆವೆ ಖಂಡಿಸಿ ಸಾರ್ವಜನಿಕರು ಅಧಿಕಾರಿಗಳು ಮೇಲೆ ಹಿಡಿಶಾಪ ಹಾಕುತ್ತಿದ್ದಾರೆ.

ರಾಜ್ಯ ಹೆದ್ದಾರಿ ರಸ್ತೆ ಬದಿ ಕಸ ಕಸವಿಲೇವಾರಿ ಮಾಡುವುದರಿಂದ ದೂರ್ವಾಸ. ಕಸ ವಿಲೇವಾರಿಗೆ ಬೆಂಕಿ ಹಚ್ಚಿದ್ದ ಬೂದಿ ವಾಹನಗಳು ಸಂಚಾರ ಮಾಡುವ ವ್ಯಕ್ತಿಗಳ ಕಣ್ಣುಗಳಿಗೆ ಗೆ ಬೀಳುವುದರಿಂದ ಮಾರ್ಗದ ಆಯಾ ತಪ್ಪಿ ಅಪಘಾತಕ್ಕೆ ಒಳಗಾಗಿ .ಕೈ ಕಾಲು ಮುರಿದುಕೊಂಡರು ಮತ್ತು ಪ್ರಾಣ ಕಳೆದುಕೊಂಡವರು ಸಂಖ್ಯೆ ಅಧಿಕ ಮಾರ್ಗದಲ್ಲಿ ಉದಾಹರಣೆಗಳು ನಮ್ಮ ಕಣ್ಣು ಮುಂದೆ ಇದ್ದೇವೆ ಈ ಹಿನ್ನೆಲೆಯಲ್ಲಿ ಈ ರಾಜ್ಯ ಹೆದ್ದಾರಿ ರಸ್ತೆ ಬದಿ ಯಾರು ಸಹ ಕಸ ವಿಲೇವಾರಿ ಮಾಡಬಾರದೆಂದು ಈಗಾಗಲೇ ಎಷ್ಟು ಸಂಬಂಧಿಸಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿ ಮನವಿ ಪತ್ರ ಸಲ್ಲಿಸಿದರು ಕ್ಯಾರೇ ಎನ್ನದ ಅಧಿಕಾರಿಗಳು ಕಣ್ಣು ಮುಚ್ಚಿಕೊಂಡು ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಟಿಯುಸಿಐ ಜಿಲ್ಲಾಧ್ಯಕ್ಷ ಹಾಗೂ ಸಮಾಜ ಚಿಂತಕರು ಹೋರಾಟಗಾರರಾದ ಬಿ ಎನ್ ಯರದಿಹಾಳ ಆಕ್ರೋಶವನ್ನು ವ್ಯಕ್ತಪಡಿಸಿದರು.

**ಸರ್ಕಾರ ರಾಜ್ಯ ಹೆದ್ದಾರಿ 150ಎ ರಸ್ತೆ ಬದಿಯಲ್ಲಿ ಇಂತಹ ಕಸ ವಿಲೇವಾರಿ ಮೂಲಕ ಇಂತಹ ಅನಾಹುತ ಘಟನೆಗಳು ಸಂಭವಿಸಿದ್ದು..ಈಗಲಾದರೂ ಸರ್ಕಾರ ಮತ್ತು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಎಚ್ಚೆತ್ತು-ಕೊಂಡು ಸಮಸ್ಯೆಗಳು ನಿವಾರಣೆಗೆ ಮುಂದಾಗುತ್ತೋರು ಅಥವಾ ಎಲ್ಲವೂ ಕಾದು ನೋಡಬೇಕಾಗಿದೆ.**

**ಅಪಘಾತಕ್ಕೆ ಒಳಗಾದ ಕುಟುಂಬಗಳು ಸಂಕಷ್ಟ ಎದುರಿಸುತ್ತಿದ್ದಾರೆ.**

ಏಕೆಂದರೆ ಚಾಮರಾಜನಗರ ಟು ಬೆಂಗಳೂರು ಮತ್ತು ಹೈದರಾಬಾದ್ ಗುಲ್ಬರ್ಗ ಬೀದರ್ ಹಾಗೂ ಹುಬ್ಬಳ್ಳಿ ಮತ್ತು ದಾವಣಗೆರೆ ಆಯ್ದು ಹೋಗುವ ಸಿಂಧನೂರು ಮಾರ್ಗವಾಗಿ ಹೋಗುವ ಹೊಸಳ್ಳಿ ಇಜೆ ) ಗ್ರಾಮ ಪಂಚಾಯಿತಿ ಸಿಂಧನೂರು ನಗರ ಸಭೆ

ಎರಡು ಮಧ್ಯೆ ಹೊಡೆ ಹಳ್ಳಕ್ಕೆ ಹೊಂದಿಕೊಂಡಿರುವ ರಾಜ್ಯ ಹೆದ್ದಾರಿ 150 ಎ ಈ ರಸ್ತೆಯ ಮಾರ್ಗವಾಗಿ ಒಂದು ದಿನಕ್ಕೆ ಸಾವಿರಾರು ವಾಹನಗಳು ಹಾಗೂ ಬೈಕ್ ಸೇರಿದಂತೆ ಅಧಿಕ ವಾಹನಗಳು ಓಡುತ್ತಿರುವುದು ರಸ್ತೆ ಪಕ್ಕದಲ್ಲಿ ಮೇಲೆ ಕಸ ವಿಲೇವಾರಿ ರಸ್ತೆಗೆ ಚೆಲ್ಲಿ ಮತ್ತು ಅದಕ್ಕೆ ಬೆಂಕಿ ಹಚ್ಚಿದ್ದಾರೆ. ಈ ಹಿನ್ನೆಲೆಯಲ್ಲಿ ವಾಹನ ಸಂಚಾರ ಮಾಡುತ್ತಿರುವ ಸವಾರರಿಗೆ. ಸಾರ್ವಜನಿಕರಿಗೆ ಬೆಂಕಿ ಹೊಗೆಯಲ್ಲಿ ಎದುರಿಗೆ ಬರುವ ವಾಹನಗಳು ಕಾಣದೇ ಹೊಗೆ. ಧೂಳು. ಕಣ್ಣಿಗೆ ಬಂದು ಎಷ್ಟೋ ಅಪಘಾತ ಸಂಭವಿಸಿ ಪ್ರಾಣ ಕಳೆದುಕೊಂಡಿದ್ದಾರೆ. ಇವತ್ತಿಗೂ ಅವರು ಕುಟುಂಬಗಳು ಸಂಕಷ್ಟವನ್ನು ಎದುರಿಸುತ್ತಿದ್ದಾರೆ.

**ರಾಜ್ಯ ಹೆದ್ದಾರಿ ಸಮಸ್ಯೆ. ಗಂಗಾವತಿ ಮಾರ್ಗ ಹೊಡೆ ಹಳ್ಳದ ಹೆದ್ದಾರಿ ರಸ್ತೆ ಬದಿ ಕಸ ವಿಲೇವಾರಿ. ಸಂಬಂಧಿಸಿದ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ಯಾಕೆ..?**

# ಕರಾವಳಿ ಉತ್ಸವಕ್ಕೆ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಚಿವರಿಗೆ ಆಹ್ವಾನ



**ಮಲ್ಲಮ್ಮ ನುಡಿ ವಾರ್ತೆ ಕರಾವಳಿ:** ಡಿಸೇಂಬರ್ 22 ರಿಂದ 28 ರ ವರೆಗೆ ರವೀಂದ್ರನಾಥ ಠಾಗೂರ್ ಕಡಲ ತೀರದಲ್ಲಿ ನಡೆಯುವ ಕರಾವಳಿ ಉತ್ಸವ ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು, ಪ್ರವಾಸೋದ್ಯಮ ಸಚಿವರು ಮತ್ತು ಕಂದಾಯ ಸಚಿವರಿಗೆ, ಜಿಲ್ಲಾ ಉಸ್ತುವಾರಿ ಸಚಿವ ಮಾಂಕಾಳ ಎಸ್ ವೈದ್ಯ ಅವರು ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ನೀಡಿ, ಕಾರ್ಯಕ್ರಮಕ್ಕೆ ಆಹ್ವಾನಿಸಿದರು. ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯ ಮತ್ತು ಜಿ. ಪಂ.ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಉಪಸ್ಥಿತರಿದ್ದರು.

# ಶ್ರೇಷ್ಠ ತೋಟಗಾರಿಕಾ ಪ್ರಶಸ್ತಿಗೆ ಆಯ್ಕೆಯಾದ ರೈತರು

**ಮಲ್ಲಮ್ಮ ನುಡಿ ಬಾಗಲಕೋಟೆ:** ಬಾಗಲಕೋಟೆಯಲ್ಲಿ ರವಿವಾರದಿಂದ ಆರಂಭವಾಗಲಿರುವ 14 ನೇ ತೋಟಗಾರಿಕಾ ಮೇಳದ ಮೂರು ದಿನಗಳಂದು ಪ್ರಸಕ್ತ ಸಾಲಿಗೆ ಆಯ್ಕೆಯಾದ ಶ್ರೇಷ್ಠ ತೋಟಗಾರಿಕಾ ರೈತರಿಗೆ ಪ್ರಶಸ್ತಿ ನೀಡಲಾಗುವುದು.

**ಪ್ರಶಸ್ತಿಗೆ ಆಯ್ಕೆಯಾದವರು:**

ವಿ.ಮಂಜುನಾಥ(ಕೋಲಾರ ಜಿಲ್ಲೆ),ಬಿ.ನಂಜುಂಡ ಗೌಡ(ಚಿಕ್ಕಬಳ್ಳಾಪುರ),ನಾಗಪ್ಪ ಕುಪ್ಪುಗೌಡ(ಉತ್ತರ ಕನ್ನಡ),ಮಹಾದೇವ ಮೆಳ್ಳಿಗೇರಿ(ಬಾಗಲಕೋಟೆ), ಸತ್ಯಶೀಲ ನಿಡೋದ(ಬೀದರ), ಶರ್ವಕುಮಾರ ಆವಂತಿ(ಕಲಬುರ್ಗಿ), ವಿಶ್ವಶಂಕರ ಸಂತೋಷಕುಮಾರ(ಯಾದಗಿರಿ), ಬಸವರಾಜ ಪರಗೊಂಡಪ್ಪ ಸಿದ್ದಾಪುರ(ವಿಜಯಪುರ).

ಜಗದೀಶ ಪಿ.(ಮೈಸೂರು ಜಿಲ್ಲೆ), ಸಿದ್ದೇಗೌಡ ಎನ್.(ಚಾಮರಾಜನಗರ), ಎಚ್. ಎನ್.ಸತ್ಯನಾರಾಯಣ್(ಮಂಡ್ಯ),ಲಕ್ಷ್ಮೀ ಟಿ.ಎಂ.(ಹಾಸನ), ಕಲಾವತಿ ಮಾರುತಿ ಚವನಗೌಡರ(ಧಾರವಾಡ), ಭೀಮರಾವ್ ತಾನಾಜಿರಾವ್ ಶಿಂಧೆ(ಗದಗ), ನಾಗರಾಜ ಶಿವಾನಂದ ಹುಲಗೂರ(ಹಾವೇರಿ), ಬಾಳಪ್ಪ ಬಸಪ್ಪ ಬೆಳಕೂಡ(ಬೆಳಗಾವಿ).

ರಮೇಶ ಎಚ್.(ಬೆಂಗಳೂರು ಗ್ರಾಮಾಂತರ ಜಿಲ್ಲೆ), ಮುನಿರಾಜು ಬಿ.ಎನ್.(ಬೆಂಗಳೂರು ನಗರ),ದೇವರಾಜು ಜಿ.(ರಾಮನಗರ), ಚನ್ನಕೇಶವಸ್ವಾಮಿ(ತುಮಕೂರು), ಸುದೇಶಕುಮಾರ ವೀರಬಸಪ್ಪ ಪಟ್ಟಣಶೆಟ್ಟಿ(ಕೊಪ್ಪಳ), ಪದ್ಮಾವತಿ ಶರಣಬಸವ ಬಾಗೋಡಿ(ರಾಯಚೂರ), ಕೆ.ಬಸಪ್ಪ ಚನ್ನಬಸಪ್ಪ(ಬಳ್ಳಾರಿ), ಶ್ರೀ ಮಹೇಶ್ವರ ಸ್ವಾಮಿಗಳು(ವಿಜಯನಗರ).

ಪ್ರಶಸ್ತಿಗೆ ಆಯ್ಕೆಯಾಗಿರುವ ರೈತರನ್ನು ಡಿ.21 ರವಿವಾರ 8 ಜನ, ಡಿ.22 ಸೋಮವಾರ 8 ಹಾಗೂ ಡಿ.23 ಮಂಗಳವಾರ 8 ಜನ ರೈತರನ್ನು ಸನ್ಮಾನಿಸಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

# ಬಾವಗಿಯಲ್ಲಿ ಎಳ ಅಮವಾಸ್ಯೆ ಆಚರಣೆ

**ಮಲ್ಲಮ್ಮ ನುಡಿ ವಾರ್ತೆ ಬೀದರ:** ಬೀದರ್ ತಾಲೂಕಿನ ಬಾವಗಿ ಗ್ರಾಮದ ಆನಂದ ಸ್ವಾಮಿ ಜಮೀನಿನಲ್ಲಿ ಶುಕ್ರವಾರ ಎಳ್ಳಮಾವಾಸ್ಯೆ ಹಬ್ಬ ಆಚರಿಸಲಾಯಿತು ಕಲ್ಯಾಣ ಕರ್ನಾಟಕ ಭಾಗದಲ್ಲಿ ಆಚರಿಸಲಾಗುವ ಎಳ್ಳು ಅಮಾವಾಸ್ಯೆ ಹಬ್ಬಕ್ಕೆ ವಿಶೇಷ ಮಹತ್ವವಿದ್ದು,

ನೈವೇದ್ಯವನ್ನು ಬೆಳೆಯಲ್ಲಿ ಎರಚಿ ಚರಗ ಭೂಮಿ ತಾಯಿಗೆ ಉಣಬಡಿಸಿ ಸಡಗರಿಂದ ಆಚರಿಸಲಾಯಿತು.



ನಂತರ ಬಂಧು ಬಳಗ ಸ್ನೇಹಿತರು ಸೇರಿ ವಿಶೇಷವಾದ ಅಡುಗೆ ಭಜ್ಜಿ, ಜೋಳದ ರೊಟ್ಟಿ, ಕಡುಬು, ಅಂಬಲಿ, ಸವಿಯುವ ಮೂಲಕ ಸಂಭ್ರಮಿಸಲಾಯಿತು ಈ ಸಂದರ್ಭದಲ್ಲಿ ಗುರು ಭದ್ರೇಶ್ವರ ಸಂಸ್ಥಾನದ ಆನಂದ ಸ್ವಾಮಿ ವಿಶ್ವನಾಥಯ್ಯ ಸ್ವಾಮಿ ಶರಣಯ್ಯ ಸ್ವಾಮಿ ಕೆದಾರ್ ಸ್ವಾಮಿ ಉಪಸ್ಥಿತರಿದ್ದರು.

# ಕಲಕೇರಿ ಗ್ರಾಮದ ಧಾರ್ಮಿಕ ಸಮಾರಂಭದಲ್ಲಿ ಕೇದಾರ ಜಗದ್ಗುರುಗಳ ಅಭಿಮತ ಮಾನವೀಯ ಮೌಲ್ಯಗಳಿಂದ ಮನುಷ್ಯ ಜನ್ಮ ಸಾರ್ಥಕ

**ಮಲ್ಲಮ್ಮ ನುಡಿ ವಾರ್ತೆ**

**ತಾಳಿಕೋಟಿ:** ಧರ್ಮದ ತಳಹದಿಯ ಮೇಲೆ ಶಿಕ್ಷಣ ಮತ್ತು ಸಂಸ್ಕಾರಗಳನ್ನು ನೀಡುವ ಮೂಲಕ ಮಠಮಾನ್ಯಗಳು ಮಾನವ ಕಲ್ಯಾಣ ಕೇಂದ್ರಗಳಾಗಿ ಅನಾದಿಕಾಲದಿಂದಲೂ ಮಾನವರನ್ನು ಉದ್ಧರಿಸುವ ಕಾರ್ಯ ಮಾಡುತ್ತಾ ಬಂದಿದ್ದು, ಈ ದಿಸೆಯಲ್ಲಿ ದಾನ ಧರ್ಮದ ಗುಣಗಳನ್ನು ಪ್ರತಿಯೊಬ್ಬರೂ ಅನುಸರಿಸಿ ನಡೆದಾಗ ಮಾತ್ರ ಉದಾತ್ತ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಕೇದಾರ ಪೀಠದ ಜಗದ್ಗುರು ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದಂಗಳವರು ಹೇಳಿದರು.

ತಾಳಿಕೋಟಿ ತಾಲೂಕಿನ

ಕಲಕೇರಿ ಗ್ರಾಮದ ಜೆ ಜೆ ಶಿಕ್ಷಣ ಸಂಸ್ಥೆಯ ಆವರಣದ ಮಹಾಮಠದಲ್ಲಿ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಮಹಾ ಸಂಸ್ಥಾನಮಠ ಜಾಲಹಳ್ಳಿ–ಕಲಕೇರಿಯ ಪೀಠಾಧಿಪತಿಗಳಾದ ಶಿವಾಚಾರ್ಯ ರತ್ನ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳವರ 70ನೇ ವರ್ಷದ ಹುಟ್ಟುಹಬ್ಬದ ವರ್ಧಂತಿ ಮಹೋತ್ಸವ ಹಾಗೂ ಅಭಿನಂದನಾ ಸಮಾರಂಭ ಸೇರಿದಂತೆ ವಿವಿದ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಶಕ್ತಿವಂತರರು ರಕ್ಷಣೆ ಮಾಡುವುದು, ಸಿರಿವಂತರರು ದಾನ ಮಾಡುವುದು, ಅಧಿಕಾರದಲ್ಲಿದ್ದವರು ಬಡವರ ಸೇವೆ ಮಾಡುವ ಮೂಲಕ ಸಮಾಜದಲ್ಲಿ ಸಮಾನತೆ,ಸಹಬಾಳ್ವೆ ಬೆಳೆಸಿ ಮಾನವೀಯ ಮೌಲ್ಯಗಳನ್ನು ಎತ್ತಿ ಹಿಡಿಯುವ ಕೆಲಸವಾಗಬೇಕು ಅಂದಾಗ ಮನುಷ್ಯ ಜನ್ಮ ಸಾರ್ಥಕವಾಗುತ್ತದೆ ಎಂದು ಅವರು ಹೇಳಿದರು.

ಭಗವಂತನ ಪ್ರತಿರೂಪದಂತಿರುವ ಗುರುವಿನ ಮಠಗಳು ಬೆಳೆದಾಗ ಸಮಾಜದ ಉದ್ದಾರವಾಗಲು



ಸಾಧ್ಯವಾಗುತ್ತದೆ. ಯಾವತ್ತೂ ಮಠಗಳು ಶಿಕ್ಷಣ, ಅನ್ನ, ಅರಿವೆ ಜೊತೆಗೆ ಭವರೋಗದ ನಿವಾರಣಾ ಕೇಂದ್ರಗಳಾಗಿ ಕಾರ್ಯ ಮಾಡುತ್ತಿದ್ದು, ಈ ನಿಟ್ಟಿನಲ್ಲಿ ಜಾಲಹಳ್ಳಿ ಜಗದಾರಾಧ್ಯ ಜಯಶಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಈ ಭಾಗದಲ್ಲಿ ಹಲವು ಮಠಗಳನ್ನು ಸ್ಥಾಪಿಸುವ ಮೂಲಕ ಅಸಂಖ್ಯಾತ ಭಕ್ತಬಳಗವನ್ನು ಹೊಂದುವ ಮೂಲಕ ಭಕ್ತರನ್ನು ಉದ್ಧಾರ ಮಾಡುವ ಕಾರ್ಯದಲ್ಲಿ ತೊಡಗಿದ್ದು, ಅಂತಹ ಗುರುಗಳ ಮಠಗಳು ಬೆಳವಣಿಗೆಯಾಗಲು ನಾವೆಲ್ಲ ದಾನ ಧರ್ಮದ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ಸಣ್ಣ ಕೈಗಾರಿಕಾ ಸಚಿವರಾದ ಶರಣಬಸಪ್ಪ ದರ್ಶನಾಪುರ ಹೇಳಿದರು.ಇದೇ ವೇಳೆ ಜಾಲಹಳ್ಳಿ ಶ್ರೀಗಳ ಜೀವನ ಚರಿತ್ರೆ ಕುರಿತಾದ ಚಾಣಕ್ಯ ಪ್ರಕಾಶನದಿಂದ ಹೊರತಂದಿರುವ ಸಾಹಿತಿ ಮನು ಪತ್ತಾರ ಅವರು ಬರೆದಿರುವ 'ಭಾಗ್ಯವಿದಾತ' ಜೀವನ ಚರಿತ್ರೆ ಪುಸ್ತಕವನ್ನು ಕೇದಾರ ಜಗದ್ಗುರು ಮಹಾಸನ್ನಿಧಿಯವರು ಮತ್ತು ಸಣ್ಣ ಕೈಗಾರಿಕಾ ಸಚಿವರಾದ ಶರಣಬಸಪ್ಪ ದರ್ಶನಾಪುರ ಬಿಡುಗಡೆಗೊಳಿಸಿದರು. ಇದೇ ವೇಳೆ ಜಾಲಹಳ್ಳಿ ಶ್ರೀಗಳಿಗೆ ಅನೇಕ ಭಕ್ತರು ತುಲಾಭಾರ ಸೇವೆ ಮಾಡುವ ಮೂಲಕ ಧನ್ಯತಾಭಾವ ಮೆರೆದರು. ಹಾಗೂ ಮಣ್ಣೇರಿ ಗ್ರಾಮದಿಂದ ಆಗಮಿಸಿದ ನಂದಿ(ಎತ್ತು)ಯನ್ನು ಹಣ್ಣು ಹಂಪಲು ಮತ್ತು ಕಬ್ಬಿನಿಂದ ತುಲಾಭಾರ ಸೇವೆ ಮಾಡಿದರು. ಈ ವೇಳೆ ತುಲಾಭಾರ ಮಾಡಿಸಿಕೊಂಡ ನಂದಿ ವೇದಿಕೆಯನ್ನೇರಿ ಶ್ರೀಗಳ ಆಶೀರ್ವಾದ ಪಡೆದದ್ದು ಎಲ್ಲರ ಗಮನ ಸೆಳೆಯಿತು.ಮಾಗಣಗೇರಿಯ ಡಾ.ವಿಶ್ವಾರಾಧ್ಯ ಶಿವಾಚಾರ್ಯರು, ಗುಂಡಕನಾಳ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಆಲಮೇಲದ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ಹಿರೂರು ಹಿರೇಮಠದ ಜಯಸಿದ್ದೇಶ್ವರ ಶಿವಾಚಾರ್ಯರು, ಸಿಂದಗಿಯ ವಿಶ್ವಪ್ರಭು ಶಿವಾಚಾರ್ಯರು ಮಾತನಾಡಿದರು.ಅಖಿಲ ಭಾರತ ವೀರಶೈವ ಶಿವಾಚಾರ್ಯರ ಸಂಸ್ಥೆಯ ಅಧ್ಯಕ್ಷರಾದ ಸಿಂದಗಿ ಸಾರಂಗಮಠದ ಪ್ರಭುಸಾರಂಗದೇವ ಶಿವಾಚಾರ್ಯರು, ಕಲಕೇರಿಯ ಗುರುಮರುಳಾರಾಧ್ಯರ ಹಿರೇಮಠದ ಸಿದ್ದರಾಮ ಶಿವಾಚಾರ್ಯರು, ಪಂಚರಂಗ ಸಂಸ್ಥಾನ ಗದ್ದುಗೇಮಠದ ಶ್ರೀಗುರುಮಡಿವಾಳೇಶ್ವರ ಶಿವಾಚಾರ್ಯರು. ದೇವರಭೂರದ ಅಭಿನವ ಗಜದಂಡ ಶಿವಾಚಾರ್ಯರು, ಹೆಡಗಾಪೂರದ ದಾರುಕಾಲಿಂಗ ಶಿವಾಚಾರ್ಯರು, ಮುತ್ತಗಿಯ ವೀರರುದ್ರಮುನಿ ಶಿವಾಚಾರ್ಯರು, ಮುಖಂಡರಾದ ಬಸನಗೌಡ ಪಾಟೀಲ ಯಡಿಯಾಪೂರ, ಸುರೇಶಗೌಡ ನಾಡಗೌಡ(ಬಿಂಜಲಭಾವಿ), ಸಿದ್ದು ಬುಳ್ಳಾ ಹಾಗೂ ಹಲವಾರು ಗಣ್ಯಮಾನ್ಯರು ಉಪಸ್ಥಿತರಿದ್ದರು.

# ಬಸವರಾಜ ಅಟ್ಟೂರ ಸೇರಿ 5 ಜನರಿಗೆ ಕಾಯಕ ಸೇವಾ ರತ್ನ ಪ್ರಶಸ್ತಿ.

**ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ:** ಮಾಜಿ ಸಚಿವ ಬಸವರಾಜ ಪಾಟೀಲ ಅಟ್ಟೂರ್ ಅವರಿಗೆ ಪ್ರಸಕ್ತ ಸಾಲಿನ 'ಡಾ.ಬಿ.ವಿ.ಪಟೇಲ್ ಕಾಯಕ ಸೇವಾ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ವಿಶ್ವ ಬಸವ ಧರ್ಮ ಟ್ರಸ್ಟ್ ಅನುಭವ ಮಂಟಪದ ಸಂಸ್ಥಾಪಕ ಕಾರ್ಯಾಧ್ಯಕ್ಷರಾದ ಡಾ.ಬಿ.ವಿ.ಪಟೇಲ್ ಅವರ ಹೆಸರಲ್ಲಿ ಈ ಪ್ರಶಸ್ತಿ ಸ್ಥಾಪಿಸಲಾಗಿದೆ. ಈ ಟ್ರಸ್ಟ್ ಮತ್ತು ಲಿಂ.ಸುಶೀಲಾದೇವಿ ಬಿ.ಪಟೇಲ್ ಚಾರಿಟೇಬಲ್ ಟ್ರಸ್ಟ್ ಆಶ್ರಯದಲ್ಲಿ ಇಂದು ಬೆಳಿಗ್ಗೆ 11.30 ಗಂಟೆಗೆ ಅನುಭವ ಮಂಟಪದ ಪರಿಸರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಲಾಗುತ್ತದೆ ಎಂದು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಕುಪೇಂದ್ರ ಪಾಟೀಲ ಮತ್ತು ಕಾರ್ಯದರ್ಶಿಗಳಾದ ಮಾಲತಿ ಬಿ.ಎವಳೆ ತಿಳಿಸಿದ್ದಾರೆ.



ಈ ಸಂದರ್ಭದಲ್ಲಿ ದುಬೈನಲ್ಲಿ ನಡೆದ ಕಾರ್ಯಕ್ರಮದಲ್ಲಿ 'ವಚನ ಪಿತಾಮಹ ಫ.ಗು.. ಹಳಕಟ್ಟಿ ವಚನ ಟಿವಿ ಪ್ರಶಸ್ತಿ' ಪಡೆದಿರುವ ಪ್ರೊ.ವಿಜಯಲಕ್ಷ್ಮಿ ಗಡ್ಡೆ ಹಾಗೂ ಗುರುನಾಥ ಗಡ್ಡೆ ದಂಪತಿಗಳ ವಿಶೇಷ ಸನ್ಮಾನಿಸಲಾಗುತ್ತಿದೆ

ವಿವಿಧ ಕ್ಷೇತ್ರದ ಸಾಧಕರಾದ ಕೋವಿಡ್ ಸಂದರ್ಭದಲ್ಲಿ ಗಣನೀಯ ಸೇವೆ ಸಲ್ಲಿಸಿದ ಹುಲಸೂರ ತಹಶೀಲ್ದಾರ್ ಶಿವಾನಂದ ಮೇತ್ರೆ, ಬಾಲವಿವಾಹ ತಡೆಯುವ ಅಭಿಯಾನಕ್ಕಾಗಿ ಕೇಂದ್ರ ಸಚಿವರ ಪ್ರಶಂಸಾ ಪತ್ರ ಪಡೆದಿರುವ ಬಸವಕಲ್ಯಾಣ ಸಿಡಿಪಿಒ ಗೌತಮ ಶಿಂಧೆ, ವಿಕಲಚೇತನ ಮಕ್ಕಳ ವಿಶೇಷ ಆರೈಕೆಗೆ ಪ್ರಶಂಸಾ ಪತ್ರ ಪಡೆದಿರುವ ಡಾ.ಕೆ.ಜಿ.ಶರಣಪ್ಪ ಗದ್ಲೇಗಾಂವ, ಭೂದಾಖಲೆಗಳ ಇಲಾಖೆಯಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಜೀವಕುಮಾರ ಅಣವೀರ ಗೋಟೂರ್ ಈ ನಾಲ್ವರಿಗೆ 'ಕಾಯಕ ಸೇವಾ ರತ್ನ' ಪ್ರಶಸ್ತಿ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.ಲಿಂ.ಸುಶೀಲಾದೇವಿ ಪಟೇಲ್ ಅವರ 12 ನೇ ಪುಣ್ಯ ಸ್ಮರಣೋತ್ಸವ ಅಂಗವಾಗಿ ಈ ಕಾರ್ಯಕ್ರಮ ನಡೆಯುವುದು. ನಾಲ್ವರು ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳಿಗೆ ಸಹಾಯಧನ ಸಹ ವಿತರಿಸಲಾಗುತ್ತದೆ. ಅನುಭವ ಮಂಟಪದ ಅಧ್ಯಕ್ಷ ನಾಡೋಜ ಭಾಲ್ಕಿ ಬಸವಲಿಂಗ ಪಟ್ಟದ್ದೇವರು, ಹುಲಸೂರ ಶಿವಾನಂದ ಸ್ವಾಮಿಗಳು, ಭಾಲ್ಕಿಯ ಮ.ಘ.ಚ.ಗುರುಬಸವ ಪಟ್ಟದ್ದೇವರು, ಶಿವಾನಂದ ಸ್ವಾಮಿಗಳು ಅನುಭವ ಮಂಟಪ ಇವರ ನೇತೃತ್ವದಲ್ಲಿ ಕಾರ್ಯಕ್ರಮವಿದೆ. ಚಾರಿಟೇಬಲ್ ಟ್ರಸ್ಟ್ ನ ಟ್ರಸ್ಟಿ ಡಾ.ಎಸ್.ಬಿ.ದುರ್ಗೆ ಅಧ್ಯಕ್ಷತೆ ವಹಿಸುವರು. ಸಹಾಯಕ ಆಯುಕ್ತ ಪ್ರಕಾಶ ಕುದರಿ ಮತ್ತು ನಿವೃತ್ತ ಪ್ರಾಚಾರ್ಯ ಅಶೋಕಕುಮಾರ ಶ್ರೀವಾಸ್ತವ ಅತಿಥಿಗಳಾಗಿ ಪಾಲ್ಗೊಳ್ಳುವರು. ದಾಸೋಹ ವ್ಯವಸ್ಥೆಯೂ ಇರಲಿದೆ. ಎಲ್ಲರಿಗೂ ಆದರದ ಸ್ವಾಗತವಿದೆ ಎಂದು ಅವರು ಹೇಳಿದ್ದಾರೆ.

# ಕಂಪೋಡ್ ಗೂಡೆ ಪುನರನಿರ್ಮಾಣಕೆ ಮನವಿ



**ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:**

ಇಲ್ಲಿನ ಬಿ. ಕೆ. ಡಿ. ಬಿ. ಆಧಿನದ ರಥಾ ಮೈದಾನದ ಕಂಪೋಡ್ ವನು ಒಡೆದು ನಾಲ್ಕು ತಿಂಗಳು ಕಳೆದರೂ ಸಹ ಪುನರ್ನಿರ್ಮಾಣ ಮಾಡಿರುವುದು ಇಲ್ಲ ಎಂದು ನ್ಯಾಯವಾದಿಗಳಾದ . ಸಿ. ಪಿ. ಸೀಗೆದಾರ ಮನವಿ ಮೂಲಕ ಒತ್ತಾಯಿಸಿದ್ದಾರೆ. ಅವರು ರಥಾ ಮೈದಾನದಲ್ಲಿ ಮುಂಜಾನೆ ಹಾಗೂ ಸಾಯಂಕಾಲ ಸಮಯದಲ್ಲಿ . ಕೆಲವು ಕಿಡಿಗೇಡಿಗಳು ಹಾಗೂ ಪುಂಡರ ಹಾವಳಿ ಹೆಚ್ಚಾಗಿದೆ ಅಲ್ಲದೆ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಅನೇಕ ಸಮಸ್ಯೆಗಳು ಉಂಟಾಗುತ್ತಿದೆ ಆದರಿಂದ ಸಂಬಂಧ ಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಸಹ ಯಾವುದೇ ಪ್ರಯೋಜನವಾಗಿಲ್ಲ ಎಂದು ತಿಳಿಸಿದ್ದಾರೆ. ಇನ್ನು ಮುಂದೆ ಯಾದರು ಇತ ಕಡೆ ಸಂಬಂಧ ಅಧಿಕಾರಿಗಳಿಗೆ ಗಮನ ಹರಿಸಿ ಆದಷ್ಟು ಬೇಗ ಕಂಪೋಡ್ ಗೂಡೆ ಪುನರನಿರ್ಮಾಣಕೆ



ಭಾಲ್ಕಿಯ ಸೋಮನಾಥಪ್ಪ ಅಷ್ಟೂರೆ ಹೊಲದಲ್ಲಿ ಎಳ್ಳಮಾವಾಸ್ಯೆ ನಿಮಿತ್ತ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಪೂಜೆ ನೆರವೇರಿಸಿದರು. ಸೋಮನಾಥಪ್ಪ ಅಷ್ಟೂರೆ ಸೇರಿ ಪರಿವಾರದ ಸದಸ್ಯರು ಹಾಜರಿದ್ದರು.

# ಜಿಲ್ಲೆಯಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ ಹತೋಟಿಗೆ

## ಪಾಸಿಟಿವಿಟಿ ಪ್ರಮಾಣ ಶೇ. 6.48ಕ್ಕೆ ಇಳಿಕೆ:–ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ; ಕಳೆದ ವರ್ಷ ಜಿಲ್ಲೆಯಾದ್ಯಂತ ಡೆಂಗ್ಯೂ ಹಾವಳಿ ಹೆಚ್ಚಾಗಿದ್ದರಿಂದ ಈ ವರ್ಷ ಮರುಕಳಿಸದಂತೆ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯಿಂದ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದರಿಂದ ಡೆಂಗ್ಯೂ, ಚಿಕನ್‌ಗುನ್ಯಾ ತಕ್ಕಮಟ್ಟಿಗೆ ಹತೋಟಿಗೆ ತಂದಿದ್ದು, ಕಳೆದ ವರ್ಷಕ್ಕೆ (2024ರಲ್ಲಿ ಪಾಸಿಟಿವಿಡಿ ಪ್ರಮಾಣ 9.6 ) ಹೋಲಿಸಿದರೆ ಈ ವರ್ಷ ಶೇ.6.48ಕ್ಕೆ ಇಳಿಕೆಯಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಜಿಲ್ಲಾಧಿಕಾರಿಗಳು, ಕಳೆದ ವರ್ಷಕ್ಕೆ ಹೋಲಿಸಿದರೆ ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ 2025ನೇ ಕ್ಯಾಲೆಂಡರ್ ವರ್ಷದಲ್ಲಿ ಹೆಚ್ಚಿನ ಸ್ಯಾಂಪಲ್ ಪರೀಕ್ಷೆಗೆ ಒಳಪಡಿಸಿದ್ದಾಗಿಯೂ ಡೆಂಗ್ಯೂ ಪಾಸಿಟಿವಿಟಿ ಪ್ರಮಾಣದಲ್ಲಿ ಶೇ. 6.48 ಇಳಿಕೆ ಕಂಡಿರುವುದು ಸಮಾಧಾನದ ವಿಷಯವಾಗಿದೆ ಎಂದಿದ್ದಾರೆ.2024ನೇ ಕ್ಯಾಲೆಂಡರ್ ವರ್ಷದಲ್ಲಿ ಜಿಲ್ಲೆಯಾದ್ಯಂತ ಆಸ್ಪತ್ರೆಗಳಲ್ಲಿ ಸಂಗ್ರಹಿಸಿದ 12,190 ಡೆಂಗ್ಯೂ ರಕ್ತ ಲೇಪನಗಳಲ್ಲಿ 1,201 ಮತ್ತು 3,043 ಚಿಕುನ್ ಗುನ್ಯಾ ರಕ್ತ ಲೇಪನಗಳಲ್ಲಿ 295 ಪಾಸಿಟಿವ್ ಕಂಡುಬಂದಿತ್ತು. ಪ್ರಸಕ್ತ ಜನವರಿ–2025 ರಿಂದ ಇಲ್ಲಿಯವರೆಗೆ 7,584 ರಕ್ತದ ಮಾದರಿಗಳಲ್ಲಿ 492 ಖಚಿತ ಡೆಂಗ್ಯೂ ಪ್ರಕರಣಗಳು ಹಾಗೂ 1,749 ರಕ್ತದ ಮಾದರಿಗಳಲ್ಲಿ 41 ಖಚಿತ ಚಿಕನ್‌ಗುನ್ಯಾ ಪ್ರಕರಣಗಳು ವರದಿಯಾಗಿವೆ. 2024 ರಲ್ಲಿದ್ದ ಶೇ.9.6 ಪಾಸಿಟಿವಿಟಿ ರೇಟ್ 2025 ರಲ್ಲಿ ಶೇ. 6.48ಕ್ಕೆ ಇಳಿದಿದೆ ಎಂದು ಅಂಕಿ–ಸಂಖ್ಯೆ ಸಮೇತ ಡಿ.ಸಿ. ಮಾಹಿತಿ ನೀಡಿದ್ದಾರೆ.

ಇಷ್ಟಾಗಿಯೂ ಕಲಬುರಗಿ ನಗರ ಸೇರಿ ಜಿಲ್ಲೆಯಾದ್ಯಂತ ಡೆಂಗ್ಯೂ ಮತ್ತು ಚಿಕನ್ ಗುನ್ಯಾ ಸಂಪೂರ್ಣವಾಗಿ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯು ಅಗತ್ಯ ಮುಂಜಾಗ್ರತೆ ಕ್ರಮ ತೆಗೆದುಕೊಂಡಿದ್ದು, ವಿಶೇಷವಾಗಿ ಕಲಬುರಗಿ ನಗರದಲ್ಲಿ ಈಡಿಸ್ ಸೊಳ್ಳೆಗಳ ನಿರ್ಮೂಲನೆಗೆ ಲಾರ್ವಾ ಸಮೀಕ್ಷೆ ತೀವ್ರಗೊಳಿಸಿದೆ ಎಂದು ಅವರು ತಿಳಿಸಿದ್ದಾರೆ.

ಪ್ರಸ್ತುತ 2025ನೇ ಕ್ಯಾಲೆಂಡರ್ ವರ್ಷದಲ್ಲಿ ಕಲಬುರಗಿ ನಗರದಲ್ಲಿ ಅಲ್ಲಲ್ಲಿ ಡೆಂಗ್ಯೂ ಪ್ರಕರಣ ಪತ್ತೆಯಾಗಿವೆಯಾದರು ಜನೇವರಿ ಮಾಹೆಯಿಂದ ಇಲ್ಲಿಯವರೆಗೆಯಾವುದೇ ಡೆಂಗ್ಯೂ ಖಚಿತ ಪ್ರಕರಣಗಳಿಂದ ಸಾವು ಸಂಭವಿಸಿಲ್ಲ ಎಂದು ಸ್ಪಷ್ಟಪಡಿಸಿರುವ ಜಿಲ್ಲಾಧಿಕಾರಿಗಳು, ಡೆಂಗ್ಯೂ ಪತ್ತೆಯಾದ ಪ್ರದೇಶಗಳಲ್ಲಿ ನಿಯಮಿತವಾಗಿ ಆಶಾ ಕಾರ್ಯಕರ್ತೆಯರು ಈಡೀಸ್ ಸೊಳ್ಳೆಗಳ ನಿರ್ಮೂಲನೆಗೆ ಲಾರ್ವಾ ಸಮೀಕ್ಷೆ ಕೈಗೊಂಡು ಇದರ ಹತೋಟಿಗೆ ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ ಎಂದಿದ್ದಾರೆ.

ಇದಲ್ಲದೆ ವಿಶೇಷವಾಗಿ ಪ್ರತಿ ಶುಕ್ರವಾರ ನಗರ–ಪಟ್ಟಣ ಪ್ರದೇಶದಲ್ಲಿ ಗ್ರಾಮೀಣ ಪ್ರದೇಶದಿಂದ ಆರೋಗ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಈಡೀಸ್ ಸೊಳ್ಳೆಗಳ ಲಾರ್ವಾ ಸಮೀಕ್ಷೆ, ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಮತ್ತು ನಿಯಂತ್ರಣ ಕ್ರಮಗಳ ಚಟುವಟಿಕೆಗಳು ತೀವ್ರಗೊಳಿಸಿದೆ. ಸಾರ್ವಜನಿಕರಲ್ಲಿ ಡೆಂಗ್ಯೂ ಕುರಿತು ಆರೋಗ್ಯ ಶಿಕ್ಷಣ ನೀಡುವುದಕ್ಕಾಗಿ ಕಲಬುರಗಿ ಮಹಾನಗರ ಪಾಲಿಕೆ, ಸ್ಥಳೀಯ ಸಂಸ್ಥೆ ಮತ್ತು ಜಿಲ್ಲಾ ಪಂಚಾಯತಿಯಿಂದ ಗ್ರಾಮ ಪಂಚಾಯತಿಯ ಸ್ವಚ್ಛತಾ ವಾಹಿನಿಯ ಮೂಲಕ ಜಿಂಗಲ್ ಹಾಗೂ ಹಾಡುಗಳ ಮೂಲಕ ಪ್ರಸಾರದ ಮುಲಕ ಸಹ ಜನರಲ್ಲಿ ಜಾಗೃತಿ ಉಂಟು ಮಾಡುವ ಕೆಲಸ ಮಾಡಲಾಗುತ್ತಿದೆ. ನೀರು ನಿಂತ ಪ್ರದೇಶದಲ್ಲಿ ಈಡಿಸ್ ಸೊಳ್ಳೆ ತಿನ್ನುವ ಗಪ್ಪೆ, ಜಾಂಬೂಸಿಯಾ ಮೀನುಗಳು ಬಿಡಲಾಗುತ್ತಿದೆ ಎಂದಿದ್ದಾರೆ.

ಖಾಸಗಿ ಆಸ್ಪತ್ರೆಯಲ್ಲಿ ಡೆಂಗ್ಯೂ ಕಿಟ್ ಮೂಲಕ ಪರೀಕ್ಷಿಸಿದ ನಂತರ ಸಂಶಯಾಸ್ಪದ ಚಿಕನ್‌ಗುನ್ಯಾ, ಡೆಂಗ್ಯೂ ಪಾಸಿಟಿವ್ ಬಂದಲ್ಲಿ ರೋಗಿಯ ಇನ್ನೊಂದು ಸ್ಯಾಂಪಲ್ ಪಡೆದು ಅದನ್ನು ಜಿಲ್ಲೆಯ ಡಿ.ಪಿ.ಎಚ್.ಎಲ್ ಮತ್ತು ವಿ.ಆರ್.ಡಿ.ಎಲ್ ಲ್ಯಾಬ್ ಗಳಿಗೆ ಕಳುಹಿಸಿ ಪರೀಕ್ಷಿಸಿ ಖಚಿತಪಡಿಸಿಕೊಳ್ಳಬೇಕೆಂದು ಆಸ್ಪತ್ರೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಡೆಂಗ್ಯೂ, ಚಿಕನ್ ಗುನ್ಯಾ ಪ್ರಕರಣದಲ್ಲಿ ಅನಗತ್ಯ ಭಯ ಪಡುವ ಅವಶ್ಯತೆ ಇಲ್ಲ. ಸಾರ್ವಜನಿಕರು ಸ್ವಚ್ಛತೆ, ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು. ಮನೆ ಸುತ್ತಮುತ್ತ ನೀರು ಶೇಖರಣೆಯಾಗದಂತೆ ನೋಡಿಕೊಳ್ಳಬೇಕು. ಈಡಿಸ್ ಸೊಳ್ಳೆ ಉತ್ಪತ್ತಿ ಸ್ಥಾನ ಸಂಪೂರ್ಣವಾಗಿ ನಿರ್ಮೂಲನೆಗೊಳಿಸಬೇಕು. 20,000 ಪ್ಲೇಟ್ ಲೇಟ್‌ಗಳು ಇರುವವರೆಗೂ ಭಯ ಪಡಬೇಕಿಲ್ಲ ಎಂದಿರುವ ಜಿಲ್ಲಾಧಿಕಾರಿಗಳು, ಈ ಜ್ವರವು ಸಾಮಾನ್ಯ ಒಂದು ವೈರಸ್ ನಿಂದ ಬರುತ್ತಿದ್ದು, ಇಂತಹ ಜ್ವರ ಪ್ರಕರಣಗಳಲ್ಲಿ ಪ್ಯಾರಾಸಿಟಾಮೋಲ್ ಮಾತ್ರೆಗಳನ್ನು ನೀಡುವದರ ಮೂಲಕ ಶೇ.90ರಷ್ಟು ರೋಗಿಗಳು ಪ್ರಾಥಮಿಕ ಚಿಕಿತ್ಸೆದಿಂದಲೇ ಗುಣಮುಖಪಡಿಸಬಹುದಾಗಿದೆ ಎಂದಿದ್ದಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಬೆಡ್ ಮೀಸಲು: ಡೆಂಗ್ಯೂ, ಚಿಕನ್ ಗುನ್ಯಾ ಲಕ್ಷಣ ಕಂಡುಬಂದಲ್ಲಿ ಕೂಡಲೆ ವೈದ್ಯರನ್ನು ಕಾಣಬೇಕು. ಡೆಂಗ್ಯೂ ರೋಗಿಗಳ ಚಿಕಿತ್ಸೆಗಾಗಿ ಮುಂಜಾಗ್ರತೆ ಕ್ರಮವಾಗಿ ಜಿಲ್ಲೆಯಾದ್ಯಂತ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತಲಾ 2, ಸಮುದಾಯ ಆರೋಗ್ಯ ಕೇಂದ್ರದಲ್ಲಿ ತಲಾ 5, ತಾಲ್ಲೂಕು ಆಸ್ಪತ್ರೆಗಳಲ್ಲಿ ತಲಾ 10, ಜಿಮ್ಸ್ ಮತ್ತು ಇ.ಎಸ್.ಐ.ಸಿ ಆಸ್ಪತ್ರೆಗಳಲ್ಲಿ ತಲಾ 20 ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ. ಶೇ.5 ರಿಂದ 10 ರಷ್ಟು ರೋಗಿಗಳು ಮಾತ್ರ ಕ್ಲಿಷ್ಟಕರ ಸಂದರ್ಭಗಳಿಗೆ ಒಳಗಾಗುವ ಸಂಭವ ಇರುತ್ತದೆ. ಇಂತಹ ರೋಗಿಗಳಿಗೆ ವಿಶೇಷ ಆರೈಕೆಗೆಂದೆ ಜಿಲ್ಲಾ ಆಸ್ಪತ್ರೆಯಲ್ಲಿ ಒಂದು ವಿಶೇಷ ವಾರ್ಡ್ ಸ್ಥಾಪಿಸಿದೆ.

# ಸಿ.ಎಂ.ಕಾರ್ಯಕ್ರಮ ಹಿನ್ನೆಲೆ

## ಯಡ್ರಾಮಿಗೆ ಡಿ.ಸಿ.ಭೇಟಿ,ಕಾರ್ಯಕ್ರಮ ಸ್ಥಳ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೆ.ಕೆ.ಅರ್.ಡಿ.ಬಿ. ಮಂಡಳಿ ಅನುದಾನದಲ್ಲಿ ನಿರ್ಮಿಸಲಾಗುವ "ಪ್ರಜಾ ಸೌಧ" ಕಟ್ಟಡಗಳ ಶಂಕುಸ್ಥಾಪನೆ ನೆರವೇರಿಸಲು ಜನವರಿ ಮಾಹೆಯಲ್ಲಿ ಯಡ್ರಾಮಿ ಪಟ್ಟಣಕ್ಕೆ ಮುಖ್ಯಮಂತ್ರಿಗಳು ಆಗಮಿಸುವ ಹಿನ್ನೆಲೆಯಲ್ಲಿ ಇತ್ತೀಚೆಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಯಡ್ರಾಮಿ ಪಟ್ಟಣಕ್ಕೆ ಭೇಟಿ ನೀಡಿ ಕಾರ್ಯಕ್ರಮ ನಡೆಯುವ ಸ್ಥಳ ಪರಿಶೀಲಿಸಿದರು.

ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯ, ಯಡ್ರಾಮಿ ತಹಶಿಲ್ದಾರ ಯಲ್ಲಪ್ಪ ಸುಬೇದಾರ ಸೇರಿದಂತೆ ತಾಲೂಕಾ ಅಧಿಕಾರಿಗಳೊಂದಿಗೆ ಯಡ್ರಾಮಿ ಪಟ್ಟಣದಲ್ಲಿ ಸರ್ಕಾರಿ ಪ್ರೌಢ ಶಾಲೆ ಆವರಣ ಸ್ಥಳ ಪರಿಶೀಲಿಸಿದ ಅವರು, ಯಾವುದೇ ಲೋಪವಿಲ್ಲದಂತೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿಸಲು ಎಲ್ಲಾ ರೀತಿಯ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಸೂಚಿಸಿದರಲ್ಲದೆ ಹೆಲಿಕಾಪ್ಟರ್ ಲ್ಯಾಂಡ್ ಆಗುವ ಹೆಲಿಪ್ಯಾಡ್ ಸ್ಥಳ ಸಹ ಪರಿಶೀಲಿಸಿದರು.

ತದನಂತರ ಯಡ್ರಾಮಿ ಪಟ್ಟಣದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರ ಸಮಸ್ಯೆ ಆಲಿಸಿದರು. ಅಂಬೇಡ್ಕರ್ ವಸತಿ ನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ತಾಲೂಕಾ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಜನರ ಸಮಸ್ಯೆಗಳನ್ನು ಪ್ರಥಮಾದ್ಯತೆ ಮೇಲೆ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇದಲ್ಲದೆ ಪಟ್ಟಣದಲ್ಲಿ ನಗರೋತ್ಥಾನ ಯೋಜನೆಯಡಿ ನಡೆಯುತ್ತಿರುವ ರಸ್ತೆ ಕಾಮಗಾರಿಗಳ ಗುಣಮಟ್ಟ ಸಹ ಪರಿಶೀಲಿಸಿದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿಗಳು ಜವಳಗಾ

ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಕೆಲ ಹೊತ್ತು ಚಿಣ್ಣರೊಂದಿಗೆ ಸಮಯ ಕಳೆದರು. ಆಲೂರು ಗ್ರಾಮದ ಕಾಟನ್ ಮಾರುಕಟ್ಟೆಗೆ

ಭೇಟಿ ನೀಡಿ ಹತ್ತಿ ಬೆಳೆಗಾರರ ಅನುಭವಿಸುತ್ತಿರುವ ಸಮಸ್ಯೆಗಳಿಗೆ ಕಿವಿಯಾದರು. ಅರಳಗುಂಡಗಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿ ನೀಡಲಾಗುತ್ತಿರುವ ವೈದ್ಯಕೀಯ ಚಿಕಿತ್ಸೆ ಕುರಿತು ರೋಗಿಗಳಿಂದಲೆ ಮಾಹಿತಿ ಪಡೆದರು.

# ಕರಾವಳಿ ಉತ್ಸವ ಮ್ಯಾರಾಥಾನ್ ಓಟ

ಜಿಲ್ಲಾಡಳಿತದ ವತಿಯಿಂದ ಕರಾವಳಿ ಉತ್ಸವ–2025 ರ ಅಂಗವಾಗಿ ಡಿಸೇಂಬರ್ 26 ರಂದು ರವೀಂದ್ರನಾಥ ಠಾಗೋರ ಕಡಲತೀರದಲ್ಲಿ ಮ್ಯಾರಾಥಾನ್ (ಪುರುಷ ಮತ್ತು ಮಹಿಳೆಯರಿಗೆ 21 ಕೀ.ಮೀ, 10 ಕೀ.ಮೀ, 5 ಕೀ.ಮೀ), ಹಗ್ಗಜಗ್ಗಾಟ (ಪುರುಷ ಮತ್ತು ಮಹಿಳೆಯರು), ವಾಲಿಬಾಲ್ (ಪುರುಷ ಮತ್ತು ಮಹಿಳೆಯರು) ಮತ್ತು ಕಬ್ಬಡ್ಡಿ (ಪುರುಷರಿಗೆ ಮಾತ್ರ) ಪಂದ್ಯಾವಳಿಯನ್ನು ಆಯೋಜಿಸಲಾಗುತ್ತಿದೆ.

ಈ ಪಂದ್ಯಾವಳಿಗಳಲ್ಲಿ ಭಾಗವಹಿಸುವ ಸ್ಪರ್ಧಾಳುಗಳು ದಿನಾಂಕ: 24–12–2025 ರ ಸಂಜೆ 6.00 ಗಂಟೆಯೊಳಗಾಗಿ ಹೆಸರನ್ನು ಗೂಗಲ್ ಫಾರ್ಮ ಲಿಂಕ್ : https://forms.gle/UFkd-jPcouTYvqyyB6 ರಲ್ಲಿ ನೋಂದಾಯಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಶ್ರೀ ಶಿವಾನಂದ ನಾಯ್ಕ, ಅಥ್ಲೆಟಿಕ್ ತರಬೇತುದಾರರು ಮೊ.ನಂ: 8722516856 ಕ್ಕೆ ಹಾಗೂ ಕಚೇರಿ ಮೊಬೈಲ್ ಸಂ: 9480886551 ಕ್ಕೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

**ಸೂಚನೆಗಳು:**

**1. ಮ್ಯಾರಾಥಾನ್ ಸ್ಪರ್ಧೆಯನ್ನು ಬೆಳಿಗ್ಗೆ ಸರಿಯಾಗಿ 6.00 ಗಂಟೆಗೆ ಏರ್ಪಡಿಸಲಾಗುವುದು**

**2. ಗುಂಪು ಸ್ಪರ್ಧೆಗಳನ್ನು ಬೆಳಿಗ್ಗೆ 10.00 ಗಂಟೆಗೆ ಏರ್ಪಡಿಸಲಾಗುವುದು.**

**3. ಮ್ಯಾರಾಥಾನ್ ಸ್ಪರ್ಧೆಯಲ್ಲಿ ಭಾವಹಿಸಿದ ಸ್ಪರ್ಧಾಳುಗಳಿಗೆ ಟಿ.ಶರ್ಟ ವಿತರಿಸಲಾಗುವುದು ಹಾಗೂ ಫಿನಿಶಿಂಗ್ ಮಾಡಿದ ಸ್ಪರ್ಧಾಳುಗಳಿಗೆ ಮೆಡಲ್ಸ್ ಮತ್ತು ಸರ್ಟಿಫಿಕೇಟ್ ನೀಡಲಾಗುವುದು.**

**4. ಊಟೋಪಹಾರದ ವ್ಯವಸ್ಥೆ ಇರುತ್ತದೆ.**

**5. ಮ್ಯಾರಾಥಾನ್ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ಸ್ಪರ್ಧಾಳುಗಳಿಗೆ ನಗದು ಬಹುಮಾನ ಮತ್ತು ಪದಕ ನೀಡಲಾಗುವುದು.**

**6. ಗುಂಪು ಕ್ರೀಡೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ತಂಡಗಳಿಗೆ ನಗದು ಬಹುಮಾನ ಮತ್ತು ಟ್ರೋಫಿ ನೀಡಲಾಗುವುದು.**

**7. ಎಲ್ಲಾ ಗುಂಪು ಕ್ರೀಡೆಯ ಸ್ಪರ್ಧಾಳುಗಳು ಬೆಳಿಗ್ಗೆ. 9.00 ಗಂಟೆಗೆ ಹಾಜರಿರತಕ್ಕದ್ದು.**

**8. ಆನ್‌ಲೈನ್ ಲಿಂಕ್ ಮೂಲಕ ನೋಂದಣಿಗೊಂಡ ಸ್ಪರ್ಧಾಳುಗಳು ಮತ್ತು ತಂಡಗಳಿಗೆ ಮಾತ್ರ ಭಾಗವಹಿಸಲು ಅವಕಾಶ ನೀಡಲಾಗುವುದು.**

**9. ಕ್ರೀಡಾಕೂಟ ನಡೆಯುವ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗಿದ್ದಲ್ಲಿ ಸಂಘಟಕರು ಜವಾಬ್ದಾರರಾಗಿರುವುದಿಲ್ಲ**

**11. ಯಾವುದೇ ಸಮಯದಲ್ಲಿ ಸಂಘಟಕರ ತೀರ್ಮಾನವೇ ಅಂತಿಮವಾಗಿರುತ್ತದೆ.**

**12. ಭಾಗವಹಿಸುವ ಸ್ಪರ್ಧಾಳುಗಳಿಗೆ ಪ್ರಯಾಣ ಭತ್ಯೆ ಇರುವುದಿಲ್ಲ ಎಂದು ಸಹಾಯಕ ನಿರ್ದೇಶಕರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಾರವಾರ ಅವರ ಪ್ರಕಟಣೆ ತಿಳಿಸಿದೆ.**

ಕರಾವಳಿ ಉತ್ಸವಕ್ಕೆ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗು ಸಚಿವರಿಗೆ ಆಹ್ವಾನ.ಡಿಸೇಂಬರ್ 22 ರಿಂದ 28 ರ ವರೆಗೆ ರವೀಂದ್ರನಾಥ ಠಾಗೂರ್ ಕಡಲ ತೀರದಲ್ಲಿ ನಡೆಯುವ ಕರಾವಳಿ ಉತ್ಸವ ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು, ಪ್ರವಾಸೋದ್ಯಮ ಸಚಿವರು ಮತ್ತು ಕಂದಾಯ ಸಚಿವರಿಗೆ, ಜಿಲ್ಲಾ ಉಸ್ತುವಾರಿ ಸಚಿವ ಮಾಂಕಾಳ ಎಸ್ ವೈದ್ಯ ಅವರು ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ನೀಡಿ, ಕಾರ್ಯಕ್ರಮಕ್ಕೆ ಆಹ್ವಾನಿಸಿದರು.ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯ ಮತ್ತು ಜಿ. ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಉಪಸ್ಥಿತರಿದ್ದರು.

# ನೂತನ ಅಧ್ಯಕ್ಷೆ ಪ್ರಿಯಾ ಆರ್. ಪೊಲೀಸ್ ಪಾಟೀಲ್ ನೇತೃತ್ವದಲ್ಲಿ ಮೊದಲ ಸಭೆ



" ಪುರಸಭೆಯ ಜೆಸಿಬಿ ಯಂತ್ರವನ್ನು ನಿರ್ವಹಣಾ ಮಾಡಲು ಸಾಕಷ್ಟು ಹಣವನ್ನು ಮೀಸಲಿಟ್ಟು ಹಣ ದುರ್ಬಳಕೆ ಆಗುತ್ತಿದೆ ಎಂದು ವಾದಿಸಿದರು. ವಿಮೆ ಇಲ್ಲದ ಜೆಸಿಬಿ ಯಂತ್ರಗಳನ್ನು ತಾವು ರಸ್ತೆಗೆ ತಂದಿದ್ದೀರಿ .ಇಂದು ಜೆಸಿಬಿ ಯಂತ್ರ ಕಾಣ್ತಿಲ್ಲ ಇದರ ಬಗ್ಗೆ ಮಾಹಿತಿ ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಅನವಶ್ಯಕ ಹಣ ಪೋಲು ಆದರೆ ತಾವೂ ಪೂರ್ತಿ ಲೆಕ್ಕ ಕೊಡಲು ಸಿದ್ಧರಿರಬೇಕು ಎಂದು ಗಮನ ಸೆಳೆದರು."

ರಮ್ಯಾ ರಾಘವೇಂದ್ರ ದೇಶಪಾಂಡೆ.
(ಪುರಸಭೆ ಸದಸ್ಯರು, ವಾರ್ಡ್ ನಂ. 05)

ಕುಡಿಯುವ ನೀರಿನ ಜೆಜೆಎಂ ಕಾರ್ಯವೂ ನಮ್ಮ ಏರಿಯಾದಲ್ಲಿ ನೀರು ಬರುತ್ತಿಲ್ಲ ಇದರ ಬಗ್ಗೆ ನಮಗೆ ಮಾಹಿತಿ ನೀಡಬೇಕು ಹಾಗೆ ರಸ್ತೆ ಹಾಳಾಗಿ ದೂಳು ಎಲ್ಲೆಂದರಲ್ಲಿ ಬರುತ್ತಿದೆ. ಡಿಸೆಂಬರ್ ಕೊನೆಯ ತಿಂಗಳಿಗೆ ಬಂದಿದ್ದೇವೆ ಇನ್ನೂ ಜೆಜೆಎಂ ಕೆಲಸ ಮುಗಿದಿಲ್ಲ ಪ್ರತಿ ಮನೆಗೆ ನೀರು ಬರುವುದು ಯಾವಾಗ.

ರವಿಶಂಕರ ಸೊನ್ನದ
(ಪುರಸಭೆ ಸದಸ್ಯರು, ವಾರ್ಡ್ ನಂ. 03)

ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ : ಪುರಸಭೆಯ ಸಾಮನ್ಯ ಸಭೆಯು ಪ್ರಮುಖ ನಿರ್ಧಾರ ಕೈಗೊಳ್ಳುವ ವೇದಿಕೆಯಾಗಿದೆ. ಪಟ್ಟಣದ ಅಭಿವೃದ್ಧಿ ಹಾಗೂ ಮೂಲಭೂತ ಸೌಲಭ್ಯಗಳ ಬಗ್ಗೆ ಚರ್ಚಿಸಿ ತೀರ್ಮಾನಗಳನ್ನು ತೆಗೆದುಕೊಳ್ಳಲಾಗುತ್ತದೆ. ಪ್ರತಿ ವಾರ್ಡ್ನಲ್ಲಿರುವ ಸಮಸ್ಯೆಗಳ ಬಗ್ಗೆ ಎಲ್ಲಾ ಸದ್ಯಸರು ಪ್ರಸ್ತಾವನೆ ಸಲ್ಲಿಸಿ ಚರ್ಚೆ ಮಾಡಬೇಕು ಎಂದು ಪುರಸಭೆ ಅಧ್ಯಕ್ಷೆ ಪ್ರೀಯಾ ರಾಮನಗೌಡ ಪೊಲೀಸ್ ಪಾಟೀಲ್ ಹೇಳಿದರು. ಬುಧವಾರ ಜರುಗಿದ ಪುರಸಭೆ ಸಾಮನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಹಿಳೆಯರಿಗೆ ಶೌಚಾಲಯಗಳ ಬಗ್ಗೆ, ಪಟ್ಟಣದ ಅಭಿವೃದ್ಧಿ ಬಗ್ಗೆ ಹಲವಾರು ದೂರುಗಳು ಕೇಳಿ ಬರುತ್ತಿವೆ, ಹಲವಾರು ಕಡೆ ಚರಂಡಿ ಸಮಸ್ಯೆ, ನೀರಿನ ಸಮಸ್ಯೆ ಇದ್ದು. ಪುರಸಭೆ ಅಧಿಕಾರಿಗಳು ಎಚ್ಚೆತ್ತು–ಕೊಂಡು ದೂರುಗಳ ಬರದಂತೆ, ಸಮಸ್ಯೆ ಬಗೆಹರಿಸಲು ಮುಂದಾಗಬೇಕು ಎಂದವರು. ಆಯಾಯ ವಾರ್ಡ್‌ಗಳಿಂದ ಚುನಾಯಿತರಾದ ಪ್ರತಿನಿಧಿಗಳು ತಮ್ಮ ವಾರ್ಡ್‌ನ ಸಮಸ್ಯೆಗಳನ್ನು ಮಂಡಿಸಬೇಕು. ಸಭೆಯ ಕಾರ್ಯದರ್ಶಿ ಪುರಸಭೆ ಮುಖ್ಯಾಧಿಕಾರಿಗಳು, ನಿರ್ಣಯಗಳ ಕೈಗೊಳ್ಳುವು ಮೂಲಕ ಜಾರಿಗೆ ಬರುವಂತೆ ಕ್ರಮವಹಿಸಲು ಸೂಚಿಸಿದರು. ಈ ಸಂದರ್ಭದಲ್ಲಿ ಪುರಸಭೆಯ ಸದಸ್ಯರು, ನಾಮನಿರ್ದೇಶಿತ ಸದಸ್ಯರು ಮುಖ್ಯಾಧಿಕಾರಿ, ಪುರಸಭೆ ಸಿಬ್ಬಂದಿಗಳು, ಸೇರಿದಂತೆ ಇಂಜಿನಿಯರ್ ಉಪಸ್ಥಿತರಿದ್ದರು.

# ಡಿ.20 ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಜಾಗೃತಿ ಜಾಥಾ

ಮಲ್ಲಮ್ಮ ನುಡಿ ವಾರ್ತೆ ,ವಿಜಯನಗರ(ಹೊಸಪೇಟೆ) : ಡಿ.21 ರಿಂದ 24 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪ್ರಯುಕ್ತ ಜಿಲ್ಲಾಡಳಿತ, ರೋಟರಿ ಕ್ಲಬ್, ಭಾರತೀಯ ವೈದ್ಯಕೀಯ ಸಂಘ, ವಿಶೇಷ ಚೇತನರ ಸಂಘಟನೆಗಳ ವೇದಿಕೆ, ಮಲ್ಲಿಗೆ ಪ್ಯಾರಾ ಮೆಡಿಕಲ್ ಕಾಲೇಜ್, ತುಂಗಭದ್ರ ಸ್ಕೂಲ್ ಆಫ್ ನರ್ಸಿಂಗ್ ಮತ್ತು ಟಿಎಂಇ ಸೊಸೈಟಿ ಆಫ್ ನರ್ಸಿಂಗ್ ಕಾಲೇಜ್ ಸಹಯೋಗದಲ್ಲಿ ಡಿ.20 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿಯ ಆವರಣದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಜಾಗೃತಿ ಜಾಥಾವನ್ನು ಹಮ್ಮಿಕೊಳಲಾಗಿದೆ.

ಜಾಗೃತಿ ಜಾಥಾವು ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಿಂದ ಆರಂಭಿಸಿ ಪುಣ್ಯಮೂರ್ತಿ ವೃತ್ತ, ಬಸ್ ನಿಲ್ದಾಣ, ಡಾ. ಪುನೀತ್ ರಾಜ್ ಕುಮಾರ್ ಸರ್ಕಲ್, ಅಂಬೇಡ್ಕರ್ ಸರ್ಕಲ್, ರಾಮಾ ಟಾಕೀಸ್, ಮಾರ್ಗವಾಗಿ ಮಸೀದಿ ಮಾರ್ಗದಿಂದ ತಾಯಿ ಮತ್ತು ಮಕ್ಕಳ ಆಸ್ಪತ್ರೆವರೆಗೆ ಕೊನೆಗೊಳ್ಳಲಿದೆ ಎಂದು ಜಿಲ್ಲಾ ಆರೋಗ್ಯ ಕುಟುಂಬ ಮತ್ತು ಕಲ್ಯಾಣಾಧಿಕಾರಿ ಶಂಕರ್ ನಾಯ್ಕ್ ತಿಳಿಸಿದ್ದಾರೆ.

# ಡಿ.20 ರಂದು ಜೆಸ್ಕಾಂ ನಗರ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ) : ಹೊಸಪೇಟೆ ನಗರ ಉಪ ವಿಭಾಗ–1 ಕಚೇರಿಯಲ್ಲಿ ಡಿಸೆಂಬರ್.20 ರಂದು ಮದ್ಯಾಹ್ನ 4 ಗಂಟೆಯಿಂದ 5 ಗಂಟೆಯ ವರಗೆ ಜೆಸ್ಕಾಂ ನಗರ ಉಪ ವಿಭಾಗ–1 ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಗ್ರಾಹಕರು ಸಭೆಗೆ ಭಾಗವಹಿಸಿ ವಿದ್ಯುತ್ ಸಮಸ್ಯೆ ಇದ್ದಲ್ಲಿ ಅಹವಾಲು ಸಲ್ಲಿಸಿ ಪರಿಹರಿಸಿಕೊಳ್ಳಬೇಕು ಎಂದು ಕಾರ್ಯ ಪಾಲನೆ ನಗರ ಉಪ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ ಗ್ರಾಹಕರ ಸಂವಾದ ಸಭೆ.

ವಿಜಯನಗರ(ಹೊಸಪೇಟೆ) ಹೊಸಪೇಟೆ ನಗರ ಉಪ ವಿಭಾಗ–2 ಕಚೇರಿಯಲ್ಲಿ ಡಿಸೆಂಬರ್.20 ರಂದು ಮದ್ಯಾಹ್ನ 4 ಗಂಟೆಯಿಂದ 5 ಗಂಟೆಯ ವರಗೆ ಜೆಸ್ಕಾಂ ನಗರ ಉಪ ವಿಭಾಗ–2 ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಗ್ರಾಹಕರು ಸಭೆಗೆ ಭಾಗವಹಿಸಿ ವಿದ್ಯುತ್ ಸಮಸ್ಯೆ ಇದ್ದಲ್ಲಿ ಅಹವಾಲು ಸಲ್ಲಿಸಿ ಪರಿಹರಿಸಿಕೊಳ್ಳಬೇಕು ಎಂದು ಕಾರ್ಯ ಪಾಲನೆ ನಗರ ಉಪ ವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರೀಯ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶಾತಿ ಪ್ರಕ್ರಿಯೆ ಆರಂಭ: ಜನವರಿ 14 ಅರ್ಜಿ ಸಲ್ಲಿಸಲು ಕೊನೆ ದಿನಾಂಕ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ 2026ನೇ ಶೈಕ್ಷಣಿಕ ಸಾಲಿನಲ್ಲಿ ಬಿ.ಎಡ್ ಕೋರ್ಸ್ ಒಳಗೊಂಡಂತೆ 35 ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ವ್ಯಾಸಂಗಕ್ಕೆ ಪ್ರವೇಶಾತಿ ಪ್ರಕ್ರಿಯೆ ಆರಂಭಗೊಂಡಿದು, ನ್ಯಾಷನಲ್ ಟೆಸ್ಟ್ ಏಜೆನ್ಸಿ ನಡೆಸುವ ಪ್ರವೇಶ ಪರೀಕ್ಷೆಗೆ ಆನ್‌ಲೈನ್ ಮೂಲಕ (ßಣಣಠಿ://ಜಥಚಿಥ.ಟಿಣಚಿ.ಟುಛಿ.ಟಿ/ ಛಿಣಜಣ–ಠಿರ/) ಅರ್ಜಿ ಸಲಿಸಲು 2026ರ ಜನವರಿ 14 ಕೊನೆ ದಿನವಾಗಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ಗುರುವಾರ ಕಲಬುರಗಿ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಡಿ.14 ರಿಂದ ಆನ್‌ಲೈನ್ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಜನವರಿ 14 ರೊಳಗೆ ಆನ್‌ಲೈನ್ ಮೂಲಕವೇ ಶುಲ್ಕ ಪಾವತಿಯೊಂದಿಗೆ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕೊನೆ ದಿನವಾಗಿದೆ. ಅರ್ಜಿಯಲ್ಲಿ ಏನಾದರೂ ತಿದ್ದುಪಡಿ ಮಾಡುವುದಿದ್ದಲ್ಲಿ ಜನವರಿ 18 ರಿಂದ 20 ವರೆಗೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಕಂಪ್ಯೂಟರ್ ಆಧಾರಿತ ಪರೀಕ್ಷೆ ಇದಾಗಿದ್ದು, ಭಾಷಾ ಪ್ರಶ್ನೆ ಪತ್ರಿಕೆಗಳು ಹೊರತು ಪಡಿಸಿ ಉಳಿದ ಎಲ್ಲಾ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕೇವಲ ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿರಲಿವೆ ಎಂದರು.

ಪರೀಕ್ಷೆ ನಡೆಯುವ ಸ್ಥಳ, ದಿನಾಂಕ, ಪ್ರವೇಶ ಕಾರ್ಡ್, ಫಲಿತಾಂಶ ಎಲ್ಲವು ಎನ್.ಟಿ.ಎ ವೆಬ್‌ಸೈಟ್ ಮೂಲಕವೇ ತಿಳಿಸಲಾಗುತ್ತದೆ. ಹೀಗಾಗಿ ವಿದ್ಯಾರ್ಥಿಗಳು https://nta.ac.in/,https://exams.nta.nic.in/cuet-pg/ ವೆಬ್‌ಸೈಟ್ ನಿರಂತರವಾಗಿ ವೀಕ್ಷಿಸಬೇಕು ಮತ್ತು ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದಲ್ಲಿನ ಪಿ.ಜಿ.ಕೋರ್ಸ್ ವಿವರಗಳನ್ನು ವಿ.ವಿ.ಯ ಅಂತರ್ಜಾಲದಿಂದ ಪಡೆಯಬಹುದಾಗಿದೆ ಎಂದು ಪ್ರವೇಶ ಪರೀಕ್ಷೆಯ ವಿವಿಧ ಹಂತಗಳ ಕುರಿತು ಕುಲಪತಿಗಳು ಮಾಹಿತಿ ನೀಡಿದರು.

ಪ್ರಸಕ್ತ ಪದವಿಯ 5ನೇ ಮತ್ತು 6ನೇ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ಸ್ನಾತಕ ಪದವಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳು ಪ್ರವೇಶಾತಿ ಪರೀಕ್ಷೆ ಬರೆಯಲು ಅರ್ಹರಿದ್ದಾರೆ. ಮುಂದಿನ ವರ್ಷದ ಮಾರ್ಚ್‌ನಲ್ಲಿ ಪ್ರವೇಶ ಪರೀಕ್ಷೆ ನಡೆದು ಏಪ್ರಿಲ್–ಮೇನಲ್ಲಿ ಪರೀಕ್ಷಾ ಫಲಿತಾಂಶ ಪ್ರಕಟವಾಗಲಿದೆ. ತದನಂತರ ಜೂನ್–ಜುಲೈ ಮಾಹೆಯಲ್ಲಿ ಪ್ರವೇಶಾತಿ ಪ್ರಕ್ರಿಯೆ ನಡೆಯಲಿದೆ. ಹೀಗಾಗಿ ಪದವಿಯ ಅಂತಿಮ ವರ್ಷದಲ್ಲಿ ಓದುತ್ತಿರುವ ಅಭ್ಯರ್ಥಿಗಳು ಸಹ ಎನ್.ಎ.ಟಿ. ನಡೆಸುವ ಪ್ರವೇಶ ಪರೀಕ್ಷೆ ಬರೆಯಬಹುದಾಗಿದೆ ಎಂದು ಅವರು ತಿಳಿಸಿದರು.

ದೇಶದಲ್ಲಿನ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಪ್ರವೇಶಾತಿ ಪಡೆಯಬೇಕಾದರೆ ಮೊದಲು ನ್ಯಾಷನಲ್ ಟೆಸ್ಟ್ ಏಜೆನ್ಸಿ ನಡೆಸುವ ಪ್ರವೇಶ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವುದು ಕಡ್ಡಾಯವಾಗಿದೆ. ಎನ್.ಎ.ಟಿ. ಫಲಿತಾಂಶ ಪ್ರಕಟಿಸಿದ ನಂತರ ವಿದ್ಯಾರ್ಥಿ ಬಯಸಿದಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಪ್ರವೇಶಕ್ಕೆ www.cuk.ac.in ಮೂಲಕವೇ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ. ಸಿ.ಯು.ಇ.ಟಿ. ಪಿ.ಜಿ–2026ರಲಿಲ ಗಳಿಸಿದ ಅಂಕ ಮತ್ತು ವಿ.ವಿ.ಯಲ್ಲಿ ಜಾರಿಯಲ್ಲಿರುವ ಮೀಸಲಾತಿ ಮತ್ತು ರೋಸ್ಟರ್ ನಿಯಮದಂತೆ ಪ್ರವೇಶಾತಿ ಕಲ್ಪಿಸಲಾಗುತ್ತದೆ. ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ 371ಜೆ ಅನ್ವಯ ಶೇ.8ರಷ್ಟು ಪ್ರವೇಶಾತಿ ಮೀಸಲಾತಿ ಇದ್ದು, ಈ ಭಾಗದ ವಿದ್ಯಾರ್ಥಿಗಳು ಇದರ ಪ್ರಯೋಜನೆ ಪಡೆಯುವಂತೆ ಪ್ರೊ. ಬಟ್ಟು ಸತ್ಯನಾರಾಯಣ ಮನವಿ ಮಾಡಿದರು.

ಅಗಇಖಿ (ಕಉ)–2026ಗೆ ಅರ್ಜಿ ಸಲ್ಲಿಸಲು ಯಾವುದೇ ಅಭ್ಯರ್ಥಿಯು ತೊಂದರೆಯನ್ನು ಎದುರಿಸಿದಲ್ಲಿ ದೂ.ಸಂ. 011–40759000 /011–69227700 ಅನ್ನು ಸಂಪರ್ಕಿಸಬಹುದು ಅಥವಾ ßಜಟಠಿಜಜಔ–ಛಿಣಜಣಠಿರ@ಟಣಚಿ.ಚಿಛಿ.ಟಿ ನಲ್ಲಿ ಇ–ಮೇಲ್ ಮೂಲಕ ಸಹ ಸಂವಹನ ಮಾಡಬಹುದು. ಅಭ್ಯರ್ಥಿಗಳು ಪರೀಕ್ಷೆಗೆ ಸಂಬಂಧಿಸಿದ ಅಪಡೇಟ್ ಮಾಹಿತಿಗೆ www.nta.ac.in ಮತ್ತು https://exams.nta.nic.in/cuet-pg/ ವೀಕ್ಷಿಸಬೇಕು. ಪ್ರವೇಶ ಪರೀಕ್ಷೆಯು ಸಂಪೂರ್ಣವಾಗಿ ಆನ್‌ಲೈನ್‌ನಲ್ಲಿ ನಡೆಯುವುದರಿಂದ ಭವಿಷ್ಯದ ಸಂವಹನಕ್ಕಾಗಿ ಅಭ್ಯರ್ಥಿಗಳು ಅರ್ಜಿಯಲ್ಲಿ ಸರಿಯಾದ ಇಮೇಲ್ ವಿಳಾಸ, ಮೊಬೈಲ್ ಸಂಖ್ಯೆ ನಮೂದಿಸಬೇಕು ಎಂದು ಪ್ರೊ. ಬಟ್ಟು ಸತ್ಯರಾಯಣ ಮನವಿ ಮಾಡಿದ್ದಾರೆ.

ಸಿ.ಯು.ಕೆ.ಯಲ್ಲಿ ಲಭ್ಯವಿರುವ ಕೋರ್ಸ್‌ಗಳು: ಎಂ.ಎ (ಇಂಗ್ಲೀಷ್), (ಹಿಂದಿ), (ಕನ್ನಡ), (ಭಾಷಾಶಾಸ್ತ್ರ), (ಜಾನಪದ ಮತ್ತು ಬುಡಕಟ್ಟು ಅಧ್ಯಯನ), (ಅರ್ಥಶಾಸ್ತ್ರ), (ಇತಿಹಾಸ), (ಸಾರ್ವಜನಿಕ ಆಡಳಿತ), (ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ) ಹಾಗೂ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ. ಎಂ.ಎಸ್ಸಿ. (ಗಣಿತ), (ಭೌತಶಾಸ್ತ್ರ), (ರಸಾಯನಶಾಸ್ತ್ರ), (ಭೂಗೋಳ), (ಭೂವಿಜ್ಞಾನ), (ಸಸ್ಯಶಾಸ್ತ್ರ), (ಪ್ರಾಣಿಶಾಸ್ತ್ರ) ಹಾಗೂ (ಅಂಕಿ ಅಂಶಗಳು ಮತ್ತು ದತ್ತಾಂಶ ವಿಶ್ಲೇಷಣೆ). ಎಂ.ಎಸ್ಸಿ. ಮನೋವಿಜ್ಞಾನ, ಜೆನೆಟಿಕ್ಸ್ ಮತ್ತು ಜೀನೋಮಿಕ್, ಎಂ.ಕಾಂ (ಬ್ಯಾಂಕಿಂಗ್ ಮತ್ತು ಹಣಕಾಸು ತಂತ್ರಜ್ಞಾನ), ಎಂ.ಕಾಂ, ಎಂ.ಬಿ.ಎ, ಎಂ.ಬಿ.ಎ (ಪ್ರವಾಸೋದ್ಯಮ ಮತ್ತು ಪ್ರಯಾಣ ನಿರ್ವಹಣೆ), ಸಮಾಜಕಾರ್ಯ, ಎಂ.ಸಿ.ಎ, ಎಲ್.ಎಲ್.ಎಂ, ಬಿ.ಎಡ್, ಎಂ.ಎಡ್, ಎಂ.ಟೆಕ್ ಪವರ್ & ಎನರ್ಜಿ ಇಂಜಿನೀಯರಿಂಗ್, ಎಂ.ಟೆಕ್ ಆರ್.ಎಫ್. & ಮೈಕ್ರೋವೇವ್ ಇಂಜಿನೀಯರಿಂಗ್, ಎಂ.ಟೆಕ್ ಎ.ಐ ಮತ್ತು ಎಂ.ಎಲ್., ಎಂಪಿಎ. ಹಿಂದೂಸ್ತಾನಿ ಗಾಯನ, ಎಂ.ಪಿ.ಎ. ಇನ್ಸ್ಟ್ರುಮೆಂಟಲ್ (ಹಿಂದೂಸ್ತಾನಿ ತಬಲಾ) ಹಾಗೂ ಮಾಸ್ಟರ್ ಆಫ್ ವಿಜುವಲ್ ಆರ್ಟ್ಸ್.

ಪತ್ರಿಕಾಗೋಷ್ಠಿಯಲ್ಲಿ ಕುಲಸಚಿವ ಪ್ರೊ. ಆರ್.ಆರ್.ಬಿರಾದಾರ, ಪರೀಕ್ಷಾ ನಿಯಂತ್ರಣಾಧಿಕಾರಿ ಡಾ. ಕೋಟಾ ಸಾಯಿಕೃಷ್ಣ, ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಗಣಪತಿ ಬಿ. ಸಿನ್ನೂರ ಉಪಸ್ಥಿತರಿದ್ದರು.

**5ನೇ ಮತ್ತು 6ನೇ ಸೆಮಿಷ್ಟರ್ ಅಭ್ಯರ್ಥಿಗಳು ಪ್ರವೇಶ ಪರೀಕ್ಷೆ ಬರೆಯಬಹುದು**

**-ಪ್ರೊ. ಬಟ್ಟು ಸತ್ಯನಾರಾಯಣ**

## ಶಿಕ್ಷಣದ ಜೊತೆಗೆ ಕೌಶಲ್ಯಗಳ ಜ್ಞಾನ ಮುಖ್ಯ: ಡಾ.ಶೋಭಾ ಜಿ.



ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಶಿಕ್ಷಣವು ಬದಲಾವಣೆಗಿಂತ ಪರಿವರ್ತನೆಯ ಜಾಗದಲ್ಲಿದೆ. ಶಿಕ್ಷಣದ ಜೊತೆಗೆ ಕೌಶಲ್ಯಗಳ ಜ್ಞಾನ ಬಹಳ ಮುಖ್ಯ ಎಂದು ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕಿ ಡಾ.ಶೋಭಾ ಜಿ. ಹೇಳಿದರು.

ಅವರು ಮಂಗಳವಾರ, ಕಾಲೇಜು ಶಿಕ್ಷಣ ಇಲಾಖೆ, ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು (ಸ್ವಾಯತ್ತ) ಕಾರವಾರ ಇವರ ಸಂಯುಕ್ತಾಶ್ರಯದಲ್ಲಿ ಹೋಟೆಲ್ ಈಡನ್ ನಲ್ಲಿ 'ಫಲಿತಾಂಶ ಆಧಾರಿತ ಶಿಕ್ಷಣ ಮತ್ತು ಕೌಶ್ಯಲ ಅಭಿವೃದ್ಧಿ' ವಿಷಯದ ಕುರಿತು ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿ ಕಲಿಕೆ ಮಾತ್ರವಲ್ಲ. ಕಲಿತದ್ದನ್ನು ಯಾವ ರೀತಿಯಲ್ಲಿ ಬಳಸಿಕೊಳ್ಳುತ್ತಾರೆ. ಕಲಿತದ್ದರಿಂದ ಹೇಗೆ ಪರಿವರ್ತನೆಯನ್ನು ಹೊಂದುತ್ತಾರೆ ಎನ್ನುವುದು ಎಲ್ಲರಿಗೂ ಒಂದು ಪ್ರಶ್ನೆಯಾಗಿದೆ. ಪುಸಕ್ತ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳಿಗೆ ಕೌಶಲ್ಯ, ಮನಸ್ಥಿತಿ, ವರ್ತನೆಗಳ ಜ್ಞಾನ ಬಹಳ ಮುಖ್ಯವಾಗುತ್ತದೆ. ಮನೋಭಾವ, ಮೌಲ್ಯಗಳು ಮತ್ತು ಡಿಜಿಟಲ್ ಕೌಶಲ್ಯಗಳು ವಿದ್ಯಾರ್ಥಿಗಳ ಮುಂದಿನ ಭವಿಷ್ಯದಲ್ಲಿ ಮಹತ್ವದ ಪಾತ್ರವಹಿಸುತ್ತದೆ. ಶಿಕ್ಷಣವು ವಿದ್ಯಾರ್ಥಿ ಭವಿಷ್ಯವನ್ನು ರೂಪಿಸುತ್ತದೆ. ಉಪನ್ಯಾಸಕರು ಕೌಶಲ್ಯಗಳ ಜ್ಞಾನವನ್ನು ಪಡೆದು ವಿದ್ಯಾರ್ಥಿಗಳನ್ನು ಬದಲಾವಣೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು(ಸ್ವಾಯತ್ತ) ಪ್ರಾಂಶುಪಾಲೆ ಗೀತಾ ಎಸ್ ವಾಲಿಕಾರ, ಹುಬ್ಬಳ್ಳಿ ದೇಶಪಾಂಡೆ ಎಜುಕೇಶನಲ್ ಟ್ರಸ್ಟ್‌ನ ಸಿಇಓ ಮತ್ತು ಮ್ಯಾನೇಜಿಂಗ್ ಟ್ರಸ್ಟಿಯ ಪಿ.ಎನ್.ನಾಯಕ್, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗ ಸದಸ್ಯ ಮತ್ತು ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಎ. ನಾರಾಯಣ, ಹುಬ್ಬಳ್ಳಿ ದೇಶಪಾಂಡೆ ಎಜುಕೇಶನಲ್ ಟ್ರಸ್ಟ್ನ ಮುಖ್ಯ ಕಾರ್ಯತಂತ್ರ ಅಧಿಕಾರಿ ಯೋಗೇಶ್ ಭಟ್, ರೂಸಾ ಸಂಯೋಜಕ ಡಾ.ಪ್ರಭಾಕರ್.ಎಮ್.ಸಿ, ರೂಸಾ ನೋಡಲ್ ಅಧಿಕಾರಿ ಡಿಸಿಇ ಡಾ.ಶ್ರೀಂಕಾತ ಆರ್. ಮತ್ತು ವಿವಿಧ ಕಾಲೇಜಿನ ಉಪನ್ಯಾಸಕರು ಉಪಸ್ಥಿತರಿದ್ದರು.

## ಸಂಪಾದಕ ರತ್ನ ಪ್ರಶಸ್ತಿಗೆ ಆಯ್ಕೆಯಾದ ಎಂ ಜಿ ಶ್ರೀನಿವಾಸ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ(ರಿ) ತುಮಕೂರು ಜಿಲ್ಲಾ ಘಟಕದಿಂದ ಕೊಡಮಾಡುವ 2024-25ನೇ ಸಾಲಿನ ಸಂಪಾದಕ ರತ್ನ ದತ್ತಿನಿಧಿ ರಾಜ್ಯ ಪ್ರಶಸ್ತಿಗೆ ಮಾನವೀಯ ಮೌಲ್ಯವುಳ್ಳ ಪರಿಣಾಮಕಾರಿ ವರದಿಗಳಿಗಾಗಿ ಜಿಲ್ಲೆಯ ಮುಂಚೂಣಿ ಪತ್ರಿಕೆಯಾದ ಪ್ರಜಾಪರ್ವ ಕನ್ನಡ ದಿನಪತ್ರಿಕೆ ಸಂಪಾದಕ ಎಂ.ಜೆ.ಶ್ರೀನಿವಾಸ ಅವರನ್ನು ಆಯ್ಕೆ ಮಾಡಲಾಗಿದೆ.



ಪ್ರಶಸ್ತಿಯು ನಗದು ಹಾಗೂ ಪ್ರಶಸ್ತಿ ಫಲಕವನ್ನು ಒಳಗೊಂಡಿದೆ. ಬೆಂಗಳೂರಿನಲ್ಲಿ ಡಿ.21ರ ಭಾನುವಾರದಂದು ನಡೆಯುವ ರಾಷ್ಟ್ರೀಯ ಪತ್ರಿಕಾ ದಿನಾಚರಣೆ, ಸಂಪಾದಕರ ರತ್ನ ರಾಜ್ಯ ದತ್ತಿ ನಿಧಿ ಪ್ರಶಸ್ತಿ ಹಾಗೂ ರಾಜಕಾರ್ಯಕಾರಿಣಿ ಸಭೆಯಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ತುಮಕೂರು ಕಾರ್ಯಕರ್ತ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷ ಜಿ.ಕರುಣಾಕರ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ಎನ್. ಮಂಜುನಾಥ ತಿಳಿಸಿದ್ದಾರೆ.

ಸದಾ ನವೀನತೆಯ ಸುದ್ದಿಗಳೊಂದಿಗೆ ಸಾಮಾಜಿಕ ಕಳಕಳಿಯ ವರದಿಗಳಿಂದ ಕೊಪ್ಪಳ ಜಿಲ್ಲೆಯ ಮನೆ ಮಾತಾಗಿರುವ ಪ್ರಜಾಪರ್ವ ದಿನಪತ್ರಿಕೆಯ ಸಂಪಾದಕ ಎಂ.ಜೆ ಶ್ರೀನಿವಾಸ ಅವರಿಗೆ 2024-25ನೇ ಸಾಲಿನ *ಸಂಪಾದಕ ರತ್ನ ದತ್ತಿನಿಧಿ ರಾಜ್ಯ ಪ್ರಶಸ್ತಿ ಲಭಿಸಿದ್ದಕ್ಕೆ ಪತ್ರಕರ್ತರ ಧ್ವನಿ ಸಂಘಟನೆಯ ಕೊಪ್ಪಳ ಜಿಲ್ಲಾಧ್ಯಕ್ಷ ಸುನಿಲ ಕುಮಾರ ಮಠದ, ಪ್ರಧಾನ ಕಾರ್ಯದರ್ಶಿ ಮುತ್ತಪ್ಪ ದೊಡ್ಮನಿ, ಸಹ ಕಾರ್ಯದರ್ಶಿ ವೀರಯ್ಯ ಹಿರೇಮಠ, ಕುಕನೂರು ತಾಲೂಕ ಘಟಕದ ಅಧ್ಯಕ್ಷ ಚಂದ್ರು ಬಾಣಾಪುರ, ಗೌರವಾಧ್ಯಕ್ಷ ಮಹೇಶ್ ಕಲ್ಮಠ ಸೇರಿದಂತೆ ಸಂಘದ ಸದಸ್ಯರು ಎಂ ಜೆ ಶ್ರೀನಿವಾಸ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ತಿಳಿಸುತ್ತಾ ಮಾನ್ಯರ ಸಮಾಜ ಕಳಕಳಿಯ ವರದಿಗಳು ಹೀಗೆ ಮುಂದುವರೆದು ಸಮಾಜ ತಿದ್ದುವ ಕಾರ್ಯ ನಿರಂತರವಾಗಿ ಸಾಗುತ್ತಿರಲಿ, ಅವರ ಬತ್ತಳಿಕೆಯಲ್ಲಿ ಇನ್ನಷ್ಟು ಪ್ರಶಸ್ತಿಗಳು ರಾರಾಜಿಸಲಿ ಎಂದು ಶುಭ ಹಾರೈಸಿದ್ದಾರೆ.

## ಡಿ, 20 ರಿಂದ ಯುವಜನೋತ್ಸವ

ಕಲಬುರಗಿ: ಗುಲಬರ್ಗಾ ವಿಶ್ವವಿದ್ಯಾಲಯದ 2025-26ನೇ ಶೈಕ್ಷಣಿಕ ಸಾಲಿನ ಅಂತರ ಮಹಾವಿದ್ಯಾಲಯಗಳ ಯುವಜನೋತ್ಸವ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಡಿ. 20, 2025 ರಂದು ಬೆಳಿಗ್ಗೆ 10.00 ಗಂಟೆಗೆ ಡಾಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ. ಬಹುಭಾಷಾ ಸಿನಿಮಾ ನಟ, ಚಿತ್ರ ನಿರ್ಮಾಪಕ, ಚಿತ್ರ ನಿರ್ದೇಶಕ, ನಿರೂಪಕ ಹಾಗೂ 2025-26ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶ್ರೀ. ಪ್ರಕಾಶ್ ರಾಜ್ ರವರು ಯುವಜನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಿಗೆ ಚಾಲನೆ ನೀಡುವರು. ಗುಲಬರ್ಗಾ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಅಧ್ಯಕ್ಷತೆ ವಹಿಸುವರು. ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಶ್ರೀ. ಸಿದ್ದಪ್ಪ ಮುಲಗೆ, ವಿದ್ಯಾ ವಿಷಯಕ ಪರಿಷತ್ ಸದಸ್ಯ ಪ್ರೊ. ಕೆ. ಸಿದ್ದಪ್ಪ, ಮೌಲ್ಯಮಾಪನ ಕುಲಸಚಿವ ಡಾ. ಎನ್. ಜಿ. ಕಣ್ಣೂರ, ವಿತ್ತಾಧಿಕಾರಿ ಶ್ರೀಮತಿ. ಜಯಾಂಬಿಕ, ಕುಲಸಚಿವ ಹಾಗೂ ವಿದ್ಯಾರ್ಥಿ ಕಲ್ಯಾಣಾಧಿಕಾರಿ ಪ್ರೊ. ರಮೇಶ್ ಲಂಡನಕರ್ ಉಪಸ್ಥಿತರಿರುವರು. ಗುಲಬರ್ಗಾ ವಿಶ್ವವಿದ್ಯಾಲಯದ ಆವರಣದ ಕಾರ್ಯಸೌಧದಲ್ಲಿರುವ ಮಹಾತ್ಮಗಾಂಧಿ ಸಭಾಂಗಣ, ಗಣಿತಶಾಸ್ತ್ರ ವಿಭಾಗದಲ್ಲಿರುವ ಭಾಸ್ಕರ್ ಸಭಾಂಗಣ, ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ದಿನಾಂಕ: 20.12.2025 ರಂದು ಬೆಳಿಗ್ಗೆ 7 ಗಂಟೆಯಿಂದ 8:30 ರವರೆಗೆ ಪ್ರಾಣಿಶಾಸ್ತ್ರ ವಿಭಾಗದಲ್ಲಿ ತಂಡಗಳ ನೊಂದಣಿ ಹಾಗು ವ್ಯವಸ್ಥಾಪಕರ ಸಭೆ ಜರುಗಲಿದೆ.

ಡಿ. 20, ರಂದು ಡಾ. ಬಿ.ಆರ್. ಅಂಬೇಡ್ಕರ್ ಭವನ ಮುಖ್ಯ ಸಭಾಂಗಣದಲ್ಲಿ ವೃಂದ ಗಾಯನ (ಭಾರತೀಯ), ವೃಂದಗಾಯನ (ಪಾಶ್ಚಿಮಾತ್ಯ,) ಪಾಶ್ಚಿಮಾತ್ಯ ಇನ್‌ಸ್ಟ್ರುಮೆಂಟಲ್ ಸೋಲೋ ಹಾಗೂ ಏಕವ್ಯಕ್ತಿ ಸ್ವರಗಾಯನ (ಪಾಶ್ಚಿಮಾತ್ಯ) ಸ್ಪರ್ಧೆಗಳು ಜರುಗಲಿವೆ. ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ (ಮೊದಲನೇ ಮಹಡಿ) ಕಾರ್ಟೂನಿಂಗ್ ಮತ್ತು ಕೋಲಾಜ್ ಸ್ಪರ್ಧೆಗಳು ನಡೆಯಲಿವೆ.

ಡಿ. 21, ರಂದು ಮಹಾತ್ಮಗಾಂಧಿ ಸಭಾಂಗಣದಲ್ಲಿ- ಶಾಸ್ತ್ರೀಯ ಏಕವ್ಯಕ್ತಿ ಗಾಯನ, ಕ್ಲಾಸಿಕಲ್ ಇನ್‌ಸ್ಟ್ರುಮೆಂಟಲ್ ಸೋಲೋ (Percussion), ಕ್ಲಾಸಿಕಲ್ ಇನ್‌ಸ್ಟ್ರುಮೆಂಟಲ್ ಸೋಲೋ (Non Percussion), ಲಘು ಸಂಗೀತ (ಏಕವ್ಯಕ್ತಿ) ಹಾಗೂ ರಸಪ್ರಶ್ನೆ (ಸಾಮಾನ್ಯ) ಸ್ಪರ್ಧೆಗಳು ಜರುಗಲಿವೆ. ಗಣಿತ ವಿಭಾಗದ ಭಾಸ್ಕರ್ ಸಭಾಂಗಣದಲ್ಲಿ- ವಾಕ್ಚಟುತ್ವಸ್ಪರ್ಧೆ, ಚರ್ಚಾ ಸ್ಪರ್ಧೆ, ರಸ ಪ್ರಶ್ನೆ (ಅಂತಿಮ) ವಾಗ್ಮಿತ (Vagmita-Hindi Elocution*) ಹಾಗೂ ವಾದ-ವಿವಾದ (Hindi-Debate*) ಸ್ಪರ್ಧೆಗಳು ಜರುಗಲಿವೆ. ಡಿ. 21, ರಂದು ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ (ಮೊದಲನೇ ಮಹಡಿ) ಸ್ಪಾಟ್ ಪೇಂಟಿಂಗ್, ಅಂಟು ಪತ್ರಗಳ ತಯಾರಿಕೆ ಹಾಗೂ ಮಣ್ಣಿನ ಆಕೃತಿ ಸ್ಪರ್ಧೆಗಳು ನಡೆಯಲಿವೆ. ಹಾಗೆಯೇ, ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ (ಮುಖ್ಯ ಸಭಾಂಗಣ) ಪ್ರಹಸನ, ಏಕಾಂಕ ನಾಟಕ, ಅನುಕರಣೆ, ಮೂಕಾಭಿನಯ, ಶಾಸ್ತ್ರೀಯ ನೃತ್ಯ, ಜಾನಪದ/ಬುಡಕಟ್ಟು ಶೈಲಿಯ ನೃತ್ಯ ಮತ್ತು ಸೃಜನಾತ್ಮಕ ನೃತ್ಯ ಸಂಯೋಜನೆ ಸ್ಪರ್ಧೆಗಳು ಜರುಗಲಿವೆ. ಡಿ. 22, 2025 ರಂದು ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ (ಮುಖ್ಯ ಸಭಾಂಗಣ) ರಂಗೋಲಿ ಮತ್ತು ಜಾನಪದ ಸಂಗೀತ ಸ್ಪರ್ಧೆಗಳು ಜರುಗಲಿವೆ. ಯುವಜನೋತ್ಸವ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಅಧಿಕಾರಿಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು ಶಿಕ್ಷಕ/ಶಿಕ್ಷಕೇತರ ಸಿಬ್ಬಂದಿಗಳು, ಶಿಕ್ಷಕ ಮತ್ತು ಶಿಕ್ಷಕೇತರ ನೌಕರರ ಸಂಘಗಳು, ಅತಿಥಿ ಉಪನ್ಯಾಸಕರ ಸಂಘ, ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ನಗರದ ನಾಗರೀಕರು, ಕಲಾವಿದರು ಹಾಗೂ ಪದವಿ ಮಹಾವಿದ್ಯಾಲಯಗಳ ಪ್ರಾಶುಪಾಲರು, ಉಪನ್ಯಾಸಕರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.



ಬಸವಕಲ್ಯಾಣ :ಹೊರವಲಯದ ಶಿವಶರಣಪ್ಪ ಲಕಶೆಟ್ಟಿ ಅವರ ಹೊಲದಲ್ಲಿ ಎಳ್ಳಮಾವಾಸ್ಯೆ ಹಾಗೂ ಶರಣ ಒಕ್ಕಲಿಗ ಮುದ್ದಣ್ಣನವರ ಜಯಂತಿ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಅನುಭವ ಮಂಟಪದ ಸಂಚಾಲಕರಾದ ಪೂಜ್ಯಶ್ರೀ ಶಿವಾನಂದ ಸ್ವಾಮಿಗಳು. ಗಾಯತ್ರಿತಾಯಿ. ಪೂಜ್ಯಶ್ರೀ ಗಂಗಾಧರ್ ದೇವರು. ಪೂಜ ಶ್ರೀ ಬಸವ ದೇವರು. ಪೂಜ್ಯ ಶ್ರೀ ಅಡಿವೆಪ್ಪ ಸ್ವಾಮೀಜಿ . ಶ್ರೀಶೈಲ್ ಬಿರಾದರ. ಮಲ್ಲಿಕಾರ್ಜುನ್ ಲಕಶೆಟ್ಟೆ. ಮಹೇಶ್ ಮೂಲಗೆ. ಶಿವಾನಂದ. ನಾಗೇಶ. ಚಂದ್ರಕಲಾ ಲಕಶೆಟ್ಟೆ. ಸುಷ್ಮಾ ಲಕಶೆಟೆ. ಅಕ್ಷತಾ ಮೂಲಗೆ. ಅಂಕಿತಾ ಬಿರಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ರೈತಾಪಿ ವರ್ಗದ ವನಮಹೋತ್ಸವ ಎಳ್ಳ ಅಮವಾಸ್ಯೆ ಸಂಭ್ರಮ





ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ: ಆಹಾರ ಸಂಸ್ಕೃತಿಯ ಪ್ರತೀಕವಾದ ಎಳ್ಳ ಅಮವಾಸ್ಯೆ ಹಬ್ಬವನ್ನು ಶುಕ್ರವಾರ ಪಟ್ಟಣ ಸೇರಿದಂತೆ ವಲಯದಲ್ಲಿ ರೈತಾಪಿ ವರ್ಗ ಅತ್ಯಂತ ಸಂತಸ ಸಂಭ್ರಮದಿಂದ ಆಚರಿಸಿದರು.

ಎಳ್ಳ ಅಮವಾಸ್ಯೆ ಎಂದರೇನೆ ನಮ್ಮ ರೈತಾಪಿ ವರ್ಗದ ವನಮಹೋತ್ಸವ. ಸಂಪ್ರದಾಯದಂತೆ ರೈತರು ತಮ್ಮ ತಮ್ಮ ಹೊಲಗಳಿಗೆ ತೆರಳಿ ಮನೆಯಿಂದ ತಂದ ನಾನಾ ಬಗೆಯ ಖಾದ್ಯಗಳು ಸೇರಿದಂತೆ ಎಳ್ಳು ಬೆಲ್ಲವನ್ನು ಸೇರಿಸಿ "ಹುಲ್ಲು ಹುಲ್ಲಿಗೆ ಚಳ್ ಚಳ್ಳಂಬರಿಗೆ" ಎನ್ನುತ್ತ ಬೆಳೆಗಳಿಗೆ ಎಡೆಯ ರೂಪದಲ್ಲಿ ಹೊಲದ ತುಂಬೆಲ್ಲಾ ಚರಗ ಚೆಲ್ಲುತ್ತಾ ಭೂ ತಾಯಿಗೆ ನಮಿಸಿ, ಹೊಲದಲ್ಲಿರುವ ಬನ್ನಿ ಮರಕ್ಕೆ ಪೂಜೆ ಸಲ್ಲಿಸಿ ಇಳುವರಿ ವೃದ್ದಿಸುವಂತೆ ಬೇಡಿಕೊಂಡರು.

ನಂತರ ಹಬ್ಬದ ನಿಮಿತ್ಯ ನಾನಾ ರೀತಿಯ ಚಟ್ನಿ, ಕಾಳು, ಎಣ್ಣೆ ಬದನೆಕಾಯಿ, ಸೇಂಗಾ ಹೋಳಿಗೆ, ಎಳ್ಳು ಹಚ್ಚಿದ ಸಜ್ಜೆ ರೊಟ್ಟಿ, ಜೋಳದ ರೊಟ್ಟಿ, ಬರ್ತಾ, ಪಾಲಕ್, ಮೆಂತ್ಯೆ ಪಲ್ಲೆ, ಕಾಳು ವಿವಿಧ ತರಕಾರಿ ಉಪಯೋಗಿಸಿ ತಯಾರಿಸುವ ಭಜ್ಜಿ ಸೇರಿದಂತೆ ನಾನಾ ಬಗೆಯ ಖಾದ್ಯವನ್ನು ತಯಾರಿಸಿ ಎತ್ತಿನ ಗಾಡಿ, ಟ್ರಾಕ್ಟರ್, ಟಂ ಟಂ ಮೂಲಕ ನೆರೆಹೊರೆಯವರನ್ನು, ಗೆಳೆಯರನ್ನು ಕರೆದುಕೊಂಡು ಹೋದ ಪರಿವಾರ ಸಮೇತ ಸಹಭೋಜನ ಮಾಡಿ ಸಂಭ್ರಮಿಸಿದರು.

## ಭಜ್ಜಿ, ರೊಟ್ಟಿ ಸವಿದು ಸಂಭ್ರಮಿಸಿದ ಮಕ್ಕಳು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲ್ಲೂಕಿನ ಕರಡ್ಯಾಳದ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಶರಣ ಒಕ್ಕಲಿಗ ಮುದ್ದಣ್ಣನವರ ಜಯಂತಿ, ಎಳ್ಳ ಅಮಾವಾಸ್ಯೆ ಹಬ್ಬ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ, ಎಳ್ಳ ಅಮಾವಾಸ್ಯೆ ರೈತರ ಹಬ್ಬ. ರೈತರು ಅವರ ಜಮೀನಿನಲ್ಲಿ ಎಳ್ಳು ಹಾಗೂ ಬೆಲ್ಲವನ್ನು ಚಿಮ್ಮುತ್ತಾರೆ. ಇವುಗಳು ಭೂಮಿಯ ಫಲವತ್ತತೆಯನ್ನು ಕಾಪಾಡುವ ಎರೆಹುಳಗಳಿಗೆ ಆಹಾರವಾಗುತ್ತದೆ ಎಂಬ ಉದ್ದೇಶದಿಂದ ಚಿಮ್ಮಲಾಗುತ್ತದೆ.

ರೈತರ ಹೊಲದಲ್ಲಿ ಬೆಳೆದ ಹಿಂಗಾರು ಪೈರುಗಳ ನಡುವೆ ಬನ್ನಿಮರವನ್ನು ಹುಡುಕಿ ಅದಕ್ಕೆ ಪೂಜೆ ಮಾಡಿ ಭೂಮಿತಾಯಿಗೆ ಚರಗ ಚೆಲ್ಲುವುದು ಈ ಹಬ್ಬದ ವಿಶೇಷವಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಎಳ್ಳ ಅಮಾವಾಸ್ಯೆ ನಿಮಿತ್ತ ಸಿದ್ಧಪಡಿಸಲಾದ ಭಜ್ಜಿ, ಜೋಳದ ಮತ್ತು ಸಜ್ಜೆಯ ರೊಟ್ಟಿ, ಹುಗ್ಗಿ, ಅಂಬಲಿ ಸೇರಿದಂತೆ ಇತರ ವಿಶೇಷ ಖಾದ್ಯಗಳನ್ನು ಸವಿದು ಸಂಭ್ರಮಿಸಿದರು. ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ ಸೇರಿದಂತೆ ಇತರರು ಇದ್ದರು.

## ಮಲ್ಲಣ್ಣ ದೇವರ ದರ್ಶನ ಪಡೆದ ಭಕ್ತರು

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ತಾಲ್ಲೂಕಿನ ಖಾನಾಪುರ ಗ್ರಾಮದ ಮೈಲಾರ ಮಲ್ಲಣ್ಣ ದೇವರ ಜಾತ್ರೆ ನಿಮಿತ್ತ ಶುಕ್ರವಾರ ಅಮಾವಾಸ್ಯೆಯಂದು ಭಕ್ತರು ಮಲ್ಲಣ್ಣ ದೇವರ ದರುಶನ ಪಡೆದು ಕೃತಾರ್ಥರಾದರು.



ಅಮಾವಾಸ್ಯೆ ಪ್ರಯುಕ್ತ ಭಕ್ತರು ನಸುಕಿನಜಾವದಿಂದಲೇ ದೇವಸ್ಥಾನದತ್ತ ಮುಖ ಮಾಡಿದರು.

ಥಂಡಿ ವಾತಾವರಣದ ಪರಿಣಾಮ ಅನ್ಯ ರಾಜ್ಯಗಳಾದ ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ರಾಜ್ಯದ ಇತರ ಜಿಲ್ಲೆಗಳ ಭಕ್ತರು ಗುರುವಾರ ರಾತ್ರಿಯ ದೇವಸ್ಥಾನಕ್ಕೆ ಆಗಮಿಸಿ ವಾಸ್ತವ್ಯ ಮಾಡಿದರು.

ಮೈನಡುಗುವ ಚಳಿಯ ಮಧ್ಯೆಯೇ ಪುಷ್ಕರಣಿಯಲ್ಲಿ ಪವಿತ್ರ ಸ್ನಾನ ಮುಗಿಸಿಕೊಂಡು ಮಲ್ಲಣ್ಣ ದೇವರ ದರುಶನ ಪಡೆದು. ಭಂಡಾರ ಹಾರಿಸುತ್ತಾ ದೇವಸ್ಥಾನದ ಪ್ರದಕ್ಷಿಣೆ ಹಾಕಿ ಭಕ್ತಿ ಭಾವ ಮೆರೆದರು.

## ಡಿ, 21ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತೆಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,:-ಕಲಬುರಗಿ ನಗರದಲ್ಲಿ 11.ಕೆವಿ ಅಪ್ಪಾ ಪೀಡರ್ ವ್ಯಾಪ್ತಿಯಲ್ಲಿ ಡಿಸೆಂಬರ್ 21 ರಂದು ಬೆಳಿಗ್ಗೆ 10:00 ಗಂಟೆಯಿಂದ ಮದ್ಯಾಹ್ನ 04:00 ಗಂಟೆಯವರೆಗೆ ಕಲಬುರಗಿಯ ಪ್ರಮುಖ ಬಡವಣೆಗಳಾದ ಬಿದ್ದಾಪೂರ, ಕ್ಯೂಪಿ ಲೇಔಟ್ ,ಬಬಲಾದ ರೈಲ್ವೆ ಸ್ಟೇಷನ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಿರ್ವಹಣಾ ಕೆಲಸ ಕಾರ್ಯ ನಿಮಿತ್ತ ವಿದ್ಯುತ ಸರಬರಾಜಿನಲ್ಲಿ ವ್ಯತೆಯ ಉಂಟಾಗಲಿದೆ ಆದ ಕಾರಣ ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕೇಂದ್ರ ಕಾರಾಗೃಹದಲ್ಲಿ ಪ್ರಶಸ್ತಿ ಪತ್ರ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,:-"ಕಾರಾಗೃಹ ಸುಧಾರಣಾ ಸಂಕಲ್ಪ ಅಭಿಯಾನದಡಿ" ಕಾರಾಗೃಹ ಮತ್ತು ಸುಧಾರಣೆ ಸೇವೆಗಳ ಪೋಲಿಸ್ ಮಹಾನಿರ್ದೇಶಕರಾದ ಅಲೋಕ ಕುಮಾರ್, (ಐ.ಪಿ.ಎಸ್) ಕರ್ನಾಟಕ ರಾಜ್ಯರವರ ನೇತೃತ್ವದಲ್ಲಿ ಡಿಸೆಂಬರ್ 17 ರಂದು ರಂದು ಬೀಗಮುದ್ರೆ ಸಮಯ ಸುಮಾರು ರಾತ್ರಿ 7:30 ರಿಂದ 11:30 ರವರೆಗೆ(19-30 ರಿಂದ 23-30) ಗಂಟೆಯವರೆಗೆ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿರುವ ಬಂದಿಗಳನ್ನು, ಬ್ಯಾರಾಕುಗಳನ್ನು ಕಾರಾಗೃಹದ ಒಳಾವರಣವನ್ನು ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಮುಖ್ಯ ಅಧೀಕ್ಷಕರ ನೇತೃತ್ವದಲ್ಲಿ ಸಂಸ್ಥೆಯ ಕರ್ತವ್ಯನಿರತ ಅಧಿಕಾರಿ/ಸಿಬ್ಬಂದಿಗಳು ಅನೀರಿಕ್ಷಿತ ತಪಾಸಣೆ ಕೈಗೊಂಡಾಗ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ದೊರೆತ ನಿಷೇಧಿತ ವಸ್ತುಗಳು ದೊರೆತ್ತಿರುತ್ತವೆ ಅವುಗಳ ವಿವಿರ :10 ಮೊಬೈಲ್ ಫೋನ್‌ಗಳು, 04 ಸಿಮ್ ಕಾರ್ಡ್‌ಗಳು, 03 ಚಾರ್ಜರ್ ಗಡ್ಡೆಗಳು,01ಉದ್ದವಾದ ಹರಿತವಾದ ವಸ್ತು, 01 ಬಿಳಿ ಬಣ್ಣದ ಬ್ಲೂಟೂತ್ ,02 ಕಪ್ಪು & ನೀಲಿ ಬಣ್ಣ ಎಲೆಕ್ಟ್ರಿಕಲ್ ವೈರ್, 7) 01 ಮೆಟಲ್ ಫಿಂಗರ್ ಪಂಚ್. ಸದರಿ ನಿಷೇಧಿತ ವಸ್ತುಗಳನ್ನು ಸಾಗಿಸಿದವರು, ಇದಕ್ಕೆ ಸಹಕರಿಸಿದವರು ಹಾಗೂ ನಿಷೇಧಿತ ವಸ್ತುಗಳನ್ನು ಕಾರಾಗೃಹದಲ್ಲಿ ಉಪಯೋಗಿಸಿದವರ ವಿರುದ್ಧ ಕರ್ನಾಟಕ ಕಾರಾಗೃಹ (ತಿದ್ದುಪಡಿ) ಅಧಿನಿಯಮ 2022, ರ ಕಲಂ 42 ರ ಅನ್ವಯ ಹಾಗೂ ಇತರೆ ಕಲಂಗಳ ಅಡಿಯಲ್ಲಿ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಜರುಗಿಸಲು ಪರಹತಾಬಾದ್ ಪೋಲಿಸ್ ಠಾಣೆಯಲ್ಲಿ ಎಫ್.ಐ.ಆರ್ ಸಂಖ್ಯೆ: 164/2025 ರಲ್ಲಿ ಡಿಸೆಂಬರ್ 18 ರಂದು ಶ್ರೀ ಅಲೋಕ ಕುಮಾರ ಐಪಿಎಸ್, ಪೋಲಿಸ್ ಮಹಾ ನಿರ್ದೇಶಕರು, ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರುರವರು ಅನೀರಿಕ್ಷತ ತಪಾಸಣೆಯಲ್ಲಿ ಭಾಗಿಯಾದ ಕಲಬುರಗಿ ಕೇಂದ್ರ ಕಾರಾಗೃಹದ ಅಧಿಕಾರಿ/ಸಿಬ್ಬಂದಿಗಳಿಗೆ ರೂ. 10,000.00 (ಹತ್ತು ಸಾವಿರ ನಗದು ಬಹುಮಾನ) ಮತ್ತು ಪ್ರಶಂಸನಾ ಪತ್ರವನ್ನು ನೀಡಿ ಗೌರವಿಸಿರುತ್ತಾರೆ ಎಂದು ಕಲಬುರಗಿ ಕೇಂದ್ರ ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯ ಕೋಳಿ ಫಾರಂಗಳ ಬೇಡಿಕೆಯಂತೆ ಮೆಕ್ಕೆಜೋಳ ಪೂರೈಸಿ : ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ: ಪೌಲ್ಟ್ರಿ ಫೀಡ್, ಕೋಳಿ ಫಾರಂಗಳ ಮೂಲಕ ರೈತರ ಮೆಕ್ಕೆಜೋಳ ಖರೀದಿಸಲು ಜಿಲ್ಲೆಯ ಪ್ರತಿ ಕೋಳಿ ಫಾರಂಗಳ ಬೇಡಿ-ಕೆಯಂತೆ ಮೆಕ್ಕೆಜೋಳವನ್ನು ಪೂರೈಸಲು ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2025-26ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ರೈತರು ಬೆಳೆದ ಮೆಕ್ಕೆ ಜೋಳದ ಖರೀದಿಯ ಕುರಿತು ಕೊಪ್ಪಳ ಜಿಲ್ಲಾ ಕೋಳಿ ಫಾರಂ ಮಾಲೀಕರೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸರ್ಕಾರದ ಆದೇಶದಂತೆ 2025-26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಮೆಕ್ಕೆಜೋಳವನ್ನು ಪ್ರತಿ ರೈತರಿಂದ 50 ಕ್ವಿಂಟಾಲ್ ಮೆಕ್ಕೆಜೋಳವನ್ನು ಪ್ರತಿ ಕ್ವಿಂಟಾಲ್‌ಗೆ 2400 ರೂ.ಗಳಂತೆ ಸರ್ಕಾರದ ನಿಯಮಗಳನ್ವಯ ಖರೀದಿ ಸಂಸ್ಥೆಯಾದ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ, ನಿಯಮಿತ ರವರ ಮೂಲಕ ಖರೀದಿಸಬೇಕಾಗಿದೆ ಎಂದರು. ಕೋಳಿ ಫಾರಂಗಳ ಆಹಾರ ತಯಾರಿಕೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಮೆಕ್ಕೆ ಜೋಳವನ್ನು ಬಳಸಲಾಗುತ್ತದೆ. ಹಾಗಾಗಿ ಪ್ರಸಕ್ತ ಸಾಲಿನಲ್ಲಿ ಮುಂಗಾರು ಹಂಗಮಿನಲ್ಲಿ ಕೊಪ್ಪಳ ಜಿಲ್ಲೆಯ ರೈತರು ಬೆಳೆದ ಮೆಕ್ಕೆಜೋಳವನ್ನು ಜಿಲ್ಲೆಯ ಕೋಳಿ ಫಾರ್ಮ್ ಮಾಲೀಕರಿಗೆ ಪೂರೈಸಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಯ ಕೋಳಿ ಫಾರಂಗಳಿಗೆ ಅವಶ್ಯವಿರುವ ಒಟ್ಟಾರೆ ಬೇಡಿಕೆಯನ್ನು ನೀಡುವಂತೆ ಜಿಲ್ಲಾಧಿಕಾರಿಗಳು ಹೇಳಿದರು. ಕೋಳಿ ಫಾರಂ ಮಾಲೀಕರ ಪ್ರತಿನಿಧಿಗಳು ಮಾತನಾಡಿ, ಒಟ್ಟಾರೆ 3000 ಮೆಟ್ರಿಕ್ ಟನ್ ಮೆಕ್ಕೆಜೋಳ ಬೆಂಬಲ ಬೆಲೆ ಯೋಜನೆಯಡಿ ಖರೀದಿಸುವುದಾಗಿ ಸಭೆಯಲ್ಲಿ ತಿಳಿಸಿದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಜಿಡಿ ಕೃಷ್ಣಮೂರ್ತಿ ಅವರು ಮಾತನಾಡಿ, 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 1,62,000 ಹೆಕ್ಟರ್ ವಿಸ್ತೀರ್ಣದಲ್ಲಿ ಮೆಕ್ಕೆಜೋಳ ಬಿತ್ತನೆಯಾಗಿದ್ದು, 3,24,878 ಮೆಟ್ರಿಕ್ ಟನ್ನಷ್ಟು ಮೆಕ್ಕೆಜೋಳ ಇಳುವರಿ ಬಂದಿರುವುದಾಗಿ. ಇದರಲ್ಲಿ ಅಂದಾಜು 1,72,186 ಮೆಟ್ರಿಕ್ ಟನ್ ನಷ್ಟು ಮೆಕ್ಕೆಜೋಳವನ್ನು ರೈತರು ಮಾರಾಟ ಮಾಡಿರುತ್ತಾರೆ. ಅಂ-ದಾಜು 1,52,692 ಮೆಟ್ರಿಕ್ ಟನ್ ಮೆಕ್ಕೆಜೋಳ ರೈತರ ಬಳಿ ಇರುವ ಸಾಧ್ಯತೆಯಿದೆ ಎಂದು ತಿಳಿಸಿದರು. ಕೊಪ್ಪಳ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕ ವಿ.ಜಿ. ಹಿರೇಮಠ ಅವರು ಮಾತನಾಡಿ, ಜಿಲ್ಲೆಯಲ್ಲಿ ಬೆಳೆಯಲಾದ ಮೆಕ್ಕೆಜೋಳದ ಪ್ರಮಾಣದಲ್ಲಿ ಈಗಾಗಲೇ 1,72,186.20 ಮೆಟ್ರಿಕ್ ಟನ್ ನಷ್ಟು ಮೆಕ್ಕೆಜೋಳವನ್ನು ರೈತರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಮಾರಾಟ ಮಾಡಿರುತ್ತಾರೆ ಎಂದು ಮಾಹಿತಿ ನೀಡಿದರು. ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ 27 ವಾಣಿಜ್ಯ ಮೊಟ್ಟೆ ಕೋಳಿ ಫಾರಂಗಳಿದ್ದು, ಕೋಳಿ ಫಾರಂಗಳಲ್ಲಿರುವ ಕುಕ್ಕಟಗಳ ಅಂಕಿ-ಅಂಶಗಳ ಅನುಗುಣವಾಗಿ ಕೋಳಿ ಆಹಾರಗಳ ತಯಾರಿಕೆಗಾಗಿ ಅವಶ್ಯವಿರುವ ಮೆಕ್ಕೆಜೋಳವನ್ನು ಸರ್ಕಾರದ ನಿಯಮಗಳನ್ವಯ 2025-26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳವನ್ನು ಖರೀದಿಸಲು ಕೋಳಿ ಫಾರಂಗಳ ಮಾಲೀಕರಿಂದ ಬೇಡಿಕೆಯನ್ನು ಪಡೆದು ಕ್ರಮವಹಿಸುವ ಉದ್ದೇಶದಿಂದ ಈ ಸಭೆಗೆ ಜಿಲ್ಲೆಯ ಕೋಳಿ ಫಾರಂ ಮಾಲಿಕರನ್ನು ಕರೆಯಲಾಗಿದೆ. ಈ ಉದ್ದೇಶದಂತೆ ಪೌಲ್ಟ್ರಿಫೀಡ್, ಕೋಳಿ ಫಾರಂಗಳ ಮೂಲಕ ಮೆಕ್ಕೆಜೋಳ ಖರೀದಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಇಲಾಖೆಗಳ ಅಧಿಕಾರಿಗಳು, ಕೋಳಿ ಫಾರಂ ಮಾಲೀಕರ ಪ್ರತಿನಿಧಿಗಳು ಮತ್ತು ಪಶು ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಪುಸ್ತಕ ಪ್ರಕಾಶನ ಕಮ್ಮಟ ವಿದ್ಯಾರ್ಥಿಗಳು ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ಪ್ರಕಾಶಕರ ಸಂಘದ ಸಹಯೋಗದಲ್ಲಿ ಆಯೋಜಿಸಿರುವ ಎರಡು ದಿನಗಳ ಪುಸ್ತಕ ಪ್ರಕಾಶನ ಕಮ್ಮಟ ಕಾರ್ಯಕ್ರಮದಲ್ಲಿ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪತ್ರಿಕೋದ್ಯಮ ವಿಭಾಗ ಸಹಾಯಕ ಪ್ರಾಧ್ಯಾಪಕ ಡಾ.ಗಿರೀಶ್ ಕುಮಾರ್. ಜಿ, ಇಟಿಗಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಗೋಷ್ಠಿಗಳಲ್ಲಿ ಮುಖಪುಟ , ಪುಸ್ತಕ ವಿನ್ಯಾಸ , ಪುಸ್ತಕ ಪ್ರಕಟಣೆ ,ಕರಡು ತಿದ್ದುಪಡಿ , ಪ್ರಕಾಶನ ನಡೆದು ಬಂದ ದಾರಿ, ಮುದ್ರಣ ಹಂತಗಳು, ಪುಸ್ತಕ ಪ್ರಕಾಶನ ವಿಮರ್ಶೆ, ಸಂಸ್ಕೃತಿ, ನವ ಮಾಧ್ಯಮದ ಮೂಲಕ ಮಾರಾಟ, ಕಾನೂನು ಸುವ್ಯವಸ್ಥೆ , ಪು ಸ್ತಕ ಮುದ್ರಣ, ಮಾರಾಟ, ನವ ಮಾಧ್ಯಮ ಬಳಕೆ ಬಗ್ಗೆ ಮಾಹಿತಿ ತಿಳಿದುಕೊಂಡಿದ್ದೆವೆ ಎಂದರು. ವಿದ್ಯಾರ್ಥಿಗಳಾದ ಹಬೀಬ್ ಅಲ್ಲಿ, ಬಿ. ಮಣಿಮಾಲಾ, ಗಣೇಶ ಹೆಚ್, ಶಾಂತ, ಶೋಭಾ.ಜೆ, ಪ್ರಶಾಂತ್.ಬಿ, ಆರ್. ಅಜಯ್, ವಿ.ಸೋನಿಯಾ, ಪ್ರಶಾಂತ್.ಹೆಚ್ ಭಾಗವಹಿಸಿದ್ದರು.

# ಮನರೇಗಾ ಯೋಜನೆ ಉಳಿವಿಗೆ ಆಗ್ರಹಿಸಿ ಸಂಸದರ ಕಚೇರಿ ಮುಂದೆ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಮನರೇಗಾ ಬದಲಿಸುವ ಮೂಲಕ ಕೇಂದ್ರ ಸರಕಾರ ಕೂಲಿ ಕಾರ್ಮಿಕರ ಉದ್ಯೋಗ ಹಕ್ಕನ್ನು ಕಸಿದುಕೊಂಡಿರುವ ಕೇಂದ್ರದ ವಿ ಬಿ ಜಿ ರಾಮ್ ಜಿ ವಿಧೇಯಕ ಮಸೂದೆ ತಿರಸ್ಕಾರ ಮಾಡುವಂತೆ ಆಗ್ರಹಿಸಿ ದಿ.22 ರಾಜ್ಯದ ಎಲ್ಲ ಸಂಸದರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು

ಎಂದು ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ಮುಖಂಡರಾದ ಗುರುರಾಜು ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಗ್ರಾಮೀಣ ಭಾಗದಲ್ಲಿ ಬಡವರ ಬದುಕು ಕಟ್ಟಿಕೊಳ್ಳುವ ಅತ್ಯಂತ ಮಹತ್ವದ ಯೋಜನೆ ಮನರೇಗಾ ಯೋಜನೆ ರಾಮ್ ಜೀ ಯೋಜನೆಯಾಗಿ ಬದಲಾವಣೆ ಮಾಡುವ ಮೂಲಕ ಕೇಂದ್ರ ಸರಕಾರ ಉದ್ಯೋಗ ಹಕ್ಕನ್ನು ಕಸಿದುಕೊಂಡಿದೆ ಎಂದು ತೀವ್ರ ಆಕ್ರೋಶಕ್ತಪಡಿಸಿದರು. ಕಾಂಗ್ರೆಸ್ ಕೇವಲ ಮಹಾತ್ಮ ಗಾಂಧಿ ಹೆಸರನ್ನು ಕೈ ಬಿಡಲಾಗಿದೆ ಎಂದು ಪ್ರತಿಭಟನೆ ನಡೆಸುತ್ತಿದ್ದಾರೆ ಹೊರತು ಕೂಲಿ ಕಾರ್ಮಿಕರ ಬಗ್ಗೆ ಅವರು ಧ್ವನಿ ಎತ್ತಿಲ್ಲ ಎಂದು ಕಾಂಗ್ರೆಸ್ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಾರ್ಮಿಕರು ಮತ್ತು ಯಾವುದೇ ಕಾರ್ಮಿಕ ಗುಂಪುಗಳ ಜೊತೆ ಸಮಾಲೋಚನೆ ನಡೆಸದೆ ಕೇಂದ್ರ ಸರ್ಕಾರ ಬಂಡವಾಳ ಶಾಹಿಗಳ ಪರವಾಗಿ ಈ ಮಸೂದೆಯನ್ನು ರಚನೆ ಮಾಡಿದೆ. ಕೇಂದ್ರದ ವಿಧೇಯಕ ಮಸೂದೆಯಿಂದ ಮನರೇಗಾ ಸಂಪೂರ್ಣ ಪ್ರಮಾಣದಲ್ಲಿ ಕಿತ್ತೊಗೆಯುವ ಹುನ್ನಾರ ಆಗಿದೆ ಎಂದರು. ಉದ್ಯೋಗ ಖಾತ್ರಿ ಕೇಂದ್ರ ಸರ್ಕಾರ ಬಿಗಿಮುಷ್ಟಿ ಕೇಂದ್ರಕೃತ ವಿವೇಚನೆಯುಕ್ತ ಬಜೆಟ್ ನಿಯಂತ್ರಿಸುವ ಮೂಲಕ ಬಡವರ ಉದ್ಯೋಗದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ಇದಾಗಿದೆ ಎಂದು ಕೇಂದ್ರ ವಿರುದ್ಧ ಕಿಡಿಕಾಡಿದರು. ಪ್ರಸ್ತಾವಿಕ ಮತ್ತು ಪ್ರಕಾರ ಪ್ರತಿ ವರ್ಷ ರಾಜೀವರ ಬಜೆಟ್ ಹಂಚಿಕೆಯನ್ನು ಕೇಂದ್ರ ಸರ್ಕಾರದ ನಿರ್ಧರಿಸುತ್ತದೆ. ಅದೇ ರೀತಿ ಯಾವುದೇ ಹೆಚ್ಚುವನ್ನು ರಾಜ್ಯ ಸರ್ಕಾರಗಳೇ ಬರಿಸಬೇಕು. ಪ್ರತಿ ರಾಜ್ಯದಲ್ಲಿ ಒದಗಿಸಲು ಮಾನವ ದಿನಗಳ ಸಂಖ್ಯೆಯ ಮೇಲೆ ಮಿತಿಯನ್ನು ಹೇರುತ್ತದೆ ಎಂದರು. ಹೀಗಿರುವ ಬಜೆಟ್ ನಲ್ಲಿ ಕೇಂದ್ರ ಸರ್ಕಾರವು ಪ್ರತಿ ಕುಟುಂಬಕ್ಕೂ ವರ್ಷಕ್ಕೆ ಯೋಜನಗಳ ಕೆಲಸ ಒದಗಿಸಲು ಸಾಧ್ಯವಾಗುತ್ತಿಲ್ಲ. ಈ ಮೇಲೆ ಕೇಂದ್ರ ಸರ್ಕಾರ ಬಜೆಟ್ ಅನ್ನು ಮಿತಿಗೊಳಿಸುವ ನಿಟ್ಟಿನಲ್ಲಿ ರಾಜ್ಯಗಳ ಮೇಲೆ ಇನ್ನಷ್ಟು ಹಣದ ಹೊರೆ ಹಾಕುವ ಮೂಲಕ ಕೇಂದ್ರ ಸರ್ಕಾರ 125 ದಿನಗಳ ಉದ್ಯೋಗ ಹುಸಿ ಭರವಸೆ ನೀಡಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಮನರೇಗಾ ಅನುಷ್ಠಾನದಲ್ಲಿ ಕೇಂದ್ರ ಸರಕಾರ 90 ರಷ್ಟು ನೀಡಿದರೆ ರಾಜ್ಯ ಸರಕಾರ ಶೇ.10 ರಷ್ಟು ನೀಡಲಾಗುತ್ತಿತ್ತು.

ಆದರೆ ಈ ಮಸೂದೆಯಲ್ಲಿ ಕೇಂದ್ರ ಶೇ. 60 ರಷ್ಟು ನೀಡಿದರೆ ರಾಜ್ಯಗಳು 40 ರಷ್ಟು ಭರಿಸಬೇಕು ಎಂದರು. ಕೃಷಿ ಚಟುವಟಿಕೆ ಸಮಯದಲ್ಲಿ 60 ದಿನಗಳ ಕಾಲ ಈ ಯೋಜನೆ ಸ್ಥಗಿತಗೊಳಿಸಲಾಗಿದೆ. ಇದರಿಂದ ಗ್ರಾಮೀಣ ಬಡ ಜನರು ರಾಜ್ಯಗಳತ್ತ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣಗೊಂಡಿದೆ ಎಂದರು. ಈ ಸಂದರ್ಭದಲ್ಲಿ ಮಾರೆಮ್ಮ, ಹುಚ್ಚಮ್ಮ, ರೂಪ ಸೇರಿದಂತೆ ಉಪಸ್ಥಿತರಿದ್ದರು.

# ಡಿ.20 ರಂದು ಜೆಸ್ಕಾಂ ಗ್ರಾಮೀಣ ಗ್ರಾಹಕರ ಸಂವಾದ ಸಭೆ.

ವಿಜಯನಗರ(ಹೊಸಪೇಟೆ),: ಹೊಸಪೇಟೆ ಗ್ರಾಮೀಣ ಉಪ ವಿಭಾಗದಲ್ಲಿ ಡಿಸೆಂಬರ್.20 ರಂದು ಮದ್ಯಾಹ್ನ 3 ಗಂಟೆಗೆ ಹೊಸಪೇಟೆ ತಾಲೂಕಿನ ವಿದ್ಯುತ್ ಗ್ರಾಹಕರು

( ಹೊಸಪೇಟೆ ನಗರ ಹೊರತುಪಡಿಸಿ) ಸಭೆಯಲ್ಲಿ ಭಾಗವಹಿಸಿ ವಿದ್ಯುತ್ ಸಮಸ್ಯೆ ಇದ್ದಲ್ಲಿ ಅಹವಾಲು ಸಲ್ಲಿಸಿ ಪರಿಹರಿಸಿಕೊಳ್ಳಬೇಕು ಎಂದು ಕಾರ್ಯ ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ನಿಲಯ ಕಾರ್ಮಿಕರ ವೇತನ ಪಾವತಿಗೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ವೇತನ ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸದೆ ಕೂಡಲೇ ವೇತನ ಪಾವತಿ ಮಾಡಬೇಕು ಎಂದು ಅಖಿಲ ಕರ್ನಾಟಕ ಡಾ. ರಾಜುಕುಮಾರ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷರಾದ ಎನ್ ಎಮ್ ಮೈತ್ರಿಕರ್ ಅವರು ಹೇಳಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಕಳೆದ ಜೂನ್ ತಿಂಗಳಿಂದ ನಿಯಮನುಸರವಾಗಿ ಕಾರ್ಮಿಕರಿಗೆ ಸಮರ್ಪಕ ವೇತನ ನೀಡುತ್ತಿಲ್ಲ ಅದಲ್ಲದೆ ಪ್ರತಿ ತಿಂಗಳು ರೂ.2000 ವೇತನ ಕಡಿತಗೊಳಿಸಲಾಗುತ್ತದೆ ಎಂದು ದೂರಿದರು. ವೇತನ ನೀಡುವಲ್ಲಿ ತಾರತಮ್ಯ ವೇಸಿಗುತ್ತಿರುವ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ಗಮನಕ್ಕೆ ಇದ್ದರೂ ಗುತ್ತೇದಾರ ಹಾಗೂ ಏಜೆನ್ಸಿಗಳ ವಿರುದ್ಧ ಯಾವುದೇ ಕ್ರಮ ಜರುಗಿಸುತ್ತಿಲ್ಲ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಾರ್ಮಿಕರಿಗೆ ವೇತನ ಜೊತೆಗೆ ಇಪಿಎಫ್ ನೀಡುವಲ್ಲಿ ತಾರತಮ್ಯ ಮಾಡಲಾಗುತ್ತಿದೆ ಎಂದು ಆರೋಪಿಸಿದರು. ಏಜೆಂಟ್ ಕಪ್ಪು ಪಟ್ಟಿಗೆ ಸೇರಿಸುವ ಮೂಲಕ ಕೃತ್ಯಗಳಿಗೆ ಬೆಂಬಲ ನೀಡುತ್ತಿರುವ ಜಿಲ್ಲಾ ಉಪ್ಪನಿರ್ದೇಶಕರು ತಾಲೂಕು ಸಹಾಯಕ ನಿರ್ದೇಶಕರು ಮತ್ತು ಜೆಡಿಎಸ್ ಹನುಮಂತರಾಯ ಇವರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಯಿತು. ಸಮಾಜ ಕಲ್ಯಾಣ ಒಪ್ಪಿಯಲ್ಲಿ ಬರುವ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಆರೋಗ್ಯ ಹಿತದೃಷ್ಟಿಯಿಂದ ಮುನ್ನೆಚ್ಚರಿಕ್ರಮವಾಗಿ ಆಹಾರ ಸಂರಕ್ಷಿತ ಗುಣಮಟ್ಟ ಇಲಾಖೆ ವತಿಯಿಂದ ಅಡುಗೆಗೆ ಬಳಸುವ ಬಳಸುವ ದವಸ ಧಾನ್ಯಗಳ ಗುಣಮಟ್ಟ ಪರೀಕ್ಷಿಸಬೇಕು. ಆದರೆ ಇದುವರೆಗೂ ಪರಿಶೀಲನೆ ನಡೆಸಿಲ್ಲ ಎಂದು ದೂರಿದರು.

ಈ ಸಂದರ್ಭದಲ್ಲಿ ರಾಜಶೇಖರ ಮಾಚಲರ್ಹ, ಉರುಕುಂದ, ಜಂಬಣ್ಣ ಮರ್ಚೆಡ್ ಸೇರಿದಂತೆ ಉಪಸ್ಥಿತರಿದ್ದರು.

# ಕರ್ನಾಟಕ ಸಾಹಿತ್ಯ ಅಕಾಡೆಮಿ ಮತ್ತು ಚಕೋರ ಸಾಹಿತ್ಯ ವಿಚಾರ ವೇದಿಕೆ ಆಯೋಜನೆ

ವಿಜಯನಗರ(ಹೊಸಪೇಟೆ): ವಚನ ಸಾಹಿತ್ಯದಲ್ಲಿ ಅಡಗಿರುವ ಒಳ್ಳೆಯ ಜೀವನ ಮೌಲ್ಯಗಳು ಮತ್ತು ಸಂದೇಶಗಳನ್ನು ಅರಿತರೆ ವ್ಯಕ್ತಿತ್ವ ವಿಕಸನಕ್ಕೆ ಉತ್ತಮ ಮಾರ್ಗವಾಗಲಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಿ.ವಿ.ಪರಮಶಿವಮೂರ್ತಿ ಹೇಳಿದರು.

ನಗರದ ಶ್ರೀಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸಾಹಿತ್ಯ ಅಕಾಡೆಮೆ, ಬೆಂಗಳೂರು ಚಕೋರ ಸಾಹಿತ್ಯ ವಿಚಾರ ವೇದಿಕೆ ಹಾಗೂ ಶ್ರೀಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಯೋಗದಲ್ಲಿ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಗುರುವಾರ ಅವರು ಮಾತನಾಡಿದರು, ಸಾಹಿತ್ಯದ ಪ್ರಕಾರಗಳಲ್ಲಿ ವಚನ ಸಾಹಿತ್ಯ ತುಂಬಾ ಗಮನ ಸೆಳೆಯುವ ಪ್ರಾಮುಖ್ಯತೆಯನ್ನು ಹೊಂದಿದೆ. ತಂತ್ರಜ್ಞಾನ ಮತ್ತು ಕೃತಕಮತ್ತೆ ಯುಗದಲ್ಲಿ ವಚನಗಳ ಓದುಗರ ಸಂಖ್ಯೆ ಕ್ಷೀಣವಾಗಿದೆ. ವಚನಗಳನ್ನು ಓದುವ ಮೂಲಕ ಪ್ರತಿಯೊಬ್ಬರು ಅವುಗಳ ಮಹತ್ವವನ್ನು ತಿಳಿದುಕೊಳ್ಳಬೇಕಿದೆ. ಕಾಲಹರಣ ಮತ್ತು ಕಾಟಾಚಾರಕ್ಕೆ ವಚನಗಳನ್ನು ಓದುವ ಬದಲಾಗಿದೆ. ವಚನಗಳ ತಾತ್ಪರ್ಯವನ್ನು ಸರಿಯಾಗಿ ಅರ್ಥೈಸಿಕೊಂಡರೆ ಸ್ವಯಂಪ್ರೇರಿತ ಬದಲಾವಣೆ ಸಾಧ್ಯವಾಗಲಿದೆ. ಕನ್ನಡ ವಚನಕಾರರು ಅದ್ಭುತ ಸಾಹಿತ್ಯವನ್ನು ವಿಶ್ವಕ್ಕೆ ಕೊಡುಗೆಯಾಗಿ ನೀಡಿರುವುದು ನಿಜಕ್ಕೂ ಶ್ಲಾಘನೀಯ.

ಅಣ್ಣ ಬಸವಣ್ಣನವರ ಪ್ರಸಿದ್ಧ ವಚನವಾದ ಕಳಬೇಡ ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯ ಪಡೆಬೇಡ, ತನ್ನ ಬಣ್ಣಿಸಬೇಡ, ಇದಿರ ಹಳಿಯ ಬೇಡ, ಇದೇ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿಯ ವಚನದ ಈ ಸಾಲುಗಳ ಸಂಕ್ಷಿಪ್ತ ಅರ್ಥವನ್ನು ವಿದ್ಯಾರ್ಥಿಗಳಿಗೆ ತಿಳಿಪಡಿಸಿದರು.

ಕರ್ನಾಟಕ ಸಾಹಿತ್ಯ ಅಕಾಡಮಿಯ ಸದಸ್ಯ ಸಂಚಾಲಕ ಡಾ.ಮಲ್ಲಕಾರ್ಜುನ ಬಿ.ಮಾನ್ಪಡೆ ಮಾತನಾಡಿ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸಾಹಿತ್ಯದ ಬಗ್ಗೆ ಹೆಚ್ಚಿನ ಅಸಕ್ತಿ ಮತ್ತು ಅರಿವು ಮೂಡಿಸುವುದಕ್ಕೆ ಚಕೋರ ವಚನ ಸಾಹಿತ್ಯ ವೇದಿಕೆ ಎಂಬ ಕಾರ್ಯಕ್ರಮವನ್ನು ಪಿಯು, ಪದವಿ ಕಾಲೇಜಿನಲ್ಲಿ. ಏರ್ಪಡಿಸಲಾಗಿರುತ್ತದೆ. ಪಠ್ಯಕ್ರಮದ ಜತೆಗೆ ವಚನ ಸಾಹಿತ್ಯ, ಕಾದಂಬರಿ, ಕಥೆಗಳು ಮತ್ತು ಕಾವ್ಯಗಳನ್ನು ಓದಿಕೊಳ್ಳಬೇಕು. ಕರ್ನಾಟಕ ಸಾಹಿತ್ಯ ಅಕಾಡಮಿಯು 100 ಸಾಹಿತ್ಯ ಪುಸ್ತಕಗಳನ್ನು ಮುದ್ರಿಸಿ ಪ್ರಕಟಿಸಲಾಗುತ್ತಿದೆ. ಇಂದಿನ ಯುವಜನತೆ ಮೋಬೈಲು ಗೀಳು ಬಿಟ್ಟುಹಾಕಿ ವಚನ ಸಾಹಿತ್ಯವನ್ನು ಓದಿಕೊಳ್ಳಬೇಕು. ವಚನ ಸಾಹಿತ್ಯ ಬಗ್ಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ ವಿದ್ಯಾರ್ಥಿಗಳಲ್ಲಿನ ಪ್ರತಿಭೆಯನ್ನು ಗುರುತಿಸುವ ಕಾರ್ಯ ಶಿಕ್ಷಣ ಸಂಸ್ಥೆಗಳು ಮಾಡಬೇಕಿದೆ ಎಂದರು.

ಶ್ರೀಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ.ಜಿ.ನಾರಾಯಣ ಹೆಬಸೂರ ಮಾತನಾಡಿ, ಬಸವಣ್ಣ, ಅಲ್ಲಮಪ್ರಭು, ಸರ್ವಜ್ಞ, ಅಕ್ಕಮಹಾದೇವಿ ಸೇರಿದಂತೆ ಅನೇಕ ವಚನಕಾರರು ಬರೆದಿರುವ ಪ್ರತಿಯೊಂದು ವಚನವು ಸಹ ತನ್ನದೇ ಆದ ಮಹತ್ವ ಹೊಂದಿದೆ. ವಚನ ಸಾಹಿತ್ಯ ಭಾರತದಲ್ಲಷ್ಟೇ ಅಲ್ಲದೇ ವಿದೇಶಗಳಲ್ಲಿ ವಚನಗಳ ವಾಚನಕ್ಕೆ ತುಂಬಾ ಪ್ರೋತ್ಸಾಹ ನೀಡುತ್ತಿದ್ದಾ-ರೆ. ವಚನಗಳ ಅಧ್ಯಯನದಿಂದ ವಿದ್ಯಾರ್ಥಿಗಳಲ್ಲಿ ತಾಳ್ಮೆ, ಜ್ಞಾನ ಪ್ರಸರಣ, ವಚನಗಳ ಶ್ರೇಷ್ಠತೆಯನ್ನು ಪಡೆಯಬಹುದಾಗಿದೆ ಎಂದರು.

ಚಿಂತಕರು, ವಿಶ್ರಾಂತ ಪ್ರಾಧ್ಯಾಪಕ ಡಾ.ಮೃತ್ಯುಂಜಯ ರುಮಾಲೆ ಅವರು ಉತ್ತಮ ವ್ಯಕ್ತಿತ್ವ ರೂಪಿಸಲು ವಚನ ಸಾಹಿತ್ಯದ ಬಗ್ಗೆ ಉಪನ್ಯಾಸ ನೀಡಿದರು. ಈ ವೇಳೆ ಶ್ರೀಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಸಿ.ದೇವಣ್ಣ, ಕನ್ನಡ ವಿಭಾಗದ ಪ್ರಾಧ್ಯಾಪಕ ಡಾ.ನಾಗಣ್ಣ ಕಿಲಾರಿ, ಚಕೋರ ಸಾಹಿತ್ಯ ವಿಚಾರ ವೇದಿಕೆ ಸಂಚಾಲಕ ವೆಂಕಟೇಶ ಬಡಿಗೇರ, ಮುದೇನೂರು ಉಮಾಮಹೇಶ್ವರ ಸೇರಿದಂತೆ ವಿವಿಧ ವಿಷಯಗಳ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಪಂ. ಸಿದ್ದರಾಮ ಜಂಬಲದಿನ್ನಿ 37ನೇ ಸ್ಮರಣೆ:ದಿ. 21 ಸಂಗೀತ ಸಮ್ಮೇಳನ




ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಸ್ವರ ಸಂಗಮ ಸಂಗೀತ ವಿದ್ಯಾ ಸಂಸ್ಥೆ ವತಿಯಿಂದ ಪಂ.ಸಿದ್ದರಾಮ ಜಂಬಲದಿನ್ನಿ ಅವರ 37ನೇ ಪುಣ್ಯ ಸ್ಮರಣೆಯ ಅಂಗವಾಗಿ ದಿ. 21 ರಂದು ನಗರದ ಉದಯನಗರದ ಸಂಸ್ಥೆಯಲ್ಲಿ ಸಂಗೀತ ಸಮ್ಮೇಳನ ಕಾರ್ಯಕ್ರಮ ನಡೆಯಲಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ನರಸಿಂಹಲು ವಡವಾಟಿ ಅವರು ಹೇಳಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,ಈ ಕಾರ್ಯಕ್ರಮದ ದಿವ್ಯಾ ಸನ್ನಿದ್ಯಾವನ್ನು ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಅಭಿನವ ರಾಚೋಟಿವೀರ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಚಂದ್ರಶೇಖರ ಪಾಟೀಲ್ ಮಿರ್ಜಾಪೂರು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು,ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಡಾ. ಶಿವಪ್ರಸಾದ ಜಂಬಲದಿನ್ನಿ, ಡಾ. ರಮೇಶ ಸಿ. ಸಾಗರ, ಕಾಂಗ್ರೆಸ್ ಯುವ ಮುಖಂಡ ರವಿ ಬೋಸರಾಜು ಹಾಗೂ ರೇಖಾ ಬಡಿಗೇರಾ ಅವರು ಆಗಮಿಸಲಿದ್ದಾರೆ ಎಂದರು. ಕಲ್ಬುರ್ಗಿ ಪೀಠ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟಸಿಂಗ್ ಅವರಿಗೆ ಸನ್ಮಾನ ಮಾಡಲಾಗುವುದು ಎಂದರು. ಸಂಗೀತ ಸಮ್ಮೇಳನ ಕಾರ್ಯಕ್ರಮದಲ್ಲಿ ಕಲಾವಿದರಾದ ಪಂಡಿತ್ ಸಂತೋಷ ನಹಾರ್, ವಡವಾಟಿ ಶಾರದಾ ಹಾಗೂ ಪವನ್ ಹೈದ್ರಾಬಾದ್ ಅವರು ಭಾಗವಹಿಸಲಿದ್ದಾರೆ ಎಂದರು. ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮ ನಡೆಯಲಿದೆ ಎಂದರು. ಈ ಸಂದರ್ಭದಲ್ಲಿ ಶಂಕರ ನಾರಾಯಣ ಇದ್ದರು.

# ಪಲ್ಸ್ ಪೋಲಿಯೋ: ಪೋಸ್ಟರ್ ಬಿಡುಗಡೆ

ವಿಜಯನಗರ(ಹೊಸಪೇಟೆ), ಡಿಸೆಂಬರ್.18(ಕರ್ನಾಟಕ ವಾರ್ತೆ): ಜಿಲ್ಲಾದ್ಯಾಂತ ಡಿ.21 ರಿಂದ 25 ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಸಲಿಕೆ ಕಾರ್ಯಕ್ರಮದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿ ಕವಿತಾ. ಎಸ್.ಮನ್ನಿಕೇರಿ ಬುಧವಾರ ಸಂಜೆ ಬಿಡುಗಡೆಗೊಳಿಸಿದರು.

ಬಳಿಕ ಅವರು ಮಾತನಾಡಿ, ಐದು ವರ್ಷದೊಳಗಿನ ಯಾವುದೇ ಮಕ್ಕಳ ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ನಿಗಾ ವಹಿಸಿ. ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಜಿಲ್ಲೆಯ 100 ರಷ್ಟು ಪ್ರತಿಶತ ಸಾಧನೆ ಮಾಡಬೇಕು. ಇದಕ್ಕೆ ಸಂಬಂಧಿಸಿದಂತೆ ಎಲ್ಲಾ ಇಲಾಖೆಗಳು ಸದರಿ ಕಾರ್ಯಕ್ರಮದಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳುವುದರ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಹಾಕಿಸಿದ್ದರೂ ಈ ಸುತ್ತಿನಲ್ಲಿ ಮತ್ತೆ ಪೋಲಿಯೋ ಹನಿ ಹಾಕಿಸಿಕೊಳ್ಳುವುದರ ಮೂಲಕ ಪೋಲಿಯೋ ನಿರ್ಮೂಲನೆಗೆ ಸಾರ್ವಜನಿಕರು ಸಹಕರಿಸುಂತೆ ಮನವಿ ಮಾಡಿದರು.

ಒಟ್ಟಾರೆಯಾಗಿ ಜಿಲ್ಲೆಯ 1,39,55,179 ಜನಸಂಖ್ಯೆಯಿದ್ದು ಇದರಲ್ಲಿ 1,31,363 ಐದು ವರ್ಷದೊಳಗಿನ ಮಕ್ಕಳು ಇದ್ದರೆ. ಈ ಎಲ್ಲಾ ಮಕ್ಕಳಿಗೆ ಲಸಿಕೆ ಹಾಕಲು 1047 ಬೂತ್ ಗಳು ಮತ್ತು 912 ಮನೆಗಳಿಗೆ ತೆರಳಿ ಪೋಲಿಯೋ ಹನಿ ಹಾಕಲು ತಂಡಗಳನ್ನು ರಚಿಸಲಾಗಿದೆ. ಕಾರ್ಯಕ್ರಮದಲ್ಲಿ 2172 ಲಸಿಕಾದಾರರಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ, ಆರ್‌ಸಿಹೆಚ್ ಅಧಿಕಾರಿ ಡಾ.ಜಂಬಯ್ಯ, ಜಿಲ್ಲಾ ಪಂಚಾಯಿತಿ ಸಂಯೋಜಕ ಜೆ.ಎಂ.ಅನ್ನದಾನ ಸ್ವಾಮಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಿ.ಟಿ.ಮಂಜುನಾಥ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಶ್ವೇತಾ, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮನೋಹರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ.ಎ.ಕಾಳೆ, ಅಹಾರ ಇಲಾಖೆ ಉಪನಿರ್ದೇಶಕ ರಿಯಾಜ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ

ವಿಜಯನಗರ(ಹೊಸಪೇಟೆ) : ಜಿಲ್ಲಾದ್ಯಾಂತ ಡಿ.21 ರಿಂದ 25 ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿ ಕವಿತಾ.ಎಸ್.ಮನ್ನಿಕೇರಿ ಬುಧವಾರ ಸಂಜೆ ಬಿಡುಗಡೆಗೊಳಿಸಿದರು.ಬಳಿಕ ಅವರು ಮಾತನಾಡಿ, ಐದು ವರ್ಷದೊಳಗಿನ ಯಾವುದೇ ಮಕ್ಕಳ ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ನಿಗಾ ವಹಿಸಿ. ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಜಿಲ್ಲೆಯ 100 ರಷ್ಟು ಪ್ರತಿಶತ ಸಾಧನೆ ಮಾಡಬೇಕು. ಇದಕ್ಕೆ ಸಂಬಂಧಿಸಿದಂತೆ ಎಲ್ಲಾ ಇಲಾಖೆಗಳು ಸದರಿ ಕಾರ್ಯಕ್ರಮದಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳುವುದರ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಲಸಿಕೆ ಹಾಕಿಸಿದ್ದರೂ ಈ ಸುತ್ತಿನಲ್ಲಿ ಮತ್ತೆ ಪೋಲಿಯೋ ಹನಿ ಹಾಕಿಸಿಕೊಳ್ಳುವುದರ ಮೂಲಕ ಪೋಲಿಯೋ ನಿರ್ಮೂಲನೆಗೆ ಸಾರ್ವಜನಿಕರು ಸಹಕರಿಸುಂತೆ ಮನವಿ ಮಾಡಿದರು.ಜಿಲ್ಲೆಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 5 ವರ್ಷದೊಳಗಿನ ಮಕ್ಕಳ ಸಂಖ್ಯೆ 1,21,585 ಇದ್ದು, ಜಿಲ್ಲೆಯಲ್ಲಿ ಒಟ್ಟು 1040 ಕೇಂದ್ರಗಳಲ್ಲಿ ಲಸಿಕೆ ಹಾಕಲಾಗುತ್ತದೆ. ಒಟ್ಟು 923 ತಂಡಗಳನ್ನು ರಚಿಸಲಾಗಿದೆ. 04 ಮೊಬೈಲ್ ತಂಡಗಳು ಹಾಗೂ ಬಸ್ ನಿಲ್ದಾಣ, ರೈಲ್ವೇ ಸ್ಟೇಷನ್ ಮತ್ತು ಪ್ರಮುಖ ವೃತ್ತಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ 50 ಟ್ರಾನ್ಸಿಟ್ ಕೇಂದ್ರಗಳನ್ನು ಸ್ಥಾಪಿಸಲಾಗುತ್ತದೆ. 2170 ಲಸಿಕಾ ಕಾರ್ಯಕರ್ತರನ್ನು ನಿಯೋಜನೆ ಮಾಡಲಾಗಿದೆ. ಮೊದಲ ದಿನ ಬೂತ್ ಮಟ್ಟದಲ್ಲಿ ನಂತರ ಮೂರು ದಿನಗಳ ಕಾಲ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಾಗುತ್ತದೆ ಎಂದು ಮಾಹಿತಿ ನೀಡಿದರು.ಈ ವೇಳೆ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ, ಆರ್‌ಸಿಹೆಚ್ ಅಧಿಕಾರಿ ಡಾ.ಜಂಬಯ್ಯ, ಜಿಲ್ಲಾ ಪಂಚಾಯತಿ ಸಂಯೋಜಕ ಜೆ.ಎಂ.ಅನ್ನದಾನ ಸ್ವಾಮಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಿ.ಟಿ.ಮಂಜುನಾಥ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಎಸ್.ಶ್ವೇತಾ, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮನೋಹರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ.ಎ.ಕಾಳೆ, ಅಹಾರ ಇಲಾಖೆ ಉಪನಿರ್ದೇಶಕ ರಿಯಾಜ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರ

# 23ರಂದು ಕಲುಬುರ್ಗಿಯಲ್ಲಿ ವಿಶ್ವ ರೈತ ದಿನಾಚರಣೆ ರೈತರ ಹಬ್ಬ, ರಾಜ್ಯಮಟ್ಟದ ರೈತ ಸಮಾವೇಶ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ರೈತ ಸಂಘ ಹಸಿರು ಸೇನೆ ರಾಜ್ಯ ಕಬ್ಬು ಬೆಳೆಗಾರರ ಸಂಘ ಕರ್ನಾಟಕ ವತಿಯಿಂದ ವಿಶ್ವ ರೈತ ದಿನಾಚರಣೆ ರೈತರ ಹಬ್ಬ ಹಾಗೂ ರಾಜ್ಯಮಟ್ಟದ ರೈತ ಸಮಾವೇಶ ಕಲಬುರ್ಗಿಯಲ್ಲಿ ದಿ.23ರಂದು ಆಯೋಜಿಸಲಾಗಿದೆ ಎಂದು ಕರ್ನಾಟಕ ರೈತರ ಕೃಷಿ ಸಂರಕ್ಷಣ ಸಮಿತಿ ರಾಜ್ಯಾಧ್ಯಕ್ಷರಾದ ಮಸ್ತಾನ್ ನಾಯಕ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಲುಬುರ್ಗಿಯ ಡಾ.ಎಸ್. ಎಂ.ಪಂಡಿತರಂಗ ಮಂದಿರದಲ್ಲು ಬೆಳಿಗ್ಗೆ 11 ಗಂಟೆಗೆ ಸಮಾವೇಶ ಉದ್ಘಾಟನೆ ನಡರಯಲಿದೆ.

ರಾಜ್ಯಾಧ್ಯಕ್ಷ ರೈತರತ್ನ ಕುರುಬೂರ್ ಶಾಂತಕುಮಾರ ಸೇರಿದಂತೆ ಅನೇಕ ರೈತ ನಾಯಕರು,ಗಣ್ಯರು ಭಾಗವಹಿಸಲಿದ್ದಾರೆ.

ಸಮ್ಮೇಳನದಲ್ಲಿ ಕೃಷಿ ಸಾಲ ನೀಡಿ ಬದರಾಗಲಿ ಭೂಮಿ ಮೌಲ್ಯಕ್ಕೆ ಅನುನಾನವಾಗಿ ಸಾಲನೀಡುವಂತಾಗಲಿ ಕೃಷಿ ಸಾಲಕ್ಕೆ ಬಿಲ್ ಸ್ಕೋರ್, ಕೃಷಿ ಭೂಮಿ ಮುಟ್ಟುಗೊಲ ಕಾಯ್ದೆ ರದ್ದಾಗಬೇಕು,

ಕಬ್ಬಿನಿಂದನಿಂದ ಬರುವ ಸಕ್ಕರೆ ಇಳಿವರಿ ಪ್ರಮಾಣ ಕಡಿದು ತೋರಿಸಿ ರೈತರಿಗೆ ಮೋಸ ಮಾಡುತ್ತಿರುವುದನ್ನು ತಪ್ಪಿಸಲು ಕಾನೂನು ಜಾರಿ ಮಾಡಬೇಕು.ಫಸಲ್ ಭೀಮಾ ಬೆಳೆ ವಿಮಾ ಪದ್ಧತಿ ನೀತಿ ಬದಲಾಗಲಿ ಪ್ರತಿ ರೈತರ ಹೊಲದ ಬೆಳೆ ವಿಮೆ ನಷ್ಟ ಪರಿಹಾರ ಸಿಗುವಂತಾಗಬೇಕ ಎ.ಪಿ.ಎಂ.ಸಿ.ಗಳಲ್ಲಿ ದಲ್ಲಾಳಿಗಳು ರೈತರಿಂದ 10 ರಷ್ಟು ಕಮಿಷನ್ ವಸೂಲಿ ನಿಲ್ಲಿಸಲು ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು,

ಎನ್ ಡಿ ಆರ್ ಎಫ್ ಮಾನದಂಡ ಬದಲಾಗಲಿ ಅತಿವೃಷ್ಟಿ ಮುಳೆಹಾನಿ, ಬರ ಪರಿಹಾರ, ಪ್ರಕೃತಿ ವಿಕೋಪ ಪರಿಹಾರ ಮಾನದಂಡ ಬದಲಾಯಿಸಿ ಸಂಪೂರ್ಣ ಕಷ್ಟ ಪರಿಹಾರ ನೀಡಬೇಕು ಸೇರಿದಂತೆ ಅನೇಕ ಬೇಡಿಕೆಗಳು ಈಡೇರಿಸಲು ಒತ್ತಾಯಿಸಲಾಗುವುದು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಗಮನ ಸೆಳೆಯಲು ನಿರ್ಣಯ ಕೈಗೊಳ್ಳಲಾಗುತ್ತದೆ. ರೈತರು ಸ್ವಾಭಿಮಾನಿಗಳಾಗಿ ಸ್ವ-ಯಂ ಪ್ರೇರಿತರಾಗಿ ರೈತರ ಹಬ್ಬ ಆಚರಿಸಲು ಕಲ್ಬುರ್ಗಿಗೆ ರೈತರು ಆಗಮಿಸುವಂತೆ ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸಂಗಮೇಶ ನಾಯಕ ಉಪಸ್ಥಿತರಿದ್ದರು.

## ಕರ್ನಾಟಕ ಆರ್‌ಎಸ್‌ಎಸ್‌ಡಿಐ ೨೧ ನೇ ವಾರ್ಷಿಕ ಸಮ್ಮೇಳನ

# ಮಧುಮೇಹ ರೋಗದ ನಿಯಂತ್ರಣ, ಔಷಧಿ ಬಗ್ಗೆ ಚರ್ಚೆ



ರಾಯಚೂರು.ಡಿ.18 ಎಪಿಐ ರಾಯಚೂರು ಶಾಖೆಯ , ಜನರಲ್ ಮೆಡಿಸಿನ್ ವಿಭಾಗ ನವೋದಯ ವೈದ್ಯಕೀಯ ಕಾಲೇಜು ರಾಯಚೂರು ಮತ್ತು ಜನರಲ್ ಮೆಡಿಸಿನ್ ವಿಭಾಗ ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆ(ರಿಮ್ಸ್), ಸಹಯೋಗದೊಂದಿಗೆ ಕರ್ನಾಟಕ ಆರ್ ಎಸ್ ಎಸ್ ಡಿಐ 21 ವಾರ್ಷಿಕ ಸಮ್ಮೇಳನ ಡಿ.19 ರಿಂದ 21ರಂದು ಮಧುಮೇಹದಿಂದ ಯೋಗಕ್ಷಮದ ಕಡೆಗೆ ಕಾರ್ಯಾಗಾರ ನವೋದಯ ವೈದ್ಯಕೀಯ ಕಾಲೇಜುನಲ್ಲಿ ಆಯೋಜಿಸಲಾಗಿದೆ ಎಂದು ಕೆಆರ್‌ಎಸ್‌ಎಸ್ಡಿ ಅಧ್ಯಕ್ಷರು ಹಾಗೂ ಆಯೋಜಕರಾದ ಡಾ.ಬಸವರಾಜ ಪಾಟೀಲ್ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,

ತಾಲೂಕಿನ ಜೇಗರಕಲ್ ಹಾಗೂ ಹೊಸಪೇಟೆ ಗ್ರಾಮಗಳನ್ನು ದತ್ತು ಪಡೆದು ಮಧುಮೇಹ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲಾಗುವುದೆಂದರು.

ಮಧುಮೇಹ ರೋಗದ ಬಗ್ಗೆ ಜಾಗೃತಿ ಹಾಗೂ ಸರಿಯಾದ ಆಹಾರ ಪದ್ಧತಿ, ಜೀವನ ಶೈಲಿ ಹಾಗೂ ನಿಗಧಿತ ಔಷಧಿ ಪಡೆಯುವುದರಿಂದ ರೋಗವನ್ನು ನಿಯಂತ್ರಿಸಬಹುದಾಗಿದೆ. ಮಧುಮೇಹ ಸಕ್ಕರೆ ಕಾಯಿಲೆ ಹೆಚ್ಚಾದರೆ ಬೇರೆ ಬೇರೆ ರೋಗಗಳಿಗೆ ಮನುಷ್ಯ ತುತ್ತಾಗಬೇಕಾಗುತ್ತದೆ ಎಂದರು.

ಸಮ್ಮೇಳನದಲ್ಲಿ ಬೇರೆ ಬೇರೆ ಕಡೆಗಳಿಂದ ವೈದ್ಯರು ಆಗಮಿಸಲಿದ್ದು ಮಧುಮೇಹ ರೋಗದ ಚಿಕಿತ್ಸೆ,

ನಿಯಂಯ್ರಣ ಸೇರಿದಂತೆ ಮಧುಮೇಹ ಕಾಯಿಲೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆಗಳು ನಡಯಲಿವೆ ಎಂದರು. ಈ ಸಂದರ್ಭದಲ್ಲಿ ಡಾ.ಮಹಾಲಿಂಗಪ್ಪ, ಡಾ.ರಾಮಕೃಷ್ಣ, ಡಾ. ಎ.ಎಸ್. ಎಸ್.ಎಸ್. ರೆಡ್ಡಿ, ಡಾ.ಹರಿಪ್ರಸಾದ್ ಎಸ್., ಡಾ.ಸಗರದ ಉಪಸ್ಥಿತರಿದ್ದರು.

# ನ್ಯಾಷನಲ್ ಹೆರಾಲ್ಡ್ ಸುಳ್ಳು ಪ್ರಕರಣ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು,:

ಕೇಂದ್ರ ಸರ್ಕಾರ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರ ವಿರುದ್ಧ ಮಾಡುತ್ತಿರುವ ದ್ವೇಷ ರಾಜಕಾರಣ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಲಾಯಿತು.

ನಗರದ ರೇಡಿಯೋ ಸ್ಟೇಷನ್ ನಿಂದ ಬಿಜೆಪಿ ಕಚೇರಿ ವರೆಗೆ ಪ್ರತಿಭಟನೆ ನಡೆಸಲಾಯಿತು. ಕೇಂದ್ರದ ದ್ವೇಷ ರಾಜಕಾರಣ ಖಂಡಿಸಿ ಕಾಂಗ್ರೆಸ್ ನಾಯಕರು ಬಿಜೆಪಿ, ಪ್ರಧಾನಿ ಮೋದಿ,

ಅಮಿತ್ ಶಾ ವಿರುದ್ಧ ಧಿಕ್ಕಾರ ಕೂಗಿದರು. ಇಡಿ ದುರುಪಯೋಗ ಮಾಡಿದ ಕೇಂದ್ರ ಸರ್ಕಾರಕ್ಕೆ ಧಿಕ್ಕಾರ ಎಂದು ಘೋಷಣೆಗಳನ್ನು ಕೂಗಿದರು. ಪ್ರತಿಭಟನೆ ಉದ್ದೇಶಿಸಿ ಕಾಂಗ್ರೆಸ್ ಮುಖಂಡರಾದ ಕೆ. ಶಾಂತಪ್ಪ ಅವರು ಮಾತನಾಡಿ, ಕೇಂದ್ರ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ಕೇಂದ್ರ ಬಿಜೆಪಿ ಸರ್ಕಾರ ಕಾಂಗ್ರೆಸ್ ಧೀಮಂತ ನಾಯಕರ ಮೇಲೆ ಸುಳ್ಳು ಪ್ರಕರಣ ದಾಖಲಿಸುವ ಪ್ರಯತ್ನ ಮಾಡಲಾಗುತ್ತದೆ.ಈ ಹಿನ್ನಲೆಯಲ್ಲಿ ನ್ಯಾಷನಲ್ ಹೆರಾಲ್ಡ್ ಸುಳ್ಳು ಪ್ರಕರಣದಲ್ಲಿ ಕೇಂದ್ರ ಬಿಜೆಪಿ ಸರಕಾರಕ್ಕೆ ಸುಪ್ರೀಂ ಕೋರ್ಟ್ ನಿಂದ ಚಿಮಾರಿ ಆಗಿದೆ. ಕೇಂದ್ರದ ಅಂಗ. ಸಂಸ್ಥೆಗಳನ್ನು

ಬೆಳೆಸಿಕೊಂಡು ಕಾಂಗ್ರೆಸ್ ನಾಯಕರನ್ನು ಸುಳ್ಳು ಕೇಸ್ ನಲ್ಲಿ ಸಿಲುಕಿಸುವ ಷಡ್ಯಂತ್ರ ಕೇಂದ್ರ ಬಿಜೆಪಿ ಮಾಡುತ್ತಿದೆ ಎಂದರೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿಯವರ ಷಡ್ಯಂತ್ರನಂತರ ಪ್ರಯತ್ನಕ್ಕೆ ಕಾಂಗ್ರೆಸ್ ಜಗ್ಗುವುದಿಲ್ಲ ಬಗ್ಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಇದು ಬಿಜೆಪಿಯರ ದ್ವೇಷದ ರಾಜಕಾರಣ.

ಬಿಜೆಪಿಯಲ್ಲಿ ದೆಹಲಿಯಲ್ಲಿ ಅಧಿಕಾರ ಇದೆ.

ಕಾಂಗ್ರೆಸ್‌ನವರನ್ನು ಗು-ರಿಯಾಗಿಸಿ ಕೋರ್ಟ್‌ನಲ್ಲಿ ಅಲೆಸುವ ಕೆಲಸ ಮಾಡುತ್ತಿದ್ದಾರೆ. ಅವರನ್ನು ಅಪರಾಧಿಗಳನ್ನಾಗಿ ಮಾಡಲು ಯತ್ನಿಸುತ್ತಿದ್ದಾರೆ. ಅಸತ್ಯ ವಿಚಾರ ಮೂಲಕ ಈ ರೀತಿ ಟಾರ್ಗೆಟ್

ಮಾಡುತ್ತಿದ್ದಾರೆ. ಇಂದು ದೇಶದಲ್ಲಿ ಭ್ರಷ್ಟಾಚಾರ ತಾಂಡವ ಆಡುತ್ತಿದೆ.

ನಿರುದ್ಯೋಗ ತಾಂಡವ ಆಡುತ್ತಿದೆ.ಅದು ಕಾಂಗ್ರೆಸ್ ಪಕ್ಷದ ಆಸ್ತಿ. ನ್ಯಾಯಾಲಯ ಇಡಿ ದೋಷಾರೋಪಪಟ್ಟಿ ರದ್ದು ಮಾಡಿದೆ.

ದ್ವೇಷದ ರಾಜಕಾರಣ ಮಾಡಿರುವುದು ಈಗ ಸಾಬೀತಾಗಿದೆ ಎಂದು ಕಿಡಿಕಾರಿದರು.

# ನಗರಸಭೆ ಆದಾಯವನ್ನು ಹೆಚ್ಚಿಸಲು ಅಗತ್ಯ ಕ್ರಮವಹಿಸಿ ಡಾ. ಸುರೇಶ ಇಟ್ನಾಳ



**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :** ಕಂದಾಯಾಧಿಕಾರಿಗಳು, ಕಂದಾಯ ನಿರೀಕ್ಷಕರು ಹಾಗೂ ಎಲ್ಲಾ ವಾರ್ಡಿನ ಕರ ವಸೂಲಿಗಾರರು ಬಾಕಿ ಇರುವ ತೆರಿಗೆ ಪಟ್ಟಿಯನ್ನು ಸಿದ್ಧಪಡಿಸಿ, ನಗರಸಭೆಯ ಆದಾಯವನ್ನು ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೊಪ್ಪಳ ನಗರಸಭೆ ಆಡಳಿತಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು. ಅವರು ಗುರುವಾರ ಕೊಪ್ಪಳ ನಗರಸಭೆ ಕಾರ್ಯಾಲಯದ ಸಭಾಂಗಣದಲ್ಲಿ ಜರುಗಿದ ನಗರಸಭೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕರ ಬಾಕಿ ಉಳಿಸಿಕೊಂಡಿರುವ ಆಸ್ತಿ ಮಾಲೀಕರುಗಳಿಗೆ ಕ್ರಮವಾಗಿ ನೋಟಿಸ್ ಜಾರಿ ಮಾಡಿ ಆಸ್ತಿ ಕರ ವಸೂಲಾತಿ ಮಾಡಬೇಕು. ಅದೇ ರೀತಿ ನೀರಿನ ಕರ ವಸೂಲಾತಿ, ಉದ್ದಿಮೆ ಪರವಾನಿಗೆ ಶುಲ್ಕ ವಸೂಲಾತಿ, ಉದ್ದಿಮೆ ಪರವಾನಿಗೆ ನವೀಕರಣ, ಜಾಹೀರಾತು ಶುಲ್ಕ ವಸೂಲಾತಿ, ನಗರಸಭೆಯ ವಾಣಿಜ್ಯ ಮಳಿಗೆಗಳ ಬಾಡಿಗೆ ವಸೂಲಾತಿ ಮಾಡಲು ಅಗತ್ಯ ಕ್ರಮವಹಿಸಬೇಕು. ನಗರದಲ್ಲಿರುವ ಎಲ್ಲಾ ಸಾರ್ವಜನಿಕ ಸ್ವತ್ತುಗಳಿಗೆ ಇ-ಖಾತಾ ತಂತ್ರಾಂಶದಲ್ಲಿ ಆಸ್ತಿಗಳ ಮಾಹಿತಿಯನ್ನು ನಮೂದಿಸಲು ಪ್ರತಿ ಸೋಮವಾರ ವಾರ್ಡಗಳಲ್ಲಿ ಶಿಭಿರವನ್ನು ಏರ್ಪಡಿಸಿ, ದಾಖಲಾತಿಗಳನ್ನು ಸಂಗ್ರಹಿಸಿಕೊಂಡು 500 ಆಸ್ತಿಗಳಿಗೆ ಗುರಿಯನ್ನು ನಿಗದಿಪಡಿಸಬೇಕು. ಆಸ್ತಿಯ ಮಾಲೀಕರುಗಳು ಆಸ್ತಿ ತೆರಿಗೆ ಪಾವತಿ ಮಾಡಿದ ತೆರಿಗೆ ವಿವರವನ್ನು ಸ್ಥಾನಿಕವಾಗಿ ಪರಿಶೀಲನೆ ಮಾಡಿ, ಜತೆಗೆ ಕಟ್ಟಡದ ವಿನ್ಯಾಸವನ್ನು ಸಹ ಪರಿಶೀಲನೆ ಮಾಡಿ ವ್ಯತ್ಯಾಸ ಕಂಡು ಬಂದಲ್ಲಿ ಅದನ್ನು ಸರಿಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಸ್ತಿಕರವನ್ನು ಆನಲೈನ್ ಮುಖಾಂತರ ಪೇಮೆಂಟ್ ಮಾಡಲು ಹಾಗೂ ತಾಂತ್ರಿಕ ವಿಭಾಗದ ಕಿರಿಯ ಅಭಿಯಂತರರಿಗೆ ನಗರದಲ್ಲಿ ಅನಧೀಕೃತ ಕಟ್ಟಡಗಳ ನಿರ್ಮಾಣ, ಸಾರ್ವಜನಿಕ ದೂರು ಸಲ್ಲಿಸಲು ಸಹಾಯವಾಣಿಗಾಗಿ ವಾಟ್ಸ್‌ಆಪ್ ನಂಬರ್ ಸಿದ್ದಪಡಿಸಲು ಅಗತ್ಯಕ್ರಮವಹಿಸಿ. ಜತೆಗೆ ನಗರದಲ್ಲಿ ಸಮರ್ಪಕವಾಗಿ ಬೀದಿ ದೀಪಗಳ ವ್ಯವಸ್ಥೆಯ ಇರುವಂತೆ ನೋಡಿಕೊಳ್ಳಬೇಕು. ನಗರಸಭೆಯ ಆರೋಗ್ಯ ನಿರೀಕ್ಷಕರು ಮನೆ ಕಸ ಸಂಗ್ರಹಣೆಯ ಬಗ್ಗೆ ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು. ಶಾಲಾ ಕಾಲೇಜುಗಳಲ್ಲಿ ಐ.ಇ.ಸಿ. ಕಾರ್ಯಕ್ರಮವನ್ನು ಹಮ್ಮಿಕೊಂಡು, ತ್ಯಾಜ್ಯ ವಸ್ತುಗಳ ನಿರ್ವಹಣೆ ಕುರಿತು ಮಾಹಿತಿಯನ್ನು ನೀಡಬೇಕು ಎಂದರು. ನಗರದ ಘನತ್ಯಾಜ್ಯ ವಸ್ತುಗಳ ವಿಲೇವಾರಿ ಘಟಕದಲ್ಲಿ ತಯಾರಿಸುವ ಕಾಂಪೋಸ್ಟ್ ಗೊಬ್ಬರವನ್ನು 1 ಕೆಜಿ., 5 ಕೆಜಿ., ಮತ್ತು 10 ಕೆಜಿ ಪ್ಯಾಕ್ ಮಾಡಿ, ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದಲ್ಲಿ ಮಾರಾಟ ಮಾಡಲು ಕ್ರಮ ಕೈಗೊಳ್ಳುವಂತೆ ನಗರಸಭೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಕೊಪ್ಪಳ ನಗರಸಭೆ ಪೌರಾಯುಕ್ತರಾದ ವೆಂಕಟೇಶ ನಾಗನೂರು ಸೇರಿದಂತೆ ಇತರೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಕೆಎಲ್‌ಇ ಕಾಲೇಜಿನ ವಿದ್ಯಾರ್ಥಿ ವಿಜ್ಞಾನ ಮಾದರಿ ತಯಾರಿಕೆಯಲ್ಲಿ ರಾಜ್ಯಕ್ಕೆ ತೃತೀಯ



**ಮಲ್ಲಮ್ಮ ನುಡಿ ವಾರ್ತೆಕೊಪ್ಪಳ:** ತುಮಕೂರಿನಲ್ಲಿ ನಡೆದ ಪದವಿಪೂರ್ವ ಕಾಲೇಜುಗಳ 2025- 26 ನೇ ಸಾಲಿನ ರಾಜ್ಯ ಮಟ್ಟದ ಸಾಂಸ್ಕೃತಿಕ ಹಾಗೂ ಪಠ್ಯೇತರ ಚಟುವಟಿಕೆಗಳ ಸ್ಪರ್ಧೆಯಲ್ಲಿ ವಿಜ್ಞಾನ ಮಾದರಿ ತಯಾರಿಕೆ ಸ್ಪರ್ಧೆಯಲ್ಲಿ ಕಲಬುರ್ಗಿ ವಿಭಾಗದಿಂದ ಭಾಗವಹಿಸಿದ ನಮ್ಮ ಕುಕನೂರಿನ ಕೆಎಲ್‌ಇಕಾಲೇಜಿನ ವಿದ್ಯಾರ್ಥಿ ವಿಜ್ಞಾನ ಮಾದರಿ ತಯಾರಿಕೆಯಲ್ಲಿ ರಾಜ್ಯಕ್ಕೆ ತೃತೀಯ ಕೆಎಲ್‌ಇ ಪದವಿ ಪೂರ್ವ ಕಾಲೇಜಿನ ಪ್ರಥಮ ಪಿಯುಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿನಿಯಾದ ಸ್ವಾತಿ ಶಿವಸಿಂಪರ ತೃತೀಯ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿರುತ್ತಾಳೆ.

ವಿದ್ಯಾರ್ಥಿನಿಯ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿಯ ಸರ್ವ ಸದಸ್ಯರು ಹಾಗೂ ಪ್ರಾಚಾರ್ಯರಾದ ಅರುಣಕುಮಾರ ಹಿರೇಮಠ ಮತ್ತು ಸಿಬ್ಬಂದಿ ವರ್ಗದವರು ಹಾಗೂ ಎಲ್ಲ ವಿದ್ಯಾರ್ಥಿಗಳು ಅಭಿನಂದಿಸಿರುತ್ತಾರೆ. ಕುಕನೂರಿನ ಹಿಂದುಳಿದ ಗ್ರಾಮೀಣ ಭಾಗದ ವಿದ್ಯಾರ್ಥಿನಿಯಾದ ಸ್ವಾತಿ ರಾಜ್ಯಮಟ್ಟದಲ್ಲಿ ವಿಜ್ಞಾನ ಮಾದರಿ ತಯಾರಿಕೆಯಲ್ಲಿ ಸಾಧನೆ ಮಾಡಿರುವುದು ಹೆಮ್ಮೆಯ ವಿಷಯ ಎಂದು ಕಾಲೇಜಿನ ಪ್ರಾಚಾರ್ಯರಾದ ಅರುಣಕುಮಾರ ಹಿರೇಮಠರವರು ಅಭಿಪ್ರಾಯಪಟ್ಟಿರುತ್ತಾರೆ.

## ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ 'ಪ್ರಬುದ್ಧ ಭಾರತ' ಅಂತರಾಷ್ಟ್ರೀಯ ಸಮ್ಮೇಳನ

# ಪ್ರಬುದ್ಧ ಭಾರತ ನಿರ್ಮಾಣ ಅಂಬೇಡ್ಕರ್‌ರ ಕನಸು: ಪ್ರೊ.ವಿಶ್ವನಾಥ ಅಭಿಮತ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಬುದ್ಧನವೈಚಾರಿಕತೆಯನ್ನುಅಳವಡಿಸಿಕೊಂಡು ದೇಶದ ಅತಿದೊಡ್ಡ ಪಿಡುಗಾದ ಜಾತಿ ವ್ಯವಸ್ಥೆಯನ್ನು ತೊಡೆದುಹಾಕಿ ಪ್ರಬುದ್ಧ ಭಾರತ ನಿರ್ಮಿಸುವ ಕನಸನ್ನು ಡಾ.ಬಿ.ಆರ್ ಅಂಬೇಡ್ಕರ್ ಅವರು ಕಂಡಿದ್ದರು ಎಂದು ಡಾ.ಬಿ.ಆರ್ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ (ಬೇಸ್) ವಿಶ್ವವಿದ್ಯಾಲಯದ ಕುಲಪತಿ ಪ್ರೊ.ವಿಶ್ವನಾಥ ಅವರು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್ ಅಂಬೇಡ್ಕರ್ ತರಬೇತಿ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ ಹಾಗೂ ಇನ್ಸಿ ಟ್ಯೂಟ್ ಆಫ್ ಡಾ.ಬಿ.ಆರ್ ಅಂಬೇಡ್ಕರ್ ಟ್ರೇನಿಂಗ್, ರಿಸರ್ಚ್ ಅಂಡ್ ಎಕ್ಸ್ಟೆನ್ಷಿಯನ್ ಸೆಂಟರ್, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಆಯೋಜಿಸಿರುವ ಎರಡು ದಿನಗಳ 'ಪ್ರಬುದ್ಧ ಭಾರತ' ಅಂತರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಪಂಚಾಯಿತಿಗಳಿಂದಪಾರ್ಲಿಮೆಂಟಿನವರೆಗೂ ಜಾತಿ ಆಧಾರದ ಮೇಲೆ ಜನನಾಯಕರ ಆಯ್ಕೆಯಾಗುತ್ತದೆ.ಭಾರತದಂತಹ ಜ್ಯಾತ್ಯಾತೀತ ರಾಷ್ಟ್ರದಲ್ಲಿ ಅಸ್ಪ್ರಶ್ಯತೆ ಎಂಬುದು ಇಂದಿಗೂ ಕಾಣಸಿಗುತ್ತದೆ. ಜಾತಿ ಸಂಕೋಲೆಯನ್ನು ತೊಡೆದು ಹಾಕಲು ಬಾಬಾಸಾಹೇಬರು ಬುದ್ಧನ ಮಾರ್ಗವನ್ನು ಅನುಸರಿಸಿದರು ಎಂದು ತಿಳಿಸಿದರು.

1990ರ ದಶಕದ ನಂತರ ಮಹಾರಾಷ್ಟ್ರ ರಾಜ್ಯವು ಬಾಬಾಸಾಹೇಬರ ವಿಚಾರಧಾರೆಗಳನ್ನು ಪುಸ್ತಕಗಳ ಮೂಲಕ ಬೆಳಕಿಗೆ ತಂದು ಅವರ ವ್ಯಕ್ತಿತ್ವವನ್ನು ಪ್ರಸಿದ್ಧಿಗೊಳಿಸಿದರು. ನಂತರದಲ್ಲಿ ಕೇಂದ್ರ ಸರ್ಕಾರವು ವಿಶೇಷ ಆಸಕ್ತಿ ವಹಿಸಿ ಸಂವಿಧಾನ ಶಿಲ್ಪಿಯನ್ನು ಗುರುತಿಸಿ ಗೌರವಿಸಿದರು. ಸ್ವಾತಂತ್ರ ,ಸಮಾನತೆ ಹಾಗೂ ಭ್ರಾತೃತ್ವ ಎಂಬ ಧ್ಯೇಯಗಳೊಂದಿಗೆ ಸಮಾಜದಲ್ಲಿ ಸರ್ವರಿಗೂ ಸಮಾನ ಅವಕಾಶ ಕಲ್ಪಿಸುವುದು ಅಂಬೇಡ್ಕರ್ ಅವರ ಗುರಿಯಾಗಿತ್ತು. ಇದೇ ಮನಸ್ಥಿತಿಯಲ್ಲಿ ಅವರು ಭಾರತದ ಸಂವಿಧಾನವನ್ನು ರಚಿಸಿದರು ಎಂದರು.ಚಿತ್ರನಟ ಹಾಗೂ ಸಾಮಾಜಿಕ ಕಾರ್ಯಕರ್ತರಾದ ಚೇತನ್ ಕುಮಾರ್ ಸಮ್ಮೇಳನದ ದಿಕ್ಸೂಚಿ ಭಾಷಣಕಾರರಾಗಿ ಮಾತನಾಡುತ್ತಾ, ಶಿಕ್ಷಣ ಎಂಬ ಅಸ್ತ್ರದ ಮೂಲಕ ಪ್ರಬುದ್ಧ ಭಾರತ ನಿರ್ಮಾಣ ಅಂಬೇಡ್ಕರ್ ಅವರ ಚಿಂತನೆಯಾಗಿತ್ತು. ಇದಕ್ಕಾಗಿಯೇ 1956ರಲ್ಲಿ ಅವರು 'ಪ್ರಬುದ್ಧ ಭಾರತ' ಎಂಬ ಪತ್ರಿಕೆಯನ್ನು ಆರಂಭಿಸಿ ಸಮಾನತೆಯ ಸಂದೇಶವನ್ನು ದೇಶದೆಲ್ಲೆಡೆ ಹರಡಲು ಯತ್ನಿಸಿದರು ಎಂದು ಹೇಳಿದರು.

ಶಿಕ್ಷಣ ಪಡೆಯಲು ತಾವು ಅನುಭವಿಸಿದ್ದ ಪಾಡು ಇತರರಿಗೆ ಬರದಿರಲಿ ಎಂಬ ಉದ್ದೇಶದಿಂದ ದಲಿತ ಮಕ್ಕಳ ಶಿಕ್ಷಣಕ್ಕಾಗಿ ಮುಂಬೈನಲ್ಲಿ ಸಿದ್ಧಾರ್ಥ ವಿಹಾರ ಎಂಬ ವಸತಿ ನಿಲಯವನ್ನು ಸ್ಥಾಪಿಸಿದರು. ಅಸ್ಪ್ರಶ್ಯತೆ ನಿವಾರಣೆಗೆ 1927ರಲ್ಲಿ ಮಹದ ಸತ್ಯಾಗ್ರಹ ಹಾಗೂ 1930ರಲ್ಲಿ ಕಲಾರಾಮ ಮಂದಿರ ಪ್ರವೇಶದಂತಹ ಚಳುವಳಿಗಳನ್ನು ನಡೆಸಿದರು ಎಂದು ಹೇಳಿದರು.

ಅಂಬೇಡ್ಕರ್ ಅವರು ಸೈದ್ಧಾಂತಿಕ ಪ್ರತಿರೋಧಿಯಾಗಿ ವರ್ಣಾಶ್ರಮವನ್ನು ವಿರೋಧಿಸಿದ್ದರು. ಮಾನವ ಜಾತಿರ್ಯೇ ಒಂದು ಜಗತ್ತು ಎಂಬ ತತ್ವದಡಿ ಬುದ್ಧಮಾರ್ಗವನ್ನು ಅನುಸರಿಸಿದರು ಎಂದು ಅಭಿಪ್ರಾಯಪಟ್ಟರು.

ಸಮ್ಮೇಳನದ ಅಧ್ಯಕ್ಷತೆ ವಹಿಸಿ ಮಾತನಾಡಿದ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು, ಸಮಾನತೆಯ ಹರಿಕಾರರಾದ ಅಂಬೇಡ್ಕರ್ ಅವರು ಯಾವುದೇ ಒಂದು ವರ್ಗಕ್ಕೆ ಸೀಮಿತವಾಗಿರಲಿಲ್ಲ. ಪ್ರಜಾಪ್ರಭುತ್ವದ ನೆಲೆಗಟ್ಟಿನಲ್ಲಿ ಗಂಡು-ಹೆಣ್ಣು ಎಂಬ ಭೇದವಿಲ್ಲದೆ ಶಿಕ್ಷಣ ಪಡೆಯಲು ಎಲ್ಲರೂ ಅರ್ಹರು ಎಂದು ಜಗತ್ತಿಗೆ ತೋರಿಸಿಕೊಟ್ಟವರು ಎಂದು ನೆನೆದರು. ರಾಜ್ಯ ಲೆಕ್ಕಪರಿಶೋಧನ ಮತ್ತು ಲೆಕ್ಕಪತ್ರ ಇಲಾಖೆಯ ನಿವೃತ್ತ ಹೆಚ್ಚುವರಿ ನಿರ್ದೇಶಕ ಶಿವರುದ್ರಪ್ಪ ವೇದಿಕೆಯಲ್ಲಿದ್ದರು. ವಿವಿಯ ಪ್ರಭಾರ ಕುಲಸಚಿವರಾದ ಪ್ರೊ.ತಿಪ್ಪೇರುದ್ರಪ್ಪ ಜೆ ಅತಿಥಿಗಳನ್ನು ಸ್ವಾಗತಿಸಿದರು. ಕುಲಸಚಿವರು (ಮೌಲ್ಯಮಾಪನ) ಪ್ರೊ.ಎನ್.ಎಂ ಸಾಲಿ ವಂದಿಸಿದರು.ಸಮ್ಮೇಳನದ ಸಂಚಾಲಕರಾದ ಪ್ರೊ.ಗೌರಿ ಮಾಣಿಕ್ ಮಾನಸ ಸಮ್ಮೇಳನದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಸುಷ್ಮಾ ಜೋಗನ್ ನಿರೂಪಿಸಿದರು. ದೇಶದ ವಿವಿಧ ರಾಜ್ಯಗಳಿಂದ 100ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದರು.ವಿಶ್ವವಿದ್ಯಾಲಯದ ವಿವಿಧ ನಿಕಾಯಗಳ ಡೀನರು, ಮುಖ್ಯಸ್ಥರುಗಳು, ಬೋಧಕ-ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು ಇದ್ದರು.

# ವಿಶೇಷ ಚೇತನ ಮಕ್ಕಳಿಗೆ ವೈದ್ಯಕೀಯ ಮೌಲ್ಯಂಕನ ಶಿಬಿರ

ವಿಜಯನಗರ(ಹೊಸಪೇಟೆ), 2025-26 ನೇ ಸಾಲಿನ ಂಐ-ಖಔಅಔ ಸಂಸ್ಥೆ ಸಹಯೋಗದಲ್ಲಿ ಹೊಸಪೇಟೆ ತಾಲೂಕಿನಲ್ಲಿ 1ರಿಂದ 12 ನೇ ತರಗತಿಯಲ್ಲಿ ಅಭ್ಯಾಸ ಮಾಡುತ್ತಿರುವ ವಿಶೇಷ ಚೇತನ ಮಕ್ಕಳ (ದೃಷ್ಟಿ ದೋಷ, ದೈಹಿಕ ನ್ಯೂನ್ಯತೆ, ಬೌದ್ಧಿಕ ವಿಕಲತೆ, ಸೆರಬ್ರಲ್ ಪಾಲ್ಸಿ, ಬಹುವಿದ ವಿಕಲತೆ, ಆಟಿಸಂ, ಹಾಗೂ ಶ್ರವಣದೋಷ) ವೈದ್ಯಕೀಯ ಮೌಲ್ಯಂಕನ ಶಿಬಿರವನ್ನು ಡಿ.23 ರಂದು ಬೆಳಿಗ್ಗೆ 10 ಗಂಟೆಗೆ ಕ್ಷೇತ್ರ ಸಮನ್ವಯಾಧಿಕಾರಿಗಳ (ಬಿಆರ್‌ಸಿ) ಕಚೇರಿಯಲ್ಲಿ ಗುರುಭವನ ಹಿಂದಗಡೆ, ಬಳ್ಳಾರಿ ರಸ್ತೆ ಹೊಸಪೇಟೆಯಲ್ಲಿ ವೈದ್ಯಕೀಯ ಮೌಲ್ಯಾಂಕನ ಶಿಬಿರವನ್ನು ಆಯೋಜಿಸಿದ್ದು, ತಾಲೂಕಿನಲ್ಲಿರುವ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜಿನಲ್ಲಿ ಅಭ್ಯಾಸ ಮಾಡುತ್ತಿರುವ ವಿಶೇಷ ಚೇತನ ಮಕ್ಕಳು ಶಿಬಿರದಲ್ಲಿ ಪಾಲ್ಗೊಂಡು ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಶೇಖರಪ್ಪ ಹೊರಪೇಟೆ ಅವರು ತಿಳಿಸಿದ್ದಾರೆ.

ಶಿಬಿರಕ್ಕೆ ಹಾಜರಾಗುವ ಮಕ್ಕಳ ದಾಖಲಾತಿ : ಫೋಟೋ, ಶಾಲಾ ದೃಢೀಕರಣ, ಯುಡಿಐಡಿ ಕಾರ್ಡ್, ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಾಲಕರ ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಬುಕ್ ತಪ್ಪದೇ ಶಿಬಿರಕ್ಕೆ ತರಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.9480695078, 9449409488, 7411832070 ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಹಬ್ಬ ಎಳ್ಳು ಅಮಾವಾಸ್ಯೆ ನಿಮಿತ್ಯ ಕೊಂಪೆ ಪೂಜೆ



**ಮಲ್ಲಮ್ಮ ನುಡಿ ವಾರ್ತೆ ಕಮಲನಗರ:** ಕಮಲನಗರ ತಾಲೂಕಿನ ರೈತರು ಎಳ್ಳ ಅಮಾವಾಸ್ಯೆ ಹಬ್ಬದ ನಿಮಿತ್ಯ ಶುಕ್ರವಾರ ಮುಂಜಾನೆ ಹೊಲದಲ್ಲಿ ಕೊಂಪೆ ಪೂಜೆ ಮಾಡಿ ಸಂಭ್ರಮ ಸಡಗರದಿಂದ ಆಚರಣೆ ಮಾಡಿದರು.

ಮುಂಜಾನೆ ಹೊಲಕ್ಕೆ ಊಟ ಮತ್ತು ಪೂಜೆ ಸಾಮಗ್ರಿಗಳನ್ನು ತೆಗೆದುಕೊಂಡು ಹೋಗಿ ಹೊಲದಲ್ಲಿ ಕೊಂಪೆ ಗುಡಿಸಲು ಮಾಡಿ ಅದರಲ್ಲಿ ಲಕ್ಷ್ಮಿದೇವಿ ಮತ್ತು ಭೂಮಿ ಪೂಜೆ ನೆರವೇರಿಸಿ ಹಬ್ಬಕ್ಕೆ ಚಾಲನೆ ನೀಡಿದರು.

ವರ್ಷವಿಡಿ ಬೆಳೆದ ಬೇಳೆಗೆ ವಿಶೇಷ ಪೂಜೆ ಮಾಡಿ ಭೂಮಿ ತಾಯಿಗೆ ಕೃತಜ್ಞಸಲ್ಲಿಸಿದರು. ಮೊದಲು ರೈತ ಪರಿವಾರದರು ಈ ದಿನ ಪರಿವಾರ ಸಮೇತ ಎತ್ತಿನ ಬಂಡಿಯಲ್ಲಿ ಹೋಗುತ್ತಿದರು. ಇತ್ತೀಚಿಗೆ ಕಾರು ಬೈಕ ಟೆಂಪೂ ಮೂಲಕ ದೂರದ ಹೊಲಗಳಿಗೆ ಹೋಗಿ ದಿನ ಪೂರ್ತಿ ಹೊಲದಲ್ಲಿ ಸಂಭ್ರಮದಿಂದ ಕಳೆದರು.

ಈ ಹಬ್ಬಕ್ಕೆ ಬಂದು ಬಳಗದವರು, ಸ್ನೇಹಿತರು ಹೀಗೆ ಎಲ್ಲರಿಗೆ ಪ್ರೀತಿಯಿಂದ ಬರಮಾಡಿಕೊಳ್ಳುವರು. ತಮ್ಮ ಹೊಲದಲ್ಲಿ ಒಣ ಕಳಕೆ ಯಿಂದ ಮಾಡಿದ ಗುಡಿಸಲು (ಕೊಂಪೆ) ಪೂಜೆಕ್ಕೆ ಸಾಕ್ಷಿಯಾಗುವರು. ಎಳ್ಳ ಅಮಾವಾಸ್ಯೆ ಹಬ್ಬಕ್ಕೆ ಮಾಡಿದ ವಿಶೇಷ ಊಟವಾದ ಭಜ್ಜಿ, ರೊಟ್ಟಿ, ಹುಗ್ಗಿ,ಹಾಲು, ಜೋಳಅನ್ನ, ಅಮಲು ಭರಿಸುವ ಅಮಲಿ, ಕಾಣೋಲಿ, ಚಿತ್ರಾನ್ನ, ಹೀಗೆ ಬಗ್ಗೆ ಬಗ್ಗೆಯ ಅಡುಗೆಯನ್ನು ಸವಿದರು.

ನಂತರ ಮಕ್ಕಳು, ಯುವಕರು, ಹಿರಿಯರು ಎಲ್ಲರೂ ಜೋಕಾಲಿ ಆಡುವರು ಮಕ್ಕಳು ಗಾಳಿಪಟವನ್ನು ಬಾನೆತ್ತರಕ್ಕೆ ಹಾರಿಸಿ ಹರ್ಷಿಸುವರು. ಸಂಜೆ ಮತ್ತೆ ಕೊಂಪೆ ಪೂಜೆ ಮಾಡಿ ಹಬ್ಬಕ್ಕೆ ಶುಭ ಮಂಗಲ ಮಾಡಿ ಕಾವ್... ಕಾವ... ಎಂದು ಹಾಡು ಹೇಳುತ್ತಾ ಸಂಭ್ರಮದಿಂದ ಮನೆ ಕಡೆ ಹೋಗುವರು.

ಸಂಜೆ ಹನುಮಾನ್ ದೇವಾಲಯದ ಹತ್ತಿರ ಅಗ್ನಿ ಸುಡುವರು. ಎಲ್ಲರೂ ಒಣ ಕಳಿಕೆ ಸುಡುಗಳನ್ನು ತಂದು ಊರಿನ ಹನುಮಾನ ಹತ್ತಿರ ಸುಡುವರು. ನಂತರ ಕೆಂಡದ ಬುದಿಯನ್ನು ಹಣೆಗೆ ಹಚ್ಚಿಕೊಂಡಿ ಅಗ್ನಿ ತುಳಿಯುವರು.

ಹೀಗೆ ತಾಲೂಕಿನ ಕಮಲನಗರ, ಡಿಗ್ಗಿ, ತೋರಣ, ಡೋಣಗಾಂವ, ಸೋನಾಳ, ಹೊಳಸಮುದ್ರ, ಖೇಡ, ಬಾಲೂರ, ರಾಂಪುರ, ದಾಬಕಾ, ಚಿಮ್ಮಗಾಂವ, ಠಾಣಾ ಕುಶನೂರ ಸೇರಿದಂತೆ ಎಲ್ಲಾ ಹಳ್ಳಿಗಳಲ್ಲಿ ಎಳ್ಳ ಅಮಾವಾಸ್ಯೆ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಣೆ ಮಾಡಿದರು.

ತಾಲೂಕಿನ ಡಿಗ್ಗಿ ಗ್ರಾಮದ ಶಿವರಾಜ ರಾಂಪುರೆ ಅವರ ಹೊಲದಲ್ಲಿ ನಡೆದ ಪರಿವಾರ ಸಮೇತ ಕೊಂಪೆ ಪೂಜೆ ಮಾಡಿದರು, ಈ ಸಂದರ್ಭದಲ್ಲಿ ಶಿವರಾಜ ರಾಂಪುರೆ ಧನರಾಜ ರಾಂಪುರೆ, ಯುವರಾಜ ರಾಂಪುರೆ, ಶಂಭೋಲಿಂಗ ಚಾಂಡೇಶ್ವರೆ, ಪ್ರಶಾಂತ, ಪವನ, ಪಂಕಜ, ಮಹೇಶ, ವಿಶಾಲ, ಲಕ್ಷ್ಮಿಬಾಯಿ, ಪದ್ಮಾವತಿ, ಸವಿತಾ, ಮಹಾನಂದ, ರೇಣುಕಾ, ಉಷಾ, ಅವಂತಿಕಾ ಸೇರಿದಂತೆ ಹಲವರು ಇದ್ದರು.

# ಬಲ್ಡೋಟಾ ಕಾರ್ಖಾನೆ ಸ್ಥಾಪಿಸಿ ಇಲ್ಲವೆ ಸರ್ಕಾರಿ ನೌಕರಿ ಕೊಡಿ: ರೈತರ ಆಗ್ರಹ



**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :** ಬಿ ಎಸ್ ಪಿಎಲ್ ಕಂಪನಿ ಸ್ಥಾಪಿಸಿ ಇಲ್ಲವೇ ಸರಕಾರಿ ನೌಕರಿ ಕೊಡಿ ಎಂದು 2006-07ರಲ್ಲಿ ಸರ್ಕಾರಕ್ಕೆ ಭೂಮಿ ಕಳೆದುಕೊಂಡ ರೈತರಿಂದ ಅರೆಬೆತ್ತಲೆ ಪ್ರತಿಭಟನೆಯನ್ನು ಹಮ್ಮಿಕೊಂಡು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಮ್ಮ ಪಿತ್ರಾರ್ಜಿತ ಜಮೀನನ್ನ ಸರ್ಕಾರ ಏಕಾಏಕಿಯಾಗಿ ದೌರ್ಜನ್ಯ ಮಾಡಿ ಒತ್ತಾಯ ಮಾಡಿ ಬಲತ್ಕಾರದಿಂದ ಅಂದಿನ ಜಿಲ್ಲಾಧಿಕಾರಿಗಳ ಮುಖಾಂತರ ಯಾವುದೇ ನೋಟಿಸ್ ನೀಡದೆ ನಮ್ಮ ರೈತರ ಮಾಲೀಕತ್ವವನ್ನು ಕಿತ್ತುಕೊಂಡು ಬಿಎಸ್ಪಿಎಲ್ ಕಂಪನಿಗೆ ಕಾರ್ಖಾನೆ ಸ್ಥಾಪಿಸಲು ಅಗ್ರಿಮೆಂಟ್ ಮಾಡಿ ಕೊಟ್ಟಿದ್ದೀರಿ 20 ವರ್ಷವಾಯಿತು ಕಾರ್ಖಾನೆ ಸ್ಥಾಪನೆಯಾಗಿಲ್ಲ ಕೋರ್ಟ್ ವ

ವ್ಯಾಜ್ಯ 2023ವರೆಗೆ ಇತ್ತು. ನಂತರ ಕಾರ್ಖಾನೆ ಸ್ಥಾಪಿಸಲು ಸುಪ್ರೀಂಕೋರ್ಟ್ ಆದೇಶ ಮಾಡಿತು. ಇವಾಗ ಕಾರ್ಖಾನೆ ಸ್ಥಾಪನೆ ಆಗಬೇಕಿತ್ತು ಆದರೆ ಮುಖ್ಯಮಂತ್ರಿಗಳವರ ಮೌಖಿಕ ಆದೇಶದ ನೆಪ ಹೇಳಿ ಕಾರ್ಖಾನೆ ಸ್ಥಾಪನೆ ಚಟುವಟಿಕೆ ನಿಂತಿದೆ ಕಾರ್ಖಾನೆ ಸ್ಥಾಪನೆಯಾದರೆ ಭೂಮಿ ಕಳೆದುಕೊಂಡ ನಿರಾಶ್ರಿತ ರೈತರ ಮಕ್ಕಳಿಗೆ ಕೊಪ್ಪಳ ಜಿಲ್ಲೆಯ 20 ಸಾವಿರ ನಿರುದ್ಯೋಗಿಗಳಿಗೆ ಕೆಲಸ ಸಿಗುತ್ತದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಹನುಮಂತಪ್ಪ ಕೌದಿ ಹನುಮೇಶ್ ಹಾಲವರ್ತಿ, ಪ್ರಾಣೇಶ್ ಹಾಲವರ್ತಿ, ಮನೋಜ್ ಹಾಲವರ್ತಿ, ಸ್ವಾಮಿ ಹಾಲವರ್ತಿ ,ದುರುಗಪ್ಪ ಬಾವಿಮನಿ ಈರಪ್ಪ ಓಜನಹಳ್ಳಿ, ಬಸವರಾಜ ಹೊಸಮನಿ, ಕೆಮಪ್ಪ ಇಟಗಿ, ಕಾಮಣ್ಣ ಕಂಬಳಿ,, ಗೋಣಿಬಸಪ್ಪ ಬಡಿಗೇರ್, ಮುಂತಾದ ರೈತರು ಮತ್ತು ರೈತರು ಮಕ್ಕಳು ಇದ್ದರು.




ಬಳ್ಳಾರಿ .5 ಸಂಘಟನೆಗಳ (ಬ್ಯಾಂಕಿಂಗ್ ಮತ್ತು ವಿಮಾ ಕ್ಷೇತ್ರದ) ಉದ್ಯೋಗಿಗಳು ಕೇಂದ್ರ ಸರ್ಕಾರದ ವಿಮಾ ಕ್ಷೇತ್ರದಲ್ಲಿ 100% ವಿದೇಶಿ ನೇರ ಬಂಡವಾಳದ ನಿರ್ಧಾರದ ವಿರುದ್ಧ ದೊಡ್ಡ ಮತ ಪ್ರದರ್ಶನವನ್ನು ಅಖಿಲ ಭಾರತ ಕರೆಯ ಮೇರೆಗೆ ಬಳ್ಳಾರಿ ನಗರದಲ್ಲಿ ಎಲ್. ಐ.ಸಿ ಶಾಖೆ 2 ರ ಮುಂದೆ ಒಗ್ಗಟ್ಟಾಗಿ ಪ್ರದರ್ಶಿಸಿದೆವು. ವಿದೇಶಿ ನೇರ ಬಂಡವಾಳವು ದೇಶದ ಸಾರ್ವಭೌಮತ್ವಕ್ಕೆ ದಕ್ಕೆ ತರುವುದಲ್ಲದೆ ಜನರ ಸಣ್ಣ ಉಳಿತಾಯವು ವಿದೇಶಿಗರ ಪಾಲಾಗುವುದು. ಇಂದಿನ ಮತ ಪ್ರದರ್ಶನದಲ್ಲಿ **(AIIEA, AIBEA, BEFI, AIBOC, NCBE, Pensioners, Class 1 officers in LIC )** ಯ ಎಲ್ಲಾ ಸದಸ್ಯರು ಸಕ್ರಿಯವಾಗಿ ಪಾಲೊಂಡಿದ್ದರು. ಕೊನೆಯಲ್ಲಿ ಮೊಬೈಲ್ ಟಾರ್ಚ್ ನ್ನು ಬೆಳಗಿಸುವುದರ ಮೂಲಕ ವಿರೋಧವನ್ನು ವ್ಯಕ್ತಪಡಿದ್ದಾರೆ.

# ವಾಲ್ಮೀಕಿ ಭವನ ಕಳಪೆ ಕ್ರಮಕ್ಕೆ ಮನವಿ



**ಮಲ್ಲಮ್ಮ ನುಡಿ ವಾರ್ತೆ ಮುದಗಲ್ :** ಪಟ್ಟಣ ಸಮೀಪದ ಹೂನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ವಂದಾಲಿ ಗ್ರಾಮದ ವಾಲ್ಮೀಕಿ ಸಮುದಾಯ ಭವನ ಕಳಪೆಯಾಗಿದೆ ಈ ಗುತ್ತಿಗೆದಾರನ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ಲಿಂಗಸುಗೂರು ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದಾರೆ

2019-20ನೇ ಸಾಲಿನ ಕೆ.ಬಿ.ಜೆ.ಎನ್.ಎಲ್ ಯೋಜನೆ ಅಡಿಯಲ್ಲಿ ರೂ: 25.00 ಲಕ್ಷರೂಗಳ ಮೊತ್ತದಲ್ಲಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಮಾಡಿದ್ದಾರೆ ವಾಲ್ಮೀಕಿ ಸಮುದಾಯ ಭವನ ಕಳಪೆ ಕಾಮಗಾರಿಯಾಗಿ ಬಿರುಕು ಬಿಟ್ಟಿದೆ. ವಿದ್ಯುತ್‌ಚ್ಛಕ್ತಿ ಸಂಪರ್ಕ ಇರುವದಿಲ್ಲ. ನೆಲ ಹಾಸುಬಂಡೆ ಮತ್ತು ಮುಖ್ಯ ದ್ವಾರ ಇರುವದಿಲ್ಲ. ಇದರಿಂದ ಸಾರ್ವಜನಿಕರಿಗೆ ಸಂಪೂರ್ಣ ತೊಂದರೆಯಾಗಿರುತ್ತದೆ. ರೂ: 25.00 ಲಕ್ಷದಲ್ಲಿ ಕಟ್ಟಡ ನಿರ್ಮಾಣ ಮಾಡಿದರೂ ಸಾರ್ವಜನಿಕರಿಗೆ ಉಪಯೋಗವಾಗಿರುವದಿಲ್ಲ ರೋಡಲಬಂಡಾ ಗ್ರಾಮದ ಕಛೇರಿಗೆ ಹೋಗಿ ಕೇಳಿದರೆ ನಮಗೆ ಸಂಬಂಧಪಟ್ಟಿರುವದಿಲ್ಲವೆಂದು ಕೆ.ಬಿ.ಜೆ.ಎನ್.ಎಲ್. ಅಧಿಕಾರಿಗಳು ನಮಗೆ ಸಂಬಂಧಪಟ್ಟಿರುವದಿಲ್ಲವೆಂದು ಉತ್ತರ ಕೊಡುತ್ತಾರೆ. ಅಧಿಕಾರಿಗಳಿಗೆ ಫೋನ್ ಮಾಡಿದರೆ ರಾಂಗ್ ನಂಬರ ಎಂದು ಉತ್ತರ ಕೊಡುತ್ತಾರೆ.ಈ ಕೂಡಲೆ ಸಂಬಂಧಪಟ್ಟ ಅಧಿಕಾರಿಗಳ ಹಾಗೂ ಗುತ್ತಿಗೆದಾರನ ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ಮನವಿ ಪತ್ರ ಸಲ್ಲಿಸಿದ್ದಾರೆ

ಈ ಸಂದರ್ಭದಲ್ಲಿ ಯಮನೂರ ಯಲಬುರ್ತಿ, ಶಿವಪ್ಪ ಮುದ್ದಲಗುದ್ದಿ, ಬಾಳಪ್ಪ, ಪ್ಯಾಟಿಹಾಳ, ಬಸವರಾಜ, ಸುಮಿತ್ರಪ್ಪ, ಸೋಮನಗೌಡ ಪಾಟೀಲ್ ಸೇರಿದಂತೆ ವಂದಾಲಿ ಗ್ರಾಮಸ್ಥರು ಇದ್ದರು

## ಜಿಲ್ಲಾ ಟಾಸ್ಕ್ ಫೋರ್ಸ್ ಸಭೆಯಲ್ಲಿ ಡಿಸಿ ನಾಗೇಂದ್ರ ಪ್ರಸಾದ್.ಕೆ ಹೇಳಿಕೆ

# ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ಪ್ರಾರಂಭ: ಕ್ವಿಂಟಾಲ್‌ಗೆ ರೂ.8 ಸಾವಿರ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:** ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್. ಕೆ ಅವರು ಹೇಳಿದರು.

ಕೇಂದ್ರಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಪ್ರಸ್ತಕ ಸಾಲಿಗೆ ಮುಂಗಾರು ಹಂಗಾಮಿನ ತೊಗರಿ ಉತ್ಪನ್ನ ಖರೀದಿಸುವ ಕುರಿತು ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ 2025-26ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿ ಖರೀದಿಗೆ ರಾಜ್ಯ ಸರ್ಕಾರ ಆದೇಶಿಸಿರುವುದರಿಂದ ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ತೊಗರಿ ಖರೀದಿಸಲಾಗುವುದು ಎಂದರು.

ಪ್ರತಿ ಕ್ವಿಂಟಾಲ್ ಗೆ ರೂ.8 ಸಾವಿರದಂತೆ ಪ್ರತಿ ಎಕರೆಗೆ 4 ಕ್ವಿಂಟಾಲ್ ನಂತೆ ಫ್ರೂಟ್ಸ್ ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ತೊಗರಿ ಬೆಳೆದ ವಿಸ್ತೀರ್ಣಕ್ಕೆ ಅನುಗುಣವಾಗಿ ತೊಗರಿ ಖರೀದಿಸಲಾಗುತ್ತದೆ. ಬೆಂಬಲ ಯೋಜನೆಯಡಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಿ, ಫ್ರೂಟ್ಸ್ ತಂತ್ರಾಂಶದ ಆಧಾರದ ಮೇಲೆ



ರೈತರಿಂದ ಖರೀದಿಸಬೇಕು ಎಂದು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನೋಂದಣಿ ಕಾರ್ಯ 80 ದಿನಗಳ ವರೆಗೆ ನಡೆಯಲಿದ್ದು, ಖರೀದಿ ಪ್ರಕ್ರಿಯೆ 90 ದಿನಗಳವರೆಗೆ ನಡೆಯಲಿದೆ. ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಗೋದಾಮುಗಳನ್ನು ಶುದ್ಧವಾಗಿಟ್ಟುಕೊಳ್ಳಬೇಕು. ಮೂಲಭೂತ ಸೌಕರ್ಯವುಳ್ಳ ಖರೀದಿ ಕೇಂದ್ರಗಳ ಸ್ಥಾಪನೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು ತೂಕ ಪ್ರಮಾಣೀಕತೆ ಸೇರಿದಂತೆ ಬೇಕಾದ ಎಲ್ಲ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ರೈತರು ಖರೀದಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸುವಾಗ ಆಧಾರ್ ಕಾರ್ಡ್, ಪಹಣಿ ಪತ್ರಿಕೆ, ಆಧಾರ್ ಲಿಂಕ್ ಆಗಿರುವ ರಾಷ್ಟ್ರೀಕೃತ ಬ್ಯಾಂಕಿನ ಪಾಸ್‌ಬುಕ್ ಜೆರಾಕ್ಸ್ ಪ್ರತಿ ಸಲ್ಲಿಸಬೇಕು. ಖರೀದಿ ಕೇಂದ್ರಗಳಲ್ಲಿ ಪಿ.ಓ.ಎಸ್. ಯಂತ್ರದ ಮೂಲಕ ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯಲ್ಲಿ ಆಧಾರ್ ಬಯೋ ಮೆಟ್ರಿಕ್ ಪಡೆಯುವುದು ಕಡ್ಡಾಯವಾಗಿದ್ದು, ರೈತರು ಇದಕ್ಕೆ ಸಹಕರಿಸಬೇಕು ಎಂದರು.

ಅದೇರೀತಿಯಾಗಿ ರೈತರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳುವ ಕುರಿತು ಸಹ ಅಗತ್ಯ ಮಾಹಿತಿ ರೈತರಿಗೆ ಒದಗಿಸುವಂತೆಯೂ ಸೂಚಿಸಿದರು.

ರೈತರ ಹೆಸರಿನ ಆಧಾರ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಮಾತ್ರ ಡಿಬಿಟಿ ಮೂಲಕ ಹಣ ಜಮೆ ಆಗಲಿದ್ದು, ರೈತರು ಕಡ್ಡಾಯವಾಗಿ ಎಫ್‌ಐಡಿ ಮತ್ತು ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಕೊಳ್ಳುವಂತೆ ತಿಳಿಸಬೇಕು ಎಂದರು.

ಸಭೆಯಲ್ಲಿ ಕೃಷಿ ಮಾರಾಟ ಇಲಾಖೆಯ ಉಪನಿರ್ದೇಶಕ ಓಂಕಾರಯ್ಯ, ಕೃಷಿ ಜಂಟಿ ನಿರ್ದೇಶಕ ಸೋಮಸುಂದರ್, ಸಹಕಾರ ಇಲಾಖೆಯ ಉಪನಿಬಂಧಕ

ವೀರಭದ್ರಯ್ಯ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ನಿರೀಕ್ಷಕ ಮನೋಜ್ ಕುಮಾರ್ ಸೇರಿದಂತೆ ಖರೀದಿ ಏಜೆನ್ಸಿಗಳ ಅಧಿಕಾರಿಗಳು ಇದ್ದರು.

# ಐತಿಹಾಸಿಕ ಸ್ಮಾರಕಗಳು ಮುಂದಿನ ಪೀಳಿಗೆಗೆ ಉಳಿಯಲಿ: ಸಂಗಪ್ಪ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಜಿಲ್ಲೆಯ ಬಾದಾಮಿ, ಐಹೊಳೆಯಲ್ಲಿರುವ ಪಾರಂಪರಿಕ ಸ್ಮಾರಕಗಳನ್ನು ನಮ್ಮ ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಆಯುಕ್ತರು ಹಾಗೂ ಬಾಗಲಕೋಟೆ ಉಪವಿಭಾಗಾಧಿಕಾರಿಗಳು ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರಕಾರದ ನಿರ್ದೇಶನದ ಮೇರೆಗೆ ಈಗಾಗಲೇ ಸರ್ವೇ ಕಾರ್ಯ ಮಾಡಿರುವಂತೆ ಬಾದಾಮಿ ಅಗಸ್ತ್ಯತೀರ್ಥ ಹೊಂಡದ ಮೇಲಿರುವ ಒಟ್ಟು 96 ಮನೆಗಳು ಹಾಗೂ ಐಹೊಳೆ ಗ್ರಾಮದಲ್ಲಿರುವ ರಕ್ಷಿತ, ಅರಕ್ಷಿತ ಸ್ಮಾರಕಗಳಲ್ಲಿ ವಾಸವಾಗಿರುವ ಕುಟುಂಬಗಳ 134 ಮನೆಗಳನ್ನು ಸ್ಥಳಾಂತರಿಸಲು ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಆಯುಕ್ತರು ಹಾಗೂ ಬಾಗಲಕೋಟೆ ಉಪವಿಭಾಗಾಧಿಕಾರಿಗಳು ಶೀಘ್ರದಲ್ಲಿ ಅಲ್ಲಿಯ ಶಾಸಕರ ಸಮ್ಮುಖದಲ್ಲಿ ಸಭೆ ನಡೆಸಿ ಆ ಕುಟುಂಬಗಳಿಗೆ ಮನವೊಲಿಸಿ ಕಾನೂನು ಪ್ರಕಾರ ತೆರವುಗೊಳಿಸುವ ಮೂಲಕ ಸ್ಮಾರಕಗಳ ಸಂರಕ್ಷಣೆಗೆ ಕ್ರಮಕೈಗೊಳ್ಳಬೇಕು ಎಂದರು.

ಐಹೊಳೆ ಗ್ರಾಮದದಲ್ಲಿರುವ ರ್ಷಕಿತ ಹಾಗೂ ಅರಕ್ಷಿತ ಸ್ಮಾರಕಗಳಲ್ಲಿ ವಾಸವಾಗಿರುವ ಕುಟುಂಬಗಳ ಸ್ಥಳಾಂತರಕ್ಕೆ ಜಮೀನು ಖರೀದಿಸಲು ಪ್ರವಾಸೋದ್ಯಮ ಇಲಾಖೆಯಿಂದ ಈಗಾಗಲೇ 350 ಲಕ್ಷ ಬಿಡುಗಡೆ–ಯಾಗಿದ್ದು, 134 ಮನೆಗಳ ಸ್ಥಳಾಂತರಕ್ಕೆ ಐಹೊಳೆ ಗ್ರಾಮ ವ್ಯಾಪ್ತಿಯಲ್ಲಿ ಒಟ್ಟು 13ಎಕರೆ 11 ಗುಂಟೆ ಜಮೀನನ್ನು ಪ್ರತಿ ಎಕರೆಗೆ 22 ಲಕ್ಷಗಳಂತೆ ನೇರ ಖರೀದಿಯಾಗಿರುತ್ತದೆ. ಖರೀದಿಯಾಗಿರುವ ಈ ಜಮೀನಿಗೆ ತಂತಿಬೇಲಿ, ನಾಮಫಲಕ ಅಳವಡಿಸಲು ಬಾಗಲಕೋಟ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರು ಅಂದಾಜು ಪಟ್ಟಿ ಸಲ್ಲಿಸಿರುತ್ತಾರೆ. ಅದೇ ರೀತಿ ಬಾದಾಮಿ ಗುಹಾಂತರ ದೇವಾಲಯದ ಬಳಿಯ ಅಗಸ್ತ್ಯತೀರ್ಥ ಹೊಂಡದ ಮೇಲಿರುವ ಮನೆಗಳ ಸ್ಥಳಾಂತರ ಕಾರ್ಯಕ್ಕಾಗಿ ಪ್ರವಾಸೋದ್ಯಮ ಇಲಾಖೆ 150 ಲಕ್ಷ ರೂ.ಗಳ ಅಂದಾಜು ಮೊತ್ತದಲ್ಲಿ ಬಾದಾಮಿ ನಗರದ ಸರ್ವೆ ನಂ 245/2 ರಲ್ಲಿ 3 ಎಕರೆ ಜಮೀನನ್ನು ಖರೀದಿಸಿ, ನಿರ್ಮಿತಿ ಕೇಂದ್ರದ ಮೂಲಕ ಅಂದಾಜು 120 ಲಕ್ಷಗಳ ವೆಚ್ಚದಲ್ಲಿ ಲೇಔಟ್ ಅಭಿವೃದ್ಧಿಪಡಿಸಿದ್ದು, ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಶೀಘ್ರದಲ್ಲಿಯೇ ಪುನರ್ವಸತಿ ಕಲ್ಪಿಸುವ ಕಾರ್ಯವನ್ನು ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಬಾದಾಮಿ, ಪಟ್ಟದಕಲ್ಲು ಹಾಗೂ ಐಹೊಳೆಯಲ್ಲಿರುವ ಪಾರಂಪಾರಿಕ ಸ್ಮಾರಕಗಳ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಹೊಸ ಕಟ್ಟಡಗಳಿಗೆ ಅಧಿಕಾರಿಗಳು ಅನುಮತಿಯನ್ನು ನೀಡಬಾರದು. ಸ್ಮಾರಕಗಳ ಹತ್ತಿರ ನೋ ಕನ್‌ಸ್ಟ್ರಕ್ಷನ ಜೋನ್ ಅಂತ ಮಾಡಿಕೊಂಡು ಎಲ್ಲ ಕಾರ್ಯಗಳನ್ನು ತ್ವರಿತ ರೀತಿಯಲ್ಲಿ ಆಗುವಂತೆ ನೋಡಿಕೊಳ್ಳಬೇಕು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬಾಗಲಕೋಟ ಉಪವಿಬಾಗಾಧಿಕಾರಿ ಸಂತೋಷ ಜಗಲಾಸರ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಪುರಾತತ್ವ ಅಧೀಕ್ಷಕ ರಮೇಶ ಮೂಲಿಮನಿ ಸೇರಿದಂತೆ ಇತರರು ಇದ್ದರು.

# ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನಲ್ಲಿ ಪೋಕ್ಸೊ ಕಾರ್ಯಾಗಾರ

## ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಶಿಕ್ಷಾರ್ಹ: ಡಾ.ಸುರೇಶ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟಲು ರೂಪುಗೊಂಡ ಕಾನೂನುಗಳ ಅರಿವನ್ನು ಸಾರ್ವಜನಿಕರಲ್ಲಿ ಮೂಡಿಸಬೇಕು. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಶಿಕ್ಷಾರ್ಹವಾದ ಅಪರಾಧವಾಗಿದೆ ಎಂದು ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆಯ ಮನೋವೈದ್ಯ ಡಾ.ಸುರೇಶ ಬಡಾಮಠ ಅಭಿಪ್ರಾಯಪಟ್ಟರು.

ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಮನೋವೈದ್ಯಕೀಯ ವಿಭಾಗದ ವತಿಯಿಂದ ಆಯೋಜಿಸಿದ್ದ ಕಾನೂನಿನಿಂದ ಕಾರ್ಯ ಪ್ರಯೋಗದವರೆಗೆ ಮಕ್ಕಳ ರಕ್ಷಣೆಯಲ್ಲಿ ವೈದ್ಯರ ಜವಾಬ್ದಾರಿ ಕಾರ್ಯಾಗಾರದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಕುರಿತು ವೈದ್ಯರು ತಜ್ಞ ಅಭಿಪ್ರಾಯದ ವರದಿ ರಚಿಸುವ ಅಗತ್ಯವಿದೆ. ವರದಿ ರಚನೆಯಲ್ಲಿ ವೈದ್ಯಕೀಯ ನಿರ್ಲಕ್ಷ್ಯ ಕಂಡುಬಂದರೆ ಅಪರಾಧಿಗಳು ಕಾನೂನಿನಿಂದ ತಪ್ಪಿಸಿಕೊಳ್ಳುವ ಅಪಾಯವಿದೆ ಎಂದು ಹೇಳಿದರು.

ಇದೇ ಸಂದರ್ಭ ನಿಮ್ಹಾನ್ಸ್ ಸಂಸ್ಥೆಯ ಇನ್ನಿಬ್ಬರು ಮನೋವೈದ್ಯರಾದ ಡಾ.ಸಿ.ನವೀನ ಕುಮಾರ ಮತ್ತು ಡಾ.ಎನ್.ಮಂಜುನಾಥ ಪೋಕ್ಸೊ ಕಾಯ್ದೆ–2012 ರ ಕುರಿತು ಹಾಗೂ ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಮನಸ್ಸಿನ ಮೇಲಾಗುವ ಪರಿಣಾಮಗಳ ಬಗ್ಗೆ ಉಪನ್ಯಾಸ ನೀಡಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ಪೋಕ್ಸೊ ಕಾಯ್ದೆಯ ಅರಿವಿನ ಮಹತ್ವವನ್ನು ಹೆಚ್ಚಿಸುವ ಅಗತ್ಯವಿದೆ. ಈ ಕಾಯ್ದೆ ಪರಿಣಾಮಕಾರಿಯಾಗಿ ಜಾರಿಗೆ ಬರುವಲ್ಲಿ ವೈದ್ಯರ ಪಾತ್ರ ಗಮನಾರ್ಹವಾಗಿದೆ ಎಂದು ಹೇಳಿದರು.

ಮನೋವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ನಾರಾಯಣ ಮುತಾಲಿಕ್ ಸ್ವಾಗತಿಸಿ ಪೋಕ್ಸೊ ಕಾಯ್ದೆ ಕುರಿತು ವೈದ್ಯರಲ್ಲಿ ಹೆಚ್ಚಿನ ಅರಿವು ಮೂಡಿಸಲು ಈ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದರು. ಡಾ.ಸುಷ್ಮಾ ಇನಾಮದಾರ್ ವಂದಿಸಿದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಸ್ತ್ರೀರೋಗ ವಿಭಾಗದ ಮುಖ್ಯಸ್ಥೆ ಡಾ.ಆಶಾಲತಾ ಮಲ್ಲಾಪೂರ, ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ, ಮನೋವೈದ್ಯಕೀಯ ವಿಭಾಗದ ವೈದ್ಯರು ಮತ್ತು ಸಿಬ್ಬಂದಿ, ವಿವಿಧ ವಿಭಾಗಗಳ ಮುಖ್ಯಸ್ಥರು, ವೈದ್ಯರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಡಾ.ಲಲಿತಾ ಹೊಸಪ್ಯಾಟಿ ಅವರಿಗೆ ಸತ್ಕಾರ



ಮಲ್ಲಮ್ಮ ನುಡಿ ಬಾಗಲಕೋಟೆ,19–ಜಿಲ್ಲೆಯ ಹುನಗುಂದ ನಗರದ ಹಿರಿಯ ಲೇಖಕಿ ಡಾ.ಲಲಿತಾ ಹೊಸಪ್ಯಾಟಿ ಅವರಿಗೆ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಗೌರವ ಪ್ರಶಸ್ತಿ ಬಂದಿರುವುದಕ್ಕಾಗಿ ಹುನಗುಂದ ಲೇಖಕ–ಲೇಖಕಿಯರ ಬಳಗದಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಲೇಖಕರಾದ ಎಸ್.ಕೆ.ಕೊನೆಸಾಗರ, ಸಿದ್ದಲಿಂಗಪ್ಪ ಬೀಳಗಿ, ವ್ಯಾಸತೀರ್ಥ ಜೋಶಿ, ಡಾ.ಮುರ್ತುಜಾ ಒಂಟಿ, ಶರಣಪ್ಪ ಹೂಲಗೇರಿ, ವೀರಭದ್ರಯ್ಯ ಶಶಿಮಠ, ದಾನೇಶ್ವರಿ ಸಾರಂಗಮಠ, ಡಾ.ಶಿವಗಂಗಾ ರಂಜಣಗಿ, ಆಯ್.ಎಚ್.ನಾಯಿಕ, ಶಿವಬಸವ ಅಂಗಡಿ ಮತ್ತು ವಿಜಯಕುಮಾರ ಕುಲಕರ್ಣಿ ಇದ್ದರು.

# ನ್ಯಾಯಬೆಲೆ ಅಂಗಡಿಗಳಲ್ಲಿ ಥರ್ಮಲ್ ಪ್ರಿಂಟರ್ ಕಡ್ಡಾಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,19–ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಹತ್ವದ ಕ್ರಮಕೈಗೊಂಡಿರುವ ಬಾಗಲಕೋಟೆ ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಪಡಿತರ ಅಕ್ಕಿಯನ್ನು ಮಾರಾಟ ಮಾಡುವುದಿಲ್ಲ ಎಂದು ಪಡಿತರ ಚೀಟಿದಾರರಿಂದ ಲಿಖಿತ ಮುಚ್ಚಳಿಕೆ ಪತ್ರ ಪಡೆಯುವಂತೆ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ನಡೆದ ಬಾಗಲಕೋಟೆ ತಾಲೂಕಿನ ನ್ಯಾಯಬೆಲೆ ಅಂಗಡಿ–ಕಾರರ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಸಾರ್ವಜನಿಕ ವಿತರಣಾ ವ್ಯವಸ್ಥೆಯ ಅಕ್ಕಿ ದುರ್ಬಳಕೆಯಾಗಬಾರದು. ಈ ಹಿನ್ನೆಲೆಯಲ್ಲಿ ಪ್ರತಿಯೊಂದು ನ್ಯಾಯಬೆಲೆ ಅಂಗಡಿ ವ್ಯಾಪ್ತಿಯಲ್ಲಿ ಪಡಿತರ ಚೀಟಿದಾರರಿಂದ ಅವರ ಕಾರ್ಡ್ ಸಂಖ್ಯೆ ಮತ್ತು ಸಹಿಯೊಂದಿಗೆ ಮುಚ್ಚಳಿಕೆ ಬರೆಸಿಕೊಳ್ಳಬೇಕು. ಅಲ್ಲದೆ ಯಾರಾದರೂ ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ ಮಾಡುತ್ತಿರುವುದು ಕಂಡುಬಂದರೆ ಆ ಮಾಹಿತಿಯನ್ನು ತಕ್ಷಣವೇ ಸಂಬಂಧಿಸಿದ ಮೇಲಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ಅವರು ತಾಕೀತು ಮಾಡಿದರು.

ಪಡಿತರ ಹಂಚಿಕೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಇದೇ ತಿಂಗಳಿನಿಂದ ತಾಲೂಕಿನ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಕಡ್ಡಾಯವಾಗಿ 'ಥರ್ಮಲ್ ಪ್ರಿಂಟರ್' ಅಳವಡಿಸಿಕೊಳ್ಳಬೇಕು. ಪ್ರತಿಯೊಬ್ಬ ಗ್ರಾಹಕರಿಗೂ ಕಡ್ಡಾಯವಾಗಿ ರಸೀದಿ (ಬಿಲ್) ನೀಡಲೇಬೇಕು ಎಂದು ಆದೇಶಿಸಿದರು. ಆಹಾರ ಧಾನ್ಯ ಎತ್ತುವಳಿ ಮತ್ತು ಸರಬರಾಜಿನಲ್ಲಿ ವಿಳಂಬವಾದರೆ, ಅದಕ್ಕೆ ಸಂಬಂಧಿಸಿದ ಸಗಟು ಗೋದಾಮಿನ ವ್ಯವಸ್ಥಾಪಕರಿಂದ ವಿಳಂಬಕ್ಕೆ ಕಾರಣವೇನೆಂದು ಲಿಖಿತ ಹೇಳಿಕೆ ಪಡೆಯುವಂತೆ ಆಹಾರ ಇಲಾಖೆಯ ಸಿಬ್ಬಂದಿಗೆ ಸಭೆಯಲ್ಲಿ ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ತಹಸಿಲ್ದಾರ್ ಹಾಗೂ ಆಹಾರ ಶಿರಸ್ತೇದಾರರು, ಆಹಾರ ನಿರೀಕ್ಷಕರು ಹಾಗೂ ತಾಲೂಕಿನ ನ್ಯಾಯಬೆಲೆ ಅಂಗಡಿಗಳ ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

# ಹೊಸ ಉದ್ಯೋಗ ಖಾತ್ರಿ ಯೋಜನೆ ಕಾರ್ಮಿಕರಿಗೆ ಮಾರಕ




**ಮಲ್ಲಮ್ಮ ನುಡಿ ಬಾಗಲಕೋಟೆ:** ವಿಕಾಸ ಭಾರತ್ ಗ್ಯಾರಂಟಿ ಫಾರ್ ರೋಜಗಾರ ಮತ್ತು ಅಜೀವಿಕಾ ಮಿಷನ್ ಮಸೂದೆ ಕೂಲಿ ಕಾರ್ಮಿಕರಿಗೆ ಮಾರಕವಾಗಿದ್ದು, ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಪೂರ್ಣ ಪ್ರಮಾಣದಲ್ಲಿ ಕಿತ್ತೊಗೆಯುವ ಹುನ್ನಾರವನ್ನು ಕೇಂದ್ರ ಸರ್ಕಾರ ಮಾಡಿದೆ ಎಂದು ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯ ಜಿಲ್ಲಾ ಸಂಯೋಜಕ ಶಂಕರ ಹೂಗಾರ ಆರೋಪಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮಸೂದೆ ಸಂಪೂರ್ಣವಾಗಿ ಕೂಲಿ ಕಾರ್ಮಿಕರಿಗೆ ಮಾರಕವಾಗಿದೆ. ಅಲ್ಲದೇ ಮಸೂದೆ ರಚನೆ ಮಾಡುವ ಮುನ್ನ ಸರ್ಕಾರ ಯಾವ ಕಾರ್ಮಿಕ ಸಂಘಟನೆಗಳನ್ನು ಸಹ ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ ಎಂದು ದೂರಿದರು.

ಮಹಾತ್ಮಗಾಂಧಿ ನರೇಗಾ ಯೋಜನೆ ರದ್ದುಗೊಳಿಸುವ ಮೂಲಕ ಕೇಂದ್ರ ಸರ್ಕಾರ ತನ್ನ ನಿಯಂತ್ರಣವನ್ನು ಬಿಗಿಗೊಳಿಸಿದೆ. ಇದರಿಂದ ಆಯ್ದ ಗ್ರಾಮೀಣ ಪ್ರದೇಶದಲ್ಲಿ ಮಾತ್ರ ಕೆಲಸ ಮಾಡುವ ಹಕ್ಕು ಕಾರ್ಮಿಕರು ಪಡೆಯುತ್ತಾರೆ. ಕೇಂದ್ರ ಸರ್ಕಾರ ಗುರುತಿಸಿದ ಪ್ರದೇಶದಲ್ಲಿ ಗ್ರಾಮೀಣ ಕಾರ್ಮಿಕರಿಗೆ ಉದ್ಯೋಗ ಖಾತರಿ ಇಲ್ಲ ಎಂದ ಶಂಕರ ಹೂಗಾರ, ನರೇಗಾದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಬಜೆಟ್ ಹಂಚಿಕೆ 90–10 ರಷ್ಟು ಇದ್ದು, ಆದರೆ ಈ ಮಸೂದೆಯಲ್ಲಿ 60–40 ಇದೆ. ಕೃಷಿ ಚಟುವಟಿಕೆ ಸಮಯದಲ್ಲಿ 60 ದಿನಗಳ ಕಾಲ ಯೋಜನೆಗಳನ್ನು ಸ್ಥಗಿತಗೊಳಿಸಬಹುದಾಗಿದ್ದು ಇದು ಉದ್ಯೋಗದ ಹಕ್ಕನ್ನು ಕಿತ್ತುಕೊಳ್ಳುವ ಪ್ರಯತ್ನ ಎಂದರು.

ಕಾರ್ಮಿಕರ ಹಕ್ಕುಗಳನ್ನು ನಿರಾಕರಿಸುವ, ಗ್ರಾಮಪಂಚಾಯಿತಿಗಳನ್ನು ದುರ್ಬಲಗೊಳಿಸುವ ಮತ್ತು ಸಾಮಾಜಿಕ ನ್ಯಾಯವನ್ನೇ ಅಣಕಿಸುವ ಈ ಮಸೂದೆಯನ್ನು ಹಿಂದಕ್ಕೆ ಪಡೆಯಬೇಕು ಎಂದು ಒತ್ತಾಯಿಸಿ ನಗರದಲ್ಲಿ ಸಂಸದರ ಕಚೇರಿ ಮುಂದೆ ಡಿ.22 ರಂದು ಪ್ರತಿಭಟನೆ ನಡೆಸಲಾಗುವುದು ಎಂದು ಹೇಳಿದರು.

ಮಹಾಂತೇಶ ಹೊಸಮನಿ, ಬಸವರಾಜ ದೊಡಮನಿ, ರೇಣುಕಾ ಸುನಗದ, ಸವಿತಾ ತೆಗ್ಗಿ, ಶಿಲ್ಪಾ ಗೂಡನ್ನವರ ಇದ್ದರು.

# ಜಂಬಲದಿನ್ನಿ ರಂಗಮಂದಿರದಲ್ಲಿ 2ದಿನ ದಲಿತ ಸಾಹಿತ್ಯ ಸಮ್ಮೇಳನ: ಜಂಗಮರಹಳ್ಳಿ

**ಮಲ್ಲಮ್ಮ ನುಡಿ ವಾರ್ತೆ ಮಸ್ಕಿ :** ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯ ಘಟಕದ ವತಿಯಿಂದ 11ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನ ಡಿ.20 ಹಾಗೂ 21 ರಂದು ರಾಯಚೂರು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗ ಮಂದಿರದಲ್ಲಿ ಏರ್ಪಡಿಸಲಾಗಿದೆ ಎಂದು ಮಸ್ಕಿ ದಲಿತ ಸಾಹಿತ್ಯ ಪರಿಷತ್ತು ಅಧ್ಯಕ್ಷ ನಾಗೇಶ ಜಂಗಮರಹಳ್ಳಿ ಮಾತನಾಡಿದರು. ಪಟ್ಟಣದಲ್ಲಿ ಪತ್ರಿಕಾಹೇಳಿಕೆ ನೀಡಿ ಮಾತನಾಡಿದ ಅವರು, ಜಯದೇವಿ ಗಾಯಕವಾಡ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಲಿದ್ದಾರೆ. ಸಾಹಿತಿ ಪ್ರೊ.ಬರಗೂರು ರಾಮಚಂದ್ರಪ್ಪ ಉದ್ಘಾಟಿಸಲಿದ್ದಾರೆ. ಸಮ್ಮೇಳನದಲ್ಲಿ ಸರ್ವರಿಗೂ ಸಂವಿಧಾನ ಮತ್ತು ಮೀಸಲಾತಿ ಒಳಗೆ ಮತ್ತು ಹೊರಗೆ ಕುರಿತು ಸಂವಾದ ಗೋಷ್ಠಿಯನ್ನು ಆಯೋಜಿಸಲಾಗಿದೆ. ಸಾಹಿತ್ಯದ ಕುರಿತು ವಿಚಾರ ಗೋಷ್ಠಿ, ಮಹಿಳಾ ಕಾವ್ಯಾಯಾನ, ಪುರುಷ ಕಾವ್ಯಾಯಾನ, ಸಾಂಸ್ಕೃತಿಕ ಕಾರ್ಯಕ್ರಮಗಳು, ರಾಷ್ಟ್ರೀಯ ಗೌರವ



ಪ್ರಶಸ್ತಿ, ರಾಷ್ಟ್ರೀಯ ಯುವಪ್ರಶಸ್ತಿ, ರಾಷ್ಟ್ರೀಯ ಪುಸ್ತಕ ಪ್ರಶಸ್ತಿ, ಬಾಲ ಪ್ರಶಸ್ತಿ ಪ್ರಧಾನ ಕಾರ್ಯಕ್ರಮಗಳು ನಡೆಯಲಿವೆ ಎಂದರು. ಜಿಲ್ಲೆಯ ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು, ಅಧಿಕಾರಿಗಳು, ಸಾಹಿತಿಗಳು, ಭಾಗವಹಿಸಲಿದ್ದು ಡಿ.20 ರಂದು ಬೆಳಗ್ಗೆ 8 ಗಂಟೆಗೆ ಬಸವೇಶ್ವರ ವೃತ್ತದಿಂದ ಜಿಲ್ಲಾ ರಂಗ ಮಂದಿರದ ವರೆಗೆ ಜಾನಪದ ಕಲಾ ತಂಡಗಳ ಮೆರವಣಿಗೆ ನಡೆಯಲಿದೆ. ಮೇಯರ್ ನರಸಮ್ಮ ಮಾಡಗಿರಿ ಮೆರವಣಿಗೆ ಚಾಲನೆ ನೀಡುವರು. ಸಮ್ಮೇಳನದಲ್ಲಿ ಒಟ್ಟು ಆರು ಗೋಷ್ಠಿಗಳು ನಡೆಯಲಿವೆ. ಡಿ.21 ರಂದು ಸಂಜೆ 4 ಗಂಟೆಗೆ ಸಮಾರೋಪ ಕಾರ್ಯಕ್ರಮ ನಡೆಯಲಿದೆ. ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ ಸಮಾರೋಪ ಭಾಷಣ ಮಾಡುವರು ಹಾಗೂ ಬೀದರ್ ಬೌದ್ಧ ವಿಹಾರದ ವರಜ್ಯೋತಿ ಭಂತೇಜಿ ನೇತೃತ್ವ ವಹಿಸುವರು ಎಂದು ತಿಳಿಸಿದರು.

# ಸೇವಾ ಭಾವನೆಯಿಂದ ಜೀವನ ಸಾರ್ಥಕ–ಹುಚ್ಚೇಶ್ವರ ಶ್ರೀಗಳು

**ಮಲ್ಲಮ್ಮ ನುಡಿ ವಾರ್ತೆ ,ಬಾಗಲಕೋಟೆ:** ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಅತ್ಯಂತ ಮುಖ್ಯ. ನಿಸ್ವಾರ್ಥ ತ್ಯಾಗ ಹಾಗೂ ಸೇವಾ ಮನೋಭಾವದಿಂದ ಸಮಾಜಕ್ಕೆ ಸೇವೆ ಸಲ್ಲಿಸಿದಾಗ ಜೀವನ ಸಾರ್ಥಕವಾಗುತ್ತದೆ ಎಂದು ಕಮತಗಿಯ ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಹೊಳೆ ಹುಚ್ಚೇಶ್ವರ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಕಡಿವಾಲ–ಕಲ್ಲಾಪೂರ ಹಾಗೂ ಯರನಾಯ್ಕನಾಳ ಗ್ರಾಮಗಳಲ್ಲಿ ನಡೆದ ಕಮತಗಿಯ ಹುಚ್ಚೇಶ್ವರ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದ ದಿವ್ಯಸಾನಿಧ್ಯವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಮಾಜದ ನೈಜ ಸಮಸ್ಯೆಗಳನ್ನು ಅರಿತು ಪರಿಹಾರಕ್ಕೆ ಮುಂದಾಗಬೇಕು ಎಂದು ಹೇಳಿದರು.

ಎನ್‌ಎಸ್‌ಎಸ್ ಶಿಬಿರವು ವಿದ್ಯಾರ್ಥಿಗಳಲ್ಲಿ ನಾಯಕತ್ವಗುಣ ಮತ್ತು ಸೇವಾ ಮನೋಭಾವ ಬೆಳೆಸುವ ಪ್ರಮುಖ ವೇದಿಕೆಯಾಗಬೇಕು, ಇಲ್ಲಿ ಕಲಿತ ಮೌಲ್ಯಗಳನ್ನು ಜೀವನಪೂರ್ತಿ ಅಳವಡಿಸಿಕೊಳ್ಳಬೇಕು ಎಂದು ಕಮತಗಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಬಸವರಾಜ ಕುಂಬಳಾವತಿ ಹೇಳಿದರು.

ಕಮತಗಿ ಪಟ್ಟಣ ಪಂಚಾಯಿತಿ ಸದಸ್ಯ ದೇವಿಪ್ರಸಾದ ನಿಂಬಲಗುಂದಿ, ಸ್ಥಳೀಯರಾದ ಗೌರಮ್ಮ ಬಡಕಣ್ಣವರ, ಧರ್ಮಣ್ಣ ನಿಲುಗಲ್ಲ, ನೀಲಪ್ಪ ಚಲವಾದಿ,



ಪಿಡಿಒ ಸುನೀತಾ ಅಂಗಡಿ, ಸಂಘದ ಆಡಳಿತಾಧಿಕಾರಿ ಅನಿಲ್‌ಕುಮಾರ ಕಲ್ಯಾಣಶೆಟ್ಟಿ, ಎನ್‌ಎಸ್‌ಎಸ್ ಯೋಜನೆಯ ಕಾರ್ಯಕ್ರಮ ಅಧಿಕಾರಿ ಎಸ್.ಕೆ. ಮುತ್ತಲಗೇರಿ ಸೇರಿದಂತೆ ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ಎನ್‌ಎಸ್‌ಎಸ್ ಸ್ವಯಂಸೇವಕರು ಹಾಗೂ ಕಡಿವಾಲ–ಕಲ್ಲಾಪುರ ಮತ್ತು ಯರನಾಯ್ಕನಾಳ ಗ್ರಾಮದ ಗ್ರಾಮಸ್ಥರು ಉಪಸ್ಥಿತರಿದ್ದರು.

ಶಿಬಿರದ ಅವಧಿಯಲ್ಲಿ ಸ್ವಯಂಸೇವಕರು ಗ್ರಾಮಗಳ ರಸ್ತೆ ನಿರ್ಮಾಣ ಕಾರ್ಯ, ಗಿಡ ನೆಡುವಿಕೆ, ಗ್ರಾಮ ನೈರ್ಮಲ್ಯ ಅಭಿಯಾನ, ಮಳೆ ನೀರಿನ ಸಂಗ್ರಹಣೆ ಹಾಗೂ ನಿರ್ವಹಣೆ ಕುರಿತು ಜಾಗೃತಿ, ಉಚಿತ ಆರೋಗ್ಯ ತಪಾಸಣೆ ಶಿಬಿರ, ಉಳಿತಾಯ ಯೋಜನೆಗಳ ಸಾಕ್ಷರತೆ ಮತ್ತು ಆರೋಗ್ಯ ಶಿಕ್ಷಣದ ಬಗ್ಗೆ ತಿಳುವಳಿಕೆ ಮೂಡಿಸಿದರು. ಅಲ್ಲದೆ ದೇವಾಲಯಗಳು ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಕೈಗೊಳ್ಳುವ ಮೂಲಕ ಸಾರ್ವಜನಿಕರಲ್ಲಿ ಸ್ವಚ್ಛತೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದರು.

ಪ್ರತಿದಿನವೂ ವಿಭಿನ್ನ ವಿಷಯಗಳ ಕುರಿತು ಉಪನ್ಯಾಸ ಕಾರ್ಯಕ್ರಮಗಳು ನಡೆದವು. ಬ್ಯಾಂಕ್ ಖಾತೆ ತೆರೆಯುವ ವಿಧಾನ, ರೈತರಿಗೆ ಲಭ್ಯವಿರುವ ಸರ್ಕಾರಿ ಸೌಲಭ್ಯಗಳು. ಸಂರಕ್ಷಣೆ, ಶಿಕ್ಷಣದ ಜಾನುವಾರುಗಳ ಗ್ರಾಮೀಣಾಭಿವೃದ್ಧಿಯಲ್ಲಿ ಪಾತ್ರ. ಗೃಹ ಬಳಕೆಯ ಗ್ಯಾಸ್ ಕುರಿತು ಜಾಗೃತಿ, ಕಾನೂನು ಅರಿವು, ನಶಾಮುಕ್ತ ಅಭಿಯಾನ. ವ್ಯಸನಮುಕ್ತಿ ಹಾಗೂ ಪುನರ್ವಸತಿ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಮಾಹಿತಿ ನೀಡಲಾಯಿತು. ವ್ಯಕ್ತಿತ್ವ ವಿಕಸನದಲ್ಲಿ ಎನ್‌ಎಸ್‌ಎಸ್ ಪಾತ್ರ, ಸಾವಯವ ಕೃಷಿಯ ಅಗತ್ಯತೆ. ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವ ತಯಾರಿ ಕುರಿತು ತಜ್ಞರಿಂದ ಮಾರ್ಗದರ್ಶನ ದೊರೆಯಿತು.

## ದುರ್ಗಾದೇವಿ ಜಾತ್ರೆ, ಕಲೆ ಸಂಸ್ಕೃತಿ ನಾಡಿನ ಜೀವಂತಿಕೆ: ಮಲ್ಲಿಕಾರ್ಜುನ



**ಗಂಗಾವತಿ:** ವೈಜ್ಞಾನಿಕ ಪ್ರಗತಿ, ಅಭಿವೃದ್ಧಿಯ ಜತೆಗೆ ಕಲೆ ಸಂಸ್ಕೃತಿ, ಸಾಹಿತ್ಯ ನಾಡಿನ ಭವ್ಯ ಪರಂಪರೆ ಸಾರುತ್ತದೆ ಅಲ್ಲದೆ ನಮ್ಮ ಜೀವಂತಿಕೆ, ಶ್ರೀಮಂತಿಕೆಯನ್ನ ಎತ್ತಿ ತೋರಿಸುತ್ತದೆ ಎಂದು ಮಾಜಿ ಸಚಿವ ಮಲ್ಲಿಕಾರ್ಜುನ ನಾಗಪ್ಪ ಹೇಳಿದರು.

ಅವರು ನಗರದ ಶ್ರೀ ದುರ್ಗಾದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ವಿಐಪಿ ಮೆಲೋಡಿಸ್, ಜೆಎನ್‌ಎನ್ ಸಂಸ್ಥೆ ಗಂಗಾವತಿ ಹಾಗು ಶ್ರೀ ಅಂಜನಾದ್ರಿ ಗೆಜ್ಜೆ ಹೆಜ್ಜೆ ಜನ ಸೇವಾ ಕಲಾ ಟ್ರಸ್ಟ್ ಉಪ್ಪಾರ ಓಣಿ ಇವುಗಳ ಗಂಗಾವತಿ ಸಹಯೋಗದೊಂದಿಗೆ ಆಯೋಜಿಸಿದ್ದ ಶ್ರೀ ದೇವಿ ದಶಾವತಾರ, ಭಕ್ತಿ ರಸಸಂಜೆ, ಭರತ ನಾಟ್ಯ ಹಾಗು ಪೌರಾಣಿಕ ನಾಟಕಗಳ ಸಂಭಾಷಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಆಧುನಿಕತೆಯ ಪ್ರಭಾವದಿಂದ ವೇದಿಕೆ ಕಾರ್ಯಕ್ರಮಗಳು ಕಣ್ಮರೆಯಾಗುತ್ತಿದ್ದು, ನಾಟಕ, ಜನಪದ ಗೀತೆ, ಬಯಲಾಟ ಇತರೆ ಪೌರಾಣಿಕ ಕಲೆಗಳ ಉಳಿಸುವುದು ಮತ್ತು ಮುಂಚೂಣಿಗೆ ತರುವ ನಿಟ್ಟಿನಲ್ಲಿ ಎಲ್ಲರೂ ಸಾಂಘಿಕವಾಗಿ ಪ್ರಯತ್ನಿಸಬೇಕಾಗಿದೆ, ಅವುಗಳ ಜೀವಂತಿಕೆ ನಮ್ಮ ಪೂರ್ವಜರ ಹೆಜ್ಜೆಗುರುತುಗಳು ಎಂದು ಕಿವಿಮಾತು ಹೇಳಿದರು. ಶ್ರೀ ದುರ್ಗಾದೇವಿ ದೇವಸ್ಥಾನ ಸಮಿತಿ ಅಧ್ಯಕ್ಷ ಜೋಗದ ನಾರಾಯಣಪ್ಪ ನಾಯಕ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಶ್ರೀ ಭಗೀರಥ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನರಸಪ್ಪ ಅಮರಜ್ಯೋತಿ, ನಗರಸಭೆ ಮಾಜಿ ಅಧ್ಯಕ್ಷ ಜೋಗದ ಹನುಮಂತಪ್ಪ ನಾಯಕ, ಗಂಗಾವತಿ ತಾಲೂಕು ಉಪ್ಪಾರ ಸಮಾಜದ ಅಧ್ಯಕ್ಷ ವೆಂಕಟೇಶ್ ಅಮರಜ್ಯೋತಿ, ಶ್ರೀ ಅಂಜನಾದ್ರಿ ಗೆಜ್ಜೆ ಹೆಜ್ಜೆ ಜನ ಸೇವಾ ಕಲಾ ಟ್ರಸ್ಟ್ ಹಾಗು ಪತ್ರಕರ್ತರ ಸಂಘದ ಅಧ್ಯಕ್ಷ ನಾಗರಾಜ್ ಇಂಗಳಗಿ, ಕರ್ನಾಟಕ ರಾಜ್ಯ ಶ್ರಮಜೀವಿ ಕಟ್ಟಡ ಕಾರ್ಮಿಕರು ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವುಕುಮಾರ್‌ಗೌಡ, ಗಾಯನ ರತ್ನ ಪ್ರಶಸ್ತಿ ಪುರಸ್ಕೃತರು ಹಾಗು ವಿಐಪಿ ಮೆಲೋಡಿಸ್ ಮಾಲಿಕರಾದ ಪಂಪಾಪತಿ ಇಂಗಳಗಿ, ಪ್ರಮುಖರಾದ ಸೈಯ್ಯದ್ ಅಲಿ, ಅನ್ನಪೂರ್ಣ ಸಿಂಗ್, ಗೀತಾ ವಿಕ್ರಮ್, ರಘುನಾಥ ಪವಾರ್ ಇತರರಿದ್ದರು.

## ಫಾರೆವರ್ ಮಿಸ್ ಇಂಡಿಯಾ ಗ್ರ್ಯಾಂಡ್ ಫಿನಾಲೆ ಆಯೋಜನೆ



**ಜಯಪುರ:** ಫಾರೆವರ್ ಮಿಸ್ ಇಂಡಿಯಾ ಗ್ರ್ಯಾಂಡ್ ಫಿನಾಲೆಗೆ ದೇಶದ ವಿವಿಧ ಭಾಗಗಳಿಂದ ಆಗಮಿಸಿದ ಸ್ಪರ್ಧಿಗಳು ರಾಜಸ್ಥಾನದ ಗುಲಾಬಿ ನಗರಿ ಜಯಪುರದಲ್ಲಿರುವ ಹೋಟೆಲ್ ರಾಯಲ್ ಆರ್ಕಿಡ್‌ಗೆ ತಲುಪಿದ್ದಾರೆ. ಗಮನಾರ್ಹವೆಂದರೆ, ಡಿಸೆಂಬರ್ 21ರಂದು ಜೀ ಸ್ಟುಡಿಯೋದಲ್ಲಿ ಮಿಸ್ ಇಂಡಿಯಾ ಪೇಜೆಂಟ್ ಆಯೋಜನೆಯಾಗಲಿದೆ. ಈ ಸಂದರ್ಭದಲ್ಲಿ ಮಿಸ್ ಯುನಿವರ್ಸ್, ಮಿಸೆಸ್ ಇಂಡಿಯಾ ಮತ್ತು ಮಿಸ್ ಟೀನ್ ಇಂಡಿಯಾ ವಿಜೇತರ ಕ್ರೌನಿಂಗ್ ಸಮಾರಂಭವೂ ನಡೆಯಲಿದೆ. ಫಾರೆವರ್ ಸ್ಟಾರ್ ಇಂಡಿಯಾದ ಸಂಸ್ಥಾಪಕ ರಾಜೇಶ್ ಅಗರವಾಲ್ ಹಾಗೂ ನಿರ್ದೇಶಕಿ ಜಿಯಾ ಚೌಹಾನ್ ಅವರು ತಿಳಿಸಿದಂತೆ, ಹೋಟೆಲ್ ರಾಯಲ್ ಆರ್ಕಿಡ್‌ನಲ್ಲಿ ಸ್ಪರ್ಧಿಗಳಿಗೆ ಸೂಕ್ಷ್ಮವಾದ ಗ್ರೂಮಿಂಗ್ ಮತ್ತು ತರಬೇತಿ ನೀಡಲಾಗುತ್ತದೆ. ಹಾಗೆಯೇ ಡಿಸೆಂಬರ್ 20ರಂದು ದೇಶದ ವಿವಿಧ ರಾಜ್ಯಗಳಿಂದ ಬಂದ ಸ್ಪರ್ಧಿಗಳು ತಮ್ಮ–ತಮ್ಮ ರಾಜ್ಯಗಳನ್ನು ಪ್ರತಿನಿಧಿಸುತ್ತಾ 'ಕಲರ್ಸ್ ಆಫ್ ಇಂಡಿಯಾ' ಎಂಬ ಸಾಂಸ್ಕೃತಿಕ ರೌಂಡ್‌ನಲ್ಲಿ ಭಾಗವಹಿಸಲಿದ್ದಾರೆ. ರಾಜೇಶ್ ಅವರು ತಿಳಿಸಿದಂತೆ, ಡಿಸೆಂಬರ್ 21ರಂದು ನಡೆಯುವ ಮಿಸ್ ಇಂಡಿಯಾ ಗ್ರ್ಯಾಂಡ್ ಫಿನಾಲೆಯ ಕೊರಿಯೋಗ್ರಫಿ ಮತ್ತು ನಿರ್ದೇಶನದ ಜವಾಬ್ದಾರಿಯನ್ನು ಶಾಯ್ ಲೋಬೋ ಅವರು ವಹಿಸಿಕೊಳ್ಳಲಿದ್ದಾರೆ. ಈ ಇವೆಂಟ್‌ನಲ್ಲಿ ಎಥ್ನಿಕ್ ಮತ್ತು ಸಾಂಸ್ಕೃತಿಕ ವಸ್ತ್ರಧಾರಣೆಯೊಂದಿಗೆ ವಿಶೇಷ ರೌಂಡ್‌ಗಳೂ ಇರಲಿವೆ.

## ರಾಜ್ಯ ಹೆದ್ದಾರಿ ಮೇಲೆ ಕಸ ಸವಾರಿ



- ವರದಿ ವೀರೇಶ್ ಹೊಸಳ್ಳಿ, ಸಿಂಧನೂರು

ಕಸ ವಿಲೇವಾರಿ ಘಟಕಕ್ಕೆ ಸ್ಥಾಪನೆಗೆ ಸರ್ಕಾರಗಳು ಸ್ಪೆಷಲ್ ಗ್ರಾನ್ಯೆಂಟ್ ಮೂಲಕ ವರ್ಷಕ್ಕೆ ಸಾವಿರಾರು ಕೋಟಿ ರೂಪಾಯಿ ವೆಚ್ಚ ಮಾಡುತ್ತಾ ಬರುತ್ತದೆ.ಆದರೆ ಇಲ್ಲಿಯವರೆಗೂ ಕಸ ವಿಲೇವಾರಿ ಘಟಕ ಸರಿಯಾದ ಕಾರ್ಯ ನಿರ್ವಹಿಸುತ್ತಿಲ್ಲ. ಎಂದರೆ ಇದಕ್ಕೆ ಮೂಲ ಕಾರಣ ನಗರ ಸಭೆ ಮತ್ತು ಗ್ರಾಮ ಪಂಚಾಯಿತಿ ಪಿಡಿಒ ಹಾಗೂ ವಿಲೇವಾರಿ ವಾಹನಗಳು ಸಾಗಾಟ ಮಾಡುತ್ತಿರುವ ಸಿಬ್ಬಂದಿ ಗಳು ನಿರ್ಲಕ್ಷ್ಯ ಧೋರಣೆವೆ ಖಂಡಿಸಿ ಸಾರ್ವಜನಿಕರು ಅಧಿಕಾರಿಗಳು ಮೇಲೆ ಹಿಡಿಶಾಪ ಹಾಕುತ್ತಿದ್ದಾರೆ.

ಅಪಘಾತಕ್ಕೆ ಒಳಗಾದ ಕುಟುಂಬಗಳು ಸಂಕಷ್ಟ ಎದುರಿಸುತ್ತಿದ್ದಾರೆ. ಏಕೆಂದರೆ ಚಾಮರಾಜನಗರ ಟು ಬೆಂಗಳೂರು ಮತ್ತು ಹೈದರಾಬಾದ್ ಗುಲ್ಬರ್ಗ ಬೀದರ್ ಹಾಗೂ ಹುಬ್ಬಳ್ಳಿ ಮತ್ತು ದಾವಣಗೆರೆ ಆಯ್ದು ಹೋಗುವ ಸಿಂಧನೂರು ಮಾರ್ಗವಾಗಿ ಹೋಗುವ ಹೊಸಳ್ಳಿ ಇಜೆ ಗ್ರಾಮ ಪಂಚಾಯಿತಿ ಸಿಂಧನೂರು ನಗರ ಸಭೆ ಎರಡು ಮಧ್ಯೆ ಹೊಡೆ ಹಳ್ಳಕ್ಕೆ ಹೊಂದಿಕೊಂಡಿರುವ ರಾಜ್ಯ ಹೆದ್ದಾರಿ 150 ಎ ಈ ರಸ್ತೆಯ ಮಾರ್ಗವಾಗಿ ಒಂದು ದಿನಕ್ಕೆ ಸಾವಿರಾರು ವಾಹನಗಳು ಹಾಗೂ ಬೈಕ್ ಸೇರಿದಂತೆ ಅಧಿಕ ವಾಹನಗಳು ಓಡುತ್ತಿರುವುದು ರಸ್ತೆ ಪಕ್ಕದಲ್ಲಿ ಮೇಲೆ ಕಸ ವಿಲೇವಾರಿ ರಸ್ತೆಗೆ ಚೆಲ್ಲಿ ಮತ್ತು ಅದಕ್ಕೆ ಬೆಂಕಿ ಹಚ್ಚಿದ್ದಾರೆ. ಈ ಹಿನ್ನೆಲೆಯಲ್ಲಿ ವಾಹನ ಸಂಚಾರ ಮಾಡುತ್ತಿರುವ ಸವಾರರಿಗೆ. ಸಾರ್ವಜನಿಕರಿಗೆ ಬೆಂಕಿ ಹೊಗೆಯಲ್ಲಿ ಎದುರಿಗೆ ಬರುವ ವಾಹನಗಳು ಕಾಣದೇ ಹೊಗೆ.ಧೂಳು. ಕಣ್ಣಿಗೆ ಬಂದು ಎಷ್ಟೋ ಅಪಘಾತ ಸಂಭವಿಸಿ ಪ್ರಾಣ ಕಳೆದುಕೊಂಡಿದ್ದಾರೆ. ಇವತ್ತಿಗೂ ಅವರು ಕುಟುಂಬಗಳು ಸಂಕಷ್ಟವನ್ನು ಎದುರಿಸುತ್ತಿದ್ದಾರೆ.

# ಬಾರ್ ಓಪನ್ ಮಾಡದಂತೆ ನಾಗರಿಕರ ಆಗ್ರಹ

- ಮಲ್ಲಮ್ಮ ನುಡಿ ವಾರ್ತೆ ಪೀಣ್ಯ, ದಾಸರಹಳ್ಳಿ



ದೊಡ್ಡಬಿದರಕಲ್ಲು ವಾರ್ಡ್ ನ ತಿಪ್ಪೇನಹಳ್ಳಿ ಮುಖ್ಯರಸ್ತೆಯ ಕಾಟಮರಾಯನಗುಡಿ ಸಮೀಪದ ಬೃಂದಾವನನಗರ ಫೇಸ್–2 ಬಡಾವಣೆಯ ಜನವಸತಿ ಪ್ರದೇಶದಲ್ಲಿ ಬಾರ್ ಓಪನ್ ಮಾಡುತ್ತಿರುವುದನ್ನು ವಿರೋಧಿಸಿ ಅಕ್ಕಪಕ್ಕದ ಬಡಾವಣೆಯ ನಾಗರೀಕರು ಅಬಕಾರಿ ಅಧಿಕಾರಿಗಳು ಹಾಗೂ ಬಾರ್ ಮಾಲೀಕರ ವಿರುದ್ಧ ಪ್ರತಿಭಟನೆ ನಡೆಸಿದರು.

ಬಡಾವಣೆಯ ನಿವಾಸಿ ಶ್ಯಾಮಲ ಮಾತನಾಡಿ, 'ಬಾರ್ ಓಪನ್ ಆದರೆ ಪುಂಡರು ಪೋಕರಿಗಳ ಹಾವಳಿ ಹೆಚ್ಚಾಗುತ್ತದೆ. ಇದರಿಂದ ಇಲ್ಲಿ ಓಡಾಡುವ ಹೆಣ್ಣು ಮಕ್ಕಳಿಗೆ ತೊಂದರೆಯಾಗುತ್ತದೆ. ನಾವು ಕಷ್ಟಪಟ್ಟು ಕೆಲಸ ಮುಗಿಸಿಕೊಂಡು ಮನೆಗೆ ಬಂದು ಆರಾಮದಾಯಕ ಜೀವನ ನಡೆಸಬೇಕು ಎಂದು–ಕೊಂಡರೆ ಬಾರ್ ಓಪನ್ ಮಾಡುವುದರಿಂದ ಜನರ ಜೀವನ ಹಾಳಾಗುತ್ತದೆ. ರಾತ್ರಿ ಹೊತ್ತು ಹೆಣ್ಣು ಮಕ್ಕಳು ಓಡಾಡದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಹಾಗಾಗಿ ಯಾವುದೇ ಕಾರಣಕ್ಕೂ ಬಾರ್ ಓಪನ್ ಮಾಡಲು ಬಿಡುವುದಿಲ್ಲ', ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳೀಯರಾದ ಟ್ರಾವೆಲ್ಸ್ ಮಂಜನಾಥ್ ಮಾತನಾಡಿ, 'ಅಧಿಕಾರಿಗಳಿಗೆ ದುಡ್ಡು ಕೊಟ್ಟರೆ ಸಾಕು ಕಾನೂನು ಉಲ್ಲಂಘಿಸಿ ಕೆಲಸ ಮಾಡುತ್ತಾರೆ. ಬಾರ್ ಓಪನ್ ಮಾಡದಂತೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಅವರು ನಮ್ಮ ಮಾತು ಕೇಳಲು ಸಿದ್ಧರಿಲ್ಲ. ನಮಗೆ ಅಬಕಾರಿ ನಿಯಮದಲ್ಲಿ ಬಾರ್ ಓಪನ್ ಮಾಡಲು ಅವಕಾಶವಿದೆ ಎಂದು ಹೇಳಿ ಜಾರಿಕೊಳ್ಳುತ್ತಾರೆ. ಜೊತೆಗೆ ಈ ಕಟ್ಟಡ ನಿರ್ಮಾಣ ಕೂಡಾ ಅನಧಿಕೃತವಾಗಿದೆ ಹಾಗೂ ಕಟ್ಟಡವು ಹೈ ಟೆನ್ಷನ್ ಲೈನ್ ಪಕ್ಕದಲ್ಲೇ ಇದ್ದು ಬಫರ್ ಜೋನ್ ನಲ್ಲಿ ಯಾವುದೇ ಬಾರ್ ಓಪನ್ ಮಾಡಲು ಅವಕಾಶವಿಲ್ಲದಿದ್ದರೂ ಅಧಿಕಾರಿಗಳು ಶಾಮೀಲಾಗಿ ಬಾರ್ ಓಪನ್ ಮಾಡಲು ಅವಕಾಶ ಕೊಟ್ಟಿದ್ದಾರೆ. ಜೊತೆಗೆ ಪಾರ್ಕಿಂಗ್ ಗೆ ಅವಕಾಶ ಕಲ್ಪಿಸಲಾಗಿದೆ ಎಂದು ಸುಳ್ಳು ಮಾಹಿತಿ ನೀಡಿ ದಾರಿ ತಪ್ಪಿಸುವಂತಹ ಕೆಲಸವನ್ನು ಅಧಿಕಾರಿಗಳು ಮಾಡುತ್ತಿದ್ದಾರೆ', ಎಂದು ಆರೋಪಿಸಿದರು.

ಸ್ಥಳೀಯ ನಿವಾಸಿ ನಟರಾಜ್ ಮಾತನಾಡಿ, 'ಹಣ ಮಾಡಲಿಕ್ಕೆ ಬೇಕಾದಷ್ಟು ಅವಕಾಶಗಳಿದ್ದರೂ ಬಾರ್ ನಿಂದ ಸಂಪಾದನೆ ಮಾಡಿ ನಾಗರೀಕರಿಗೆ ತೊಂದರೆ ಕೊಡುವ ಉದ್ದೇಶದ ಮನಸ್ಥಿತಿ ಹೊಂದಿರುವ ಮಾಲೀಕರು ಹಾಗೂ ಈ ಅಕ್ರಮದ ಪಾಲುದಾರರಾಗಿರುವ ಅಬಕಾರಿಗಳ ಕುತಂತ್ರ ಕೆಲಸಕ್ಕೆ ನಾವು ಅವಕಾಶ ನೀಡುವುದಿಲ್ಲ. ಕಟ್ಟಡದ ಸಮೀಪದಲ್ಲಿ ಇತಿಹಾಸ ಪ್ರಸಿದ್ಧ ಕಾಟಮರಾಯನಗುಡಿ ಇದ್ದರೂ ಲಂಚ ತೆಗೆದುಕೊಂಡು ಅಧಿಕಾರಿಗಳು ಬಾರ್ ಗೆ ಲೈಸೆನ್ಸ್ ಕೊಟ್ಟಿದ್ದಾರೆ. ಈ ಕೂಡಲೇ ಬಾರ್ ಲೈಸೆನ್ಸ್ ರದ್ದು ಮಾಡದಿದ್ದರೆ ಮುಂದಿನ ಪರಿಣಾಮವನ್ನು ಅಧಿಕಾರಿಗಳು ಹಾಗೂ ಬಾರ್ ಓಪನ್ ಮಾಡುತ್ತಿರುವವರು ಎದುರಿಸಬೇಕಾಗುತ್ತದೆ', ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಬಡಾವಣೆಯ ನಿವಾಸಿಗಳಾದ ವಾಸು, ವಿಜಯ್ ಕುಮಾರ್, ಮಹೇಶ್ ಕುಮಾರ್, ಶ್ರೀನಿವಾಸ್ ಮೂರ್ತಿ, ನಟರಾಜ್, ವೆಂಕಟಾಚಲ, ಗಜೇಂದ್ರ, ಚಂದ್ರಣ್ಣ, ಕುಮಾರ್, ಜಗದೀಶ್, ಸುರೇಶ್, ಬಿ ಮಂಜುನಾಥ್, ಲೋಕೇಶ್, ದಿಗ್ವಿ–ಜಯ್ ಸಿಂಗ್, ಟಿ.ಎನ್ ನಾಗರಾಜು, ಸೇರಿದಂತೆ ತಿಪ್ಪೇನಹಳ್ಳಿಯ ಬಡಾವಣೆಯ ನಿವಾಸಿಗಳು, ಸ್ಥಳೀಯರು ಉಪಸ್ಥಿತರಿದ್ದು ಅಧಿಕಾರಿಗಳ ವಿರುದ್ಧ ಪ್ರತಿಭಟಿಸಿದರು.

## ಗುರುವಂದನಾ ಕಾರ್ಯಕ್ರಮ 20ರಂದು

- ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆ ಕುಕನೂರ ತಾಲೂಕಿನ ಯರೇಹಂಚಿನಾಳ ಕರ್ನಾಟಕ ಸಂಸ್ಕೃತಿ ವಿದ್ಯಾಪೀಠ ಪ್ರೌಢಶಾಲೆಯ ಹಳೆ ವಿದ್ಯಾರ್ಥಿಗಳಿಂದ ಡಿ. 20 ಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮವನ್ನು 2000–ರಿಂದ 2008ನೇ ಸಾಲಿನಲ್ಲಿ ಈ ಪ್ರೌಢಶಾಲೆ ಓದಿದ ಎಲ್ಲಾ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಕೊಪ್ಪಳ ಹಾಗೂ ಹೂವಿನ ಹಡಗಲಿಯ ಹಿರಿ ಶಾಂತವೀರ ಮಹಾಸ್ವಾಮಿಗಳು ವಹಿಸಿಕೊಳ್ಳುವರು.

ಅಧ್ಯಕ್ಷತೆಯನ್ನು ಪ್ರೌಢಶಾಲೆ ಅಧ್ಯಕ್ಷರಾದ ಸುಭಾಷ್ ಮಾದಿನೂರ, ಮುಖ್ಯ ಅತಿಥಿಗಳಾಗಿ ಸೋಮಶೇಖರ್ ಗೌಡ, ಉಪನಿರ್ದೇಶಕರು ಶಿಕ್ಷಣ ಇಲಾಖೆ, ಕೊಪ್ಪಳ, ಹಾಗೂ ಎಚ್ ಆರ್ ಲೋಕೇಶ್ ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಬಳ್ಳಾರಿ, ಯಲಬುರ್ಗಾ ಕ್ಷೇತ್ರ ಶಿಕ್ಷಣ ಅಧಿಕಾರಿಗಳಾದ ಅಶೋಕ್ ಗೌಡರ್, ಶ್ರೀಮತಿ ದ್ರಾಕ್ಷಾಯಿಣಿ ಸಂಗಪ್ಪ ತಹಸೀಲ್ದಾರ್ , ಅಧ್ಯಕ್ಷರು ಗ್ರಾಮ ಪಂಚಾಯತಿ, ಶ್ರೀಮತಿ ಜ್ಯೋತಿ ದೊಡ್ಮನಿ ಪಿಡಿಓ ಯರೇಹಂಚಿನಾಳ, ಎಚ್ ಎ ನದಾಫ್ ಸಿ ಆರ್ ಸಿ ಬಿನ್ನಾಳ ಆಗಮಿಸುವವರು.

ಸಂಗೀತ ರಸಮಂಜರಿ ಕಾರ್ಯಕ್ರಮ ಜೀವನ್ ಸಾಬ್ ವಾಲಿಕಾರ್ ಬಿನ್ನಾಳ ಹಾಗೂ ಸಂಗಡಿಗ–ರಿಂದ ನೆರವೇರುವುದು , ಕಾರ್ಯಕ್ರಮದ ಅಚ್ಚುಕಟ್ಟ ನಿರ್ವಹಣೆಗಾಗಿ ಮೆರವಣಿಗೆ ಸಮಿತಿ , ವೇದಿಕೆ ಕಾರ್ಯಕ್ರಮ ಸಮಿತಿ, ಪ್ರಚಾರ ಸಮಿತಿ ಕಾರ್ಯಕ್ರಮದ ಯಶಸ್ವಿಗಾಗಿ ಹಳೆ ವಿದ್ಯಾರ್ಥಿಗಳ ತಂಡ ಶ್ರಮಿಸುತ್ತದೆ.

## ವಕ್ಫ್ ಬೋರ್ಡ್ ಆಸ್ತಿ ಪರಿಶೀಲನೆ

- ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ತಾಲೂಕಿನ ವಕ್ಫ್ ಬೋರ್ಡ್ ಆಸ್ತಿಯನ್ನು ನೆಲೆಗುದ್ದಿಗೆ ಬಿದ್ದಿರುವ ಕ್ರಮಗಾರಿಕೆಗಳನ್ನು ಜಿಲ್ಲಾ ವಕ್ಫ್ ಬೋರ್ಡ್ ಸಲಹಾ ಸಮಿತಿ ಅಧ್ಯಕ್ಷರು ಆಝೀಝುಲ್ಲಾ ಅಜ್ಜು ಭೇಟಿ ನೀಡಿ ಪರಿಶೀಲನ ನಡೆಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ವಕ್ಫ್ ಬೋರ್ಡ್ ನಲ್ಲಿ ಯಾವ ಯಾವ ಕ್ರಮಗಾರಿಕೆಗಳು ಉಳಿದಿದೆ ಅದನ್ನು ತುರ್ತಾಗಿ ಕ್ರಮ ಕೈಗೊಂಡು ಅಭಿವೃದ್ಧಿ ಪಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

ನಾನು ವಕ್ಫ್ ಬೋರ್ಡ್ ಅಧ್ಯಕ್ಷರಾದ ಮೇಲೆ. ನನಗೆ ಹುಣಸೂರು ತಾಲೂಕಿನ ಅಭಿವೃದ್ಧಿ ಕಾರ್ಯಗಳು. ಅನುದಾನ ನೀಡಬೇಕೆಂದು ಮನವಿ ಸಲ್ಲಿಸಿದರು ಮನವಿನ ಸ್ವೀಕರಿಸಿ ನನ್ನ ಇಲಾಖೆಯಿಂದ ಅಂತ ಅ ಅಂತಂತವಾಗಿ ಅನುದಾನವನ್ನು ಬಿಡುಗಡೆಗೊಳಸಲು ನಮ್ಮ ಸರ್ಕಾರದ ಹಾಗೂ ನಮ್ಮ ಇಲಾಖೆಯ ಸಚಿವರಿಗೆ ಕೂಡ ಮನವಿ ಸಲ್ಲಿಸಿದ್ದೇನೆ ಸರ್ಕಾರ ಅನುದಾನ ಬಿಡುಗಡೆಗೊಳಿಸಿದ ನಂತರವೇ ತಾಲೂಕಿನ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ಯಶಸ್ವಿಯಾಗಿ ಸಂಪೂರ್ಣ ಕಾಣಲು ಶ್ರಮವಹಿಸುತ್ತೇನೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಜೀದೆ ಆಲ ಕಮಿಟಿ ಅಧ್ಯಕ್ಷರಾದ ಆಯುಬ್ ಖಾನ್ ಉಪಾಧ್ಯಕ್ಷರು ಜಾವೀದ್ ಕಾರ್ಯದರ್ಶಿ ಮಜಾಜ್ ಅಹ್ಮದ್ ಸದಸ್ಯರಾದ ಫೈರೋಜ್ ಅಹ್ಮದ್ ಖಾನ್.

ಮುಶೀರ್ ಅಹ್ಮದ್ ಮುನ್ನ ಅಮೀರ್ ಪಾಷಾ ಅಜೀಜ ಅಥಾವುಲ್ಲಾ ಆನ್ಸರ್. ಮಹಮ್ಮದ್ ಅಫ್ರೋಜ್ ಷರೀಫ್ ಶಾಜಮ್ಮ ರಫೀಕ್ ಹಾಗೂ ಇನ್ನಿತರ ಹಾಜರಿದ್ದರು.

# ಬಾಲ್ಯ ವಿವಾಹ ನಿರ್ಮೂಲನೆ: ಎಲ್ಲರೂ ಕೈ ಜೋಡಿಸಿ

- ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಸಾಮಾಜಿಕ ಪಿಡುಗಾಗಿ ಪರಿಣಮಿಸಿದ ಬಾಲ್ಯ ವಿವಾಹದಿಂದಾಗಿ ಮಕ್ಕಳ ಭವಿಷ್ಯ ಹಾಳಾಗುತ್ತಿದೆ. ಆದ್ದರಿಂದ ಸರ್ಕಾರದ ಜೊತೆ ಎಲ್ಲರೂ ಸೇರಿ ಜಾಗೃತಿ ಮೂಡಿಸಿದಾಗ ಬಾಲ್ಯ ವಿವಾಹ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಅವರು ತಿಳಿಸಿದರು.

ಡಿಸೆಂಬರ್ 19ರ ಶುಕ್ರವಾರ ದಂದು ನಗರದ ಮಾಣಿಕ್ ಪ್ರಭು ಅಂಧ ಮಕ್ಕಳ ಶಾಲೆಯಲ್ಲಿ ಎಂ.ಆರ್. ಡಬ್ಲ್ಯೂ ಮತ್ತು ವಿ.ಆರ್.ಡಬ್ಲ್ಯೂಗಳಿಗೆ ಮಕ್ಕಳ ರಕ್ಷಣಾ ಕಾನೂನುಗಳ ಕುರಿತು ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹದಿಂದ ಮಕ್ಕಳ ಶಿಕ್ಷಣ ಮೊಟಕಾಗುತ್ತದಲ್ಲದೆ ಅವರ ಭವಿಷ್ಯ ನಾಶವಾಗಲಿದೆ. ಮಕ್ಕಳ ಮೇಲೆ ಅನೇಕ ರೀತಿಯಲ್ಲಿ ದುಷ್ಪರಿಣಾಮ ಉಂಟು ಮಾಡುವ ಈ ಕೆಟ್ಟ ಪದ್ಧತಿ ಬಗ್ಗೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಮಕ್ಕಳಿಗೆ ಸುರಕ್ಷಿತ ವಾತಾವರಣ ಕಲ್ಪಿಸುವುದು ಇಂದಿನ ಅಗತ್ಯವಾಗಿದೆ. ಎಲ್ಲಾ ಇಲಾಖೆಗಳ ಎಲ್ಲಾ ಹಂತದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಈ ಬಗ್ಗೆ ಅರಿಯಬೇಕು.

ಮಕ್ಕಳು, ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಗೀಳಿಗೆ ಬಿದ್ದು, ಆನ್ಲೈನ್ ವಂಚಕರ ಜಾಲಕ್ಕೆ ಬಲಿ ಆಗುತ್ತಿರುವದು ಕೂಡ ಹೆಚ್ಚಾಗುತ್ತಿದ್ದು, ಈ ಬಗ್ಗೆಯೂ ಕೂಡ ಜಾಗೃತಿ ಮೂಡಿಸಿ ಮಕ್ಕಳನ್ನು ರಕ್ಷಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ ಅವರು ಪ್ರಾಸ್ತಾವಿಕ ಮಾತನಾಡಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೊಸಗಿ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಸಂಪನ್ಮೂಲ ವ್ಯಕ್ತಿ ರಾಜೇಂದ್ರ ಅವರು ಮಕ್ಕಳ ರಕ್ಷಣಾ ಕಾನೂನುಗಳ ಕುರಿತು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣ ಇಲಾಖೆಯ ಅಧಿಕಾರಿ ಶ್ರೀದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ ಕಾರನೂರು, ಮಾಣಿಕ ಪ್ರಭು ಅಂಧಮಕ್ಕಳ ಶಾಲೆಯ ಮುಖ್ಯ ಗುರುಗಳಾದ ಆರ್.ಎಂ ಯತ್ನಳ್ಳಿ, ರಕ್ಷಣಾಧಿಕಾರಿ ಹನುಮೇಶ, ಮಕ್ಕಳ ಸಹಾಯವಾಣಿ ಸಂಯೋಜಕ ಮೋಹನ್ ಕುಮಾರ್, ರಮೇಶ್ ಅವರು ಇದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ತಿಕ್ಕಯ್ಯ ಅವರು ನಿರೂಪಿಸಿದರು. ರಕ್ಷಣಾಧಿಕಾರಿ ಅಸಾಂಸ್ಥಿಕ ಕಿರಿಲಿಂಗಪ್ಪ ಅವರು ಸ್ವಾಗತಿಸಿದರು. ಕಾನೂನು ಪರಿವೀಕ್ಷಣಾಧಿಕಾರಿ ಶಿವರಾಜ್ ಪಾಟೀಲ್ ಅವರು ವಂದಿಸಿದರು. ಹಾಗೂ ಇತರ ಸಿಬ್ಬಂದಿ ಹಾಜರಿದ್ದರು.

# ರೋಗಿಗಳ ಗುಣಮಟ್ಟದ ಚಿಕಿತ್ಸೆ

- ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ದೇಶದಲ್ಲಿ ವೈದ್ಯಕೀಯ ಸೇವೆ ಹೊಸ ಮಜಲನ್ನು ತಲುಪಿದ್ದು, ರೋಗಗಳಿಗೆ ಗುಣಮಟ್ಟದ ಸೇವೆ ತಲುಪಿಸಲು ಅತ್ಯಾಧುನಿಕ ತಂತ್ರಜ್ಞಾನ ಸದ್ಬಳಕೆಯಾಗುತ್ತಿದೆ ಎಂದು ನವದೆಹಲಿ ರಾಷ್ಟ್ರೀಯ ವೈದ್ಯಕೀಯ ಆಯೋಗದ ವೈದ್ಯಕೀಯ ಮೌಲ್ಯಮಾಪನ ಮತ್ತು ಶ್ರೇಯಾಂಕ ಮಂಡಳಿಯ ಅಧ್ಯಕ್ಷ ಡಾ. ಎಂ. ಕೆ. ರಮೇಶ ಹೇಳಿದ್ದಾರೆ.ಶುಕ್ರವಾರ ನಗರದ ಪ್ರತಿಷ್ಠಿತ ಬಿ. ಎಲ್. ಡಿ. ಡೀಮ್ಡ್ ವಿಶ್ವವಿದ್ಯಾಲಯದ 13ನೇ ಘಟಿಕೋತ್ಸವದಲ್ಲಿ ಅವರು ಘಟಿಕೋತ್ಸವ ಭಾಷಣ ಮಾಡಿದರು.ಒಂದು ಕಾಲದಲ್ಲಿ ಬರಕ್ಕೆ ಹೆಸರಾಗಿದ್ದ ವಿಜಯಪುರ ಜಿಲ್ಲೆಯಲ್ಲಿ ಇಂದು ಮಲೆನಾಡಿನ ಅನುಭವವಾಗುತ್ತಿದೆ. ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಆವರಣ ಹಚ್ಚುಹಸಿರಿನಿಂದ ಕೂಡಿದ್ದು, ವಿದ್ಯಾಭ್ಯಾಸಕ್ಕೆ ಹೇಳಿ ಮಾಡಿಸಿದಂತಿದೆ. ವೈದ್ಯಕೀಯ ಪದವಿ ಪಡೆದ ವಿದ್ಯಾರ್ಥಿಗಳಿಗೆ ಈಗ ವೃತ್ತಿ ಜೀವನದ ಹೊಸದೊಂದು ಅಧ್ಯಾಯ ಪ್ರಾರಂಭವಾಗಿದೆ. ಉನ್ನತ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ಇನ್ನೂ ಹೆಚ್ಚಾಗಿ ಅಧ್ಯಯನ ನಿರತರಾಗಬೇಕು. ವೃತ್ತಿಯಲ್ಲಿ ತೊಡಗಿಸಿಕೊಳ್ಳುವ ಯುವ ವೈದ್ಯರು ಸಹಾನುಭೂತಿ ಮತ್ತು ಕರುಣೆಯಿಂದ ರೋಗಿಗಳಿಗೆ ಚಿಕಿತ್ಸೆ ನೀಡಬೇಕು. ವೈದ್ಯಕೀಯ ಕ್ಷೇತ್ರದಲ್ಲಿ ಸಂಶೋಧನೆಗಳು ನಿರಂತರವಾಗಿರಬೇಕು ಎಂದು ಅವರು ಹೇಳಿದರು.

ದೇಶದಲ್ಲಿ ಮಾಹಿತಿ ಮತ್ತು ತಂತ್ರಜ್ಞಾನ ಬಳಕೆದಾರರ ಸಂಖ್ಯೆ ಹೆಚ್ಚಾಗುತ್ತಿದ್ದು, ಇಂಟರ್ನೆಟ್ ಸುಧಾರಣೆಯಿಂದಾಗಿ ರೋಗಿಗಳನ್ನು ದೂರದಿಂದಲೇ ಟೆಲಿಮೆಡಿಸಿನ್ ಮೂಲಕ ಚಿಕಿತ್ಸೆ ನೀಡಬಹುದಾಗಿದೆ. ಡಿಜಿಟಲ್ ವೇದಿಕೆಗಳು ರೋಗಿಗಳು ವೈದ್ಯರನ್ನು ಸುಲಭವಾಗಿ ತಲುಪಲು ನೆರವಾಗಿವೆ. ಕೃತಕ ಬುದ್ದಮತ್ತೆ(ಆರ್ಟಿಫಿಸಿಯಲ್ ಇಂಟಲಿಜೆನ್ಸ್) ಬಳಕೆಯಿಂದಾಗಿ ರೋಗಗಳ ಗುಣಲಕ್ಷಣಗಳನ್ನು ನಿಖರವಾಗಿ ಗುರುತಿಸಿ ಚಿಕಿತ್ಸೆ ನೀಡಲು ನೆರವಾಗಿವೆ. ರೊಬೊಟಿಕ್ ತಂತ್ರಜ್ಞಾನ ಸರಳ, ಸುಲಭ, ಕಡಿಮೆ ವೆಚ್ಚ ಮತ್ತು ಹೆಚ್ಚು ಗಾಯವಿಲ್ಲದೇ ಶಸ್ತ್ರಚಿಕಿತ್ಸೆ ನಡೆಸಲು ವರದಾನವಾಗಿದೆ. ಜಿನೊಮಿಕ್ಸ್ ಮತ್ತು ಪ್ರಿಸೀಶನ್ ಮೆಡಿಸೀನ್ ತಂತ್ರಜ್ಞಾನ, ನ್ಯಾನೊಟೆಕ್ನಾಲಜಿ, ರಿಜನರೇಟಿವ್ ಮೆಡಿಸೀನ್ ಮತ್ತು ಸ್ಟಮ್ ಸೆಲ್ ಥೆರಪಿ, ಹೆಲ್ತ್ ಕೇರ್ ಡಾಟಾ ವಿಶ್ಲೇಷಣೆ, ಮೆಡಿಕಲ್ ಡಿವೈಸಿಸ್ ಮತ್ತು ವಿಯರೇಬಲ್ ಟೆಕ್ನಾಲಜಿ ವೈದ್ಯಕೀಯ ಕ್ಷೇತ್ರದಲ್ಲಿ ರೋಗಗಳ ತ್ವರಿತ ಪತ್ತೆ, ಚಿಕಿತ್ಸೆ ಮತ್ತು ರೋಗಗಳಿಂದ ಗುಣಮುಖರಾಗಲು ಅನುಕೂಲ ಒದಗಿಸಿವೆ. ಹೀಗಾಗಿ ಯುವ ವೈದ್ಯರು ಇವುಗಳನ್ನು ಸದ್ಬಳಕೆ ಮಾಡಿಕೊಂಡು ಚಿಕಿತ್ಸೆ ಅಗತ್ಯವಿರುವ ರೋಗಿಗಳಿಗೆ ನೆರವಾಗಬೇಕು. ಮೊಬೈಲ್ ಮತ್ತು ಅಂತರ್ಜಾಲ ಬಳಕೆ ಗೀಳಿನಿಂದ ಹೊರಬರಬೇಕು. ತಂತ್ರಜ್ಞಾನದ ಸದ್ಬಳಕೆಯಾಗಬೇಕು. ವೈದ್ಯರು ಸಂಶೋಧನೆ ನಿರತರಾಗಿ ವೃತ್ತಿನೈಪುಣ್ಯತೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ವಿವಿ ಪ್ರಭಾರ ಕುಲಪತಿ ಡಾ. ಅರುಣ ಚಂ. ಇನಾಮದಾರ ವಾರ್ಷಿಕ ವರದಿ ಮಂಡಿಸಿದರು. ಕಳೆದ ಒಂದು ವರ್ಷದಲ್ಲಿ ವಿವಿಯಲ್ಲಿ ನಡೆದ ಸಂಶೋಧನೆಗಳು, ಲಭಿಸಿದ ಮಾನ್ಯತೆಗಳು, ಸಿಕ್ಕ ಪುರಸ್ಕಾರಗಳು, ಮಾನ್ಯತೆಗಳು, ವೈದ್ಯರ ಸಾಧನೆಗಳು, ಮಾಡಿಕೊಳ್ಳಲಾದ ಹೊಸ ಒಡಂಬಡಿಕೆಗಳು, ಮುಂದೆ ಕೈಗೊಳ್ಳಲಿರುವ ಯೋಜನೆಗಳ ಕುರಿತು ಮಾಹಿತಿ ನೀಡಿದರು. ಡೀಮ್ಡ್ ವಿವಿ ಕುಲಾಧಿಪತಿ ಬಿ. ಎಂ. ಪಾಟೀಲ ಘಟಿಕೋತ್ಸವದ ಪದವಿ ಪ್ರಧಾನ ಮಾಡಿದರು.

ಈ ಘಟಿಕೋತ್ಸವದಲ್ಲಿ ಒಟ್ಟು 502 ಪದವಿ ಪ್ರಧಾನ ಮಾಡಲಾಯಿತು. ಅವುಗಳಲ್ಲಿ 11 ಪಿ.ಎಚ್.ಡಿ., 3 ಎಂ.ಸಿಎಚ್(ಯುರಾಲಜಿ), 2 ಡಿ.ಎಂ.(ಕಾರ್ಡಿಯಾಲಜಿ), 239 ವೈದ್ಯಕೀಯ ಸ್ನಾತಕೋತ್ತರ ಪದವಿಗಳು, 3 ಫೆಲೋಶಿಪ್ಗಳು, 156 ಎಂಬಿಬಿಎಸ್ ಪದವಿಗಳು, 10 ಸ್ನಾತಕೋತ್ತರ ಅಲೈಡ್ ಹೆಲ್ತ್ ಪದವಿಗಳು, 19 ವಿಜ್ಞಾನ ಮತ್ತು ತಂತ್ರಜ್ಞಾನ ಸ್ನಾತಕೋತ್ತರ ಪದವಿಗಳು ಮತ್ತು 13 ಬ್ಯಾಚುಲರ್ ಆಫ್ ಫಿಸಿಯೋಥೆರಪಿ 46 ಅಲೈಡ್ ವಿಜ್ಞಾನ ಪದವಿಗಳು ಸೇರಿವೆ.

ಇದೇ ವೇಳೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ 28 ಚಿನ್ನದ ಪದಕಗಳು ಮತ್ತು 3 ನಗದು ಬಹುಮಾನಗಳನ್ನು ಪ್ರದಾನ ಮಾಡಲಾಯಿತು. ವೈದ್ಯಕೀಯ ಸ್ನಾತ–ಕೋತ್ತರ ವಿಭಾಗದಲ್ಲಿ ಡಾ. ನರ್ಲಾ ಸುರೇಖಾ ಮತ್ತು ಡಾ. ಶಂಕರ್ ನಾರಾಯಣನ್ ಆರ್ ತಲಾ ಎರಡು ಚಿನ್ನದ ಪದಕಗಳನ್ನು ಪಡೆದರೆ, ಪದವಿ ವೈದ್ಯಕೀಯ ವಿಭಾಗದಲ್ಲಿ ಡಾ. ಯಶ ಆರ್ಯ ಐದು ಚಿನ್ನದ ಪದಕ ಮತ್ತು ಒಂದು ನಗದು ಬಹುಮಾನ, ಡಾ. ನಿಶ್ಚಿತಾ ಸಿ. ರಾಜ ಮೂರು ಚಿನ್ನದ ಪದಕ ಮತ್ತು ಒಂದು ನಗದು ಬಹುಮಾನ, ಡಾ. ಸಲೋನಿ ವರ್ಮಾ ಎರಡು ಚಿನ್ನದ ಪದಕ ಮತ್ತು ಒಂದು ನಗದು ಬಹುಮಾನ, ಡಾ. ಶಿರೀಷಾ ಎಂ. ಎಸ್. ಎರಡು ಚಿನ್ನದ ಪದಕಗಳನ್ನು ಪಡೆದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)